ಸಂಪುಟ: 21, ಸಂಚಿಕೆ: 155, ಪುಟಗಳು: 8, ಗುರುವಾರ, 14 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com


ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಗುರುವಾರ 14, ಮಾರ್ಚ್ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಪಾಲ್ಗುಣ ಮಾಸ, ಶುಕ್ಲ ಪಕ್ಷ,
- ತಿಥಿ : ಪಂಚಮಿ
- ನಕ್ಷತ್ರ: ಅಶ್ವಿನಿ
- ರಾಹುಕಾಲ- 01:57 PM 03:28 PM
- ಗುಳಿಕಕಾಲ - 09:24 AM 10:55 AM
- ಯಮಗಂಡಕಾಲ - 06:22 AM 07:53 AM

# ಶೀತಲಸಮರ ಶುರು

## ಬಿಎಸ್‌ವೈ ಪುತ್ರ ವಿರುದ್ಧ ಸ್ವತಃ ಈಶ್ವರಪ್ಪ ಸ್ಪರ್ಧೆಗೆ ಮಾಸ್ಟರ್ ಪ್ಲ್ಯಾನ್



**ಬೆಂಗಳೂರು:** ಹಾವೇರಿ-ಗದಗ ತಪ್ಪಿದ ಟಿಕೆಟ್.. ಈಶ್ವರಪ್ಪ ಬಿಎಸ್ ವೈ ಮೇಲೆ ಗರಂ.. ಶಿವಮೊಗ್ಗ ಕ್ಷೇತ್ರದಿಂದ ಸ್ಪರ್ಧೆಗೆ ಈಶ್ವರಪ್ಪ ಪ್ಲ್ಯಾನ್.. ಪಕ್ಷೇತರ ಅಭ್ಯರ್ಥಿ ಆಗಿ ಕಣಕ್ಕೆ ಇಳಿಯಲು ಈಶ್ವರಪ್ಪಗೆ ಒತ್ತಡ.. ಬಿಎಸ್ ವೈ ಪುತ್ರರ ವಿರುದ್ಧ ಈಶ್ವರಪ್ಪ ಸ್ಪರ್ಧೆಗೆ ಮಾಸ್ಟರ್ ಪ್ಲ್ಯಾನ್.. ಈಶ್ವರಪ್ಪ ಪಕ್ಷದಲ್ಲೇ ಇರುತ್ತಾರೆ ಸಂಸದ ಬಿ. ವೈ ರಾಘವೇಂದ್ರ ಸ್ಪಷ್ಟನೆ..

ಹಾವೇರಿ-ಗದಗ ಲೋಕಸಭೆ ಕ್ಷೇತ್ರದ ಮೇಲೆ ಕಣ್ಣಿಟ್ಟಿದ್ದ ಈಶ್ವರಪ್ಪ ಪುತ್ರ ಕಾಂತೇಶ್ ಗೆ ತೀವ್ರ ನಿರಾಸೆಯಾಗಿದೆ. ಬಿಜೆಪಿ ಹಿರಿಯ ನಾಯಕ ಕೆ.ಎಸ್ ಈಶ್ವರಪ್ಪ ಪುತ್ರನಿಗೆ ಟಿಕೆಟ್ ಕೊಡಿಸಲು ಎಲ್ಲಿಲ್ಲದ ಕಸರತ್ತು ನಡೆಸಿದ್ದರು. ಅವರ ಪ್ರಯತ್ನಕ್ಕೆ ಫಲ ಸಿಗಲಿಲ್ಲ. ಮಗನಿಗೆ ಟಿಕೆಟ್ ಬಿಎಸ್ ವೈ ಅವರು ಕೊಡಿಸಿಲ್ಲ ಎನ್ನುವ ಈಶ್ವರಪ್ಪ ಅಸಮಾಧಾನ ಹೊರಹಾಕಿದ್ದಾರೆ.. ಈಶ್ವರಪ್ಪ ಅವರು ಶಿವಮೊಗ್ಗ ಲೋಕಸಭೆ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕೆ ಇಳಿಯಲು ಮುಂದಾಗಿದ್ದಾರೆ.

ಪುಟ 8

## ಅನಂತಕುಮಾರ್ ಹೆಗಡೆ ಅಪ್ಪ ಬಂದರೂ ಸಂವಿಧಾನ ಬದಲಾಯಿಸಲು ಅಸಾಧ್ಯ

# ರಾಜುಗೌಡ ಟೀಕೆ



**ಯಾದಗಿರಿ:** ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ ಉತ್ತರ ಕನ್ನಡ ಕ್ಷೇತ್ರದಲ್ಲಿ ಆಯಕ್ಟಿವ್ ಆದ ಬಿಜೆಪಿ ಸಂಸದ ಅನಂತಕುಮರ್ ಹಗಡೆ ಸಂವಿಧಾನ ಬದಲಾವಣೆಯ ಹೇಳಿಕೆ ನೀಡಿ ಭಾರೀ ಟೀಕೆಗೆ ಗುರಿಯಾಗಿದ್ದಾರೆ. ಸ್ವಪಕ್ಷ ನಾಯಕರು ಈ ಹೇಳಿಕೆಯಿಂದ ಅಂತರ ಕಾಯ್ದುಕೊಂಡಿದ್ದಾರೆ. ಈ ನಡವೆ ರಾಜ್ಯ ಬಿಜೆಪಿ ಉಪಾಧ್ಯಕ್ಷ ರಾಜುಗೌಡ ಅವರು ಹೆಗಡೆ ವಿರುದ್ಧ ವಾಗ್ದಾಳಿ ನಡೆಸಿದ್ದು, ಅನಂತಕುಮಾರ್ ಹೆಗಡೆ ಅಲ್ಲ, ಅವರ ಅಪ್ಪ ಬಂದರೂ ಸಂವಿಧಾನ ಬದಲಾವಣೆ ಮಾಡಲು ಆಗುವುದಿಲ್ಲ ಎಂದು ಹೇಳಿದ್ದಾರೆ.

ಯಾದಗಿರಿ ನಗರದಲ್ಲಿ ಮಾತನಾಡಿದ ರಾಜುಗೌಡ, ಅನಂತಕುಮಾರ್ ಹೆಗಡೆ ಅಲ್ಲ ಅವರಪ್ಪ ಬಂದರೂ ಸಂವಿಧಾನ ಬದಲಾವಣೆ ಮಾಡಲು ಆಗಲ್ಲ. ಇದೆ ತರಹ 2018 ರಲ್ಲಿ ವಿವಾದಾತ್ಮಕ ಹೇಳಿಕೆ ನೀಡಿ ನಮ್ಮ ಪಕ್ಷಕ್ಕೆ ಪೂರ್ಣ ಬಹುಮತ ಬರೋದ್ದಕ್ಕೆ ಕಲ್ಲು ಹಾಕಿದ್ದರು. ಹಿಂದುತ್ವ, ಮೋದಿ ಗಾಳಿಯಲ್ಲಿ ಸಂಸದರಾಗುತ್ತಾರೆ.

ಪುಟ 8

## ಸಂಕ್ಷಿಪ್ತ ಸುದ್ದಿ

### ಹುಲಿ ದಾಳಿಯಿಂದ ಪವಾಡ ಸದೃಶ ರೀತಿಯಲ್ಲಿ ಪಾರಾದ ಬಾಲಕ

**ಉತ್ತರಾಖಂಡ:** ಇನ್ನೇನು ಹುಲಿ ಬಾಯಿಗೆ ಸಿಕ್ಕಿ ಜೀವ ಬಿಡುತ್ತಾನೆ ಅನ್ನುವಷ್ಟರಲ್ಲಿ ಹೇಗೋ ದಾಳಿಯಿಂದ ಬಾಲಕ ಪಾರಾಗಿದ್ದ. ಈ ಘಟನೆ ಉತ್ತರಾಖಂಡದಲ್ಲಿ ನಡೆದಿದೆ, 17 ವರ್ಷದ ಬಾಲಕ ಕಾಲೇಜಿನಿಂದ ಮನೆಗೆ ಹೋಗುತ್ತಿರುವಾಗ ಹುಲಿ ದಾಳಿ ನಡೆಸಿದೆ. ರಾಮನಗರ ಪಟ್ಟಣದ ನಿವಾಸಿ ಅಂಕಿತ್ ಅವರು ಮಾರಣಾಂತಿಕ ದಾಳಿಯ ನಂತರ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದ, ಈಗ ಎಲ್ಲರಂತೆ ಜೀವನ ನಡೆಸುತ್ತಿದ್ದಾನೆ.



ಪುಟ 2

### ವಿಡಿಯೋಗ್ರಾಫರ್ ಮದುವೆ ಬಂದು ಅಪ್ರಾತ್ರೆಯೊಂದಿಗೆ ಪರಾರಿ

**ಬಿಹಾರ:** ಮದುವೆ ಚಿತ್ರೀಕರಣಕ್ಕೆಂದು ಬಂದ ವಿಡಿಯೋಗ್ರಾಫರ್ ವರನ ಅಪ್ರಾಪ್ತ ತಂಗಿಯೊಂದಿಗೆ ಪರಾರಿಯಾಗಿರುವ ಘಟನೆ ಬಿಹಾರದಲ್ಲಿ ನಡೆದಿದೆ. ಬಿಹಾರದ ಮುಜಾಫರ್ ಪುರದಲ್ಲಿ ಮದುವೆಗೆ ಬಂದಿದ್ದ ವಿಡಿಯೋಗ್ರಾಫರ್ ವರನ ಅಪ್ರಾಪ್ತ ಸಹೋದರಿಯೊಂದಿಗೆ ಓಡಿ ಹೋಗಿದ್ದಾನೆ. ಈ ಘಟನೆ ಬೆಳಕಿಗೆ ಬಂದ ನಂತರ ಬಾಲಕಿಯ ತಂದೆ ಅಹಿಯಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಮಾರ್ಚ್ 6 ರಂದು ಮಗಳು ಮನೆಯಿಂದ ಮಾರುಕಟ್ಟೆಗೆ ಹೋಗಿದ್ದಳು ಎಂದು ಬಾಲಕಿಯ ತಂದೆ ಪೊಲೀಸರಿಗೆ ತಿಳಿಸಿದ್ದಾರೆ.

ಪುಟ 2

### ಮಲೆಮಹದೇಶ್ವರ ದೇಗುಲದಲ್ಲಿ ಬರೋಬ್ಬರಿ ಆದಾಯ ಸಂಗ್ರಹ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಪ್ರಸಿದ್ಧ ಯಾತ್ರಾ ಸ್ಥಳವಾದ ಮಲೆ ಮಹದೇಶ್ವರ ಬೆಟ್ಟದ ಮಲೆಮಹದೇಶ್ವರ ದೇವಸ್ಥಾನದಲ್ಲಿ ಮಾರ್ಚ್ 6 ರಿಂದ 11 ರವರೆಗೆ ನಡೆದ ಶಿವರಾತ್ರಿ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಬರೋಬ್ಬರಿ 3.24 ಕೋಟಿ ರೂ. ಆದಾಯ ಸಂಗ್ರಹವಾಗಿದೆ.

ಪುಟ 2

## ಕೇಂದ್ರ ಸರ್ಕಾರದ ಪೌರತ್ವ ತಿದ್ದುಪಡಿ ಕಾಯ್ದೆ

# ಹಿಂಪಡೆಯುವ ಮಾತೇ ಇಲ್ಲ

**ನವದೆಹಲಿ:** ಕೇಂದ್ರ ಸರ್ಕಾರವು ಪೌರತ್ವ ತಿದ್ದುಪಡಿ ಕಾಯ್ದೆಯನ್ನು (ಸಿಎಎ) ಇಡೀ ದೇಶದಲ್ಲಿ ಜಾರಿಗೆ ತಂದಿದೆ. ಆದರೆ ವಿರೋಧ ಪಕ್ಷಗಳು ಸಿಎಎ ವಿರುದ್ಧ ನಿರಂತರವಾಗಿ ಧ್ವನಿ ಎತ್ತುತ್ತಿವೆ. ಪ್ರತಿಪಕ್ಷಗಳಿಗೆ ಬೇರೆ ಕೆಲಸವಿಲ್ಲ, ನಾವು ಸಿಎಎಯನ್ನು ಹಿಂಪಡೆಯುವ ಮಾತೇ ಇಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಸಿಎಎ ಮೂಲಕ ಮತಗಳನ್ನು ಪಡೆಯುವ ತಂತ್ರವನ್ನು ಬಿಜೆಪಿ ಮಾಡುತ್ತಿದೆ ಎನ್ನುವ ವಿರೋಧಪಕ್ಷಗಳ ಮಾತಿಗೆ ಶಾ ತಿರುಗೇಟು ನೀಡಿದ್ದು ಈ ರೀತಿ ಹೇಳುವುದು ಅವರ ಇತಿಹಾಸ, ಆದರೆ ಸಿಎಎ ಜಾರಿಗೆ ತಂದಿರುವುದು ಮೋದಿ ಇತಿಹಾಸ, ಮೋದಿಯವರ ಪ್ರತಿ ಭರವಸೆಯೂ ಈಡೇರಿದೆ ಎಂದಿದ್ದಾರೆ.

ಸರ್ಜಿಕಲ್ ಸ್ಟ್ರೈಕ್ ಹಾಗೂ ಹಾಗೂ ವೈಮಾನಿಕ ದಾಳಿಯಲ್ಲೂ ರಾಜಕೀಯ ಹುಡುಕಿದ್ದಾರೆ, ಭಯೋತ್ಪಾದನೆ ವಿರುದ್ಧ ಕ್ರಮ ಕೈಗೊಳ್ಳಲೇಬೇಕಲ್ಲವೇ , ಜಮ್ಮು ಮತ್ತು ಕಾಶ್ಮೀರದಲ್ಲಿ 370ನೇ ವಿಧಿಯನ್ನು ರದ್ದುಪಡಿಸಿದ ಬಳಿಕವೂ ಇದನ್ನು ರಾಜಕೀಯದೊಂದಿಗೆ ಜೋಡಿಸಲಾಗಿತ್ತು, ಆದರೆ ಇದರ ಬಗ್ಗೆ 1950ರಿಂದಲೂ ಹೇಳಲಾಗುತ್ತಿದೆ. ಸಿಎಎಯನ್ನು ಪಶ್ಚಿಮ ಬಂಗಾಳದಲ್ಲಿ ಜಾರಿ ಮಾಡುವುದಿಲ್ಲ ಎನ್ನುವ ಮಮತಾ ಬ್ಯಾನರ್ಜಿ ಹೇಳಿಕೆ ಕುರಿತು ಮಾತನಾಡಿದ ಶಾ, ಬಂಗಾಳದಲ್ಲೂ ಬಿಜೆಪಿ ಅಧಿಕಾರಕ್ಕೆ ಬಂದು ಒಳನುಸುಳುವಿಕೆಯನ್ನು ನಿಲ್ಲಿಸುವ ಸಮಯ ದೂರವಿಲ್ಲ ಎಂದು ಹೇಳಿದರು.

ನಮ್ಮ ದೇಶದಲ್ಲಿ ಭಾರತೀಯ ಪೌರತ್ವವನ್ನು ಖಚಿತಪಡಿಸಿಕೊಳ್ಳುವುದು ನಮ್ಮ ಸಾರ್ವಭೌಮ ಹಕ್ಕು, ನಾವು ಇದರಲ್ಲಿ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಹೇಳಿದರು.

ಪುಟ 2



### ಸಿಎಎ ಎಂದರೇನು ?

**ಪೌರತ್ವ ತಿದ್ದುಪಡಿ ಮಸೂದೆ ಭಾರತದ ನೆರೆಯ ದೇಶಗಳಾದ ಬಾಂಗ್ಲಾದೇಶ, ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದಲ್ಲಿ ಧಾರ್ಮಿಕವಾಗಿ ದೌರ್ಜನ್ಯಕ್ಕೊಳಗಾಗಿ 2014ರ ಡಿಸೆಂಬರ್ 31ಕ್ಕೆ ಮುಂಚೆ ಭಾರತಕ್ಕೆ ವಲಸೆ ಅಥವಾ ನಿರಾಶ್ರಿತರಾಗಿ ಬಂದ ಆರು ಅಲ್ಪಸಂಖ್ಯಾತ ಸಮುದಾಯಗಳ ಜನರಿಗೆ ಭಾರತೀಯ ಪೌರತ್ವ ಹೊಂದುವ ಅವಕಾಶ ಕೊಡುತ್ತದೆ. ಆ ಮೂರು ಮುಸ್ಲಿಮ್ ದೇಶಗಳಲ್ಲಿನ ಹಿಂದೂ, ಕ್ರೈಸ್ತ, ಸಿಖ್, ಜೈನ, ಬೌದ್ಧ ಮತ್ತು ಪಾರ್ಸಿ ಸಮುದಾಯಗಳ ಜನರಿಗೆ ಈ ಅವಕಾಶ ಕೊಡಲಾಗಿದೆ.**

## ಧಾರವಾಡವೂ ಇಲ್ಲ, ಹಾವೇರಿಗೂ ಸಲ್ಲ!

# ಶೆಟ್ಟರ್ ಮುಂದಿನ ನಡೆ?

**ಹುಬ್ಬಳ್ಳಿ:** ಲೋಕಸಭೆ ಚುನಾವಣೆಗೆ ಬಿಜೆಪಿ ಅಭ್ಯರ್ಥಿಗಳ ಎರಡನೇ ಪಟ್ಟಿ ಬಿಡುಗಡೆಯಾಗಿದ್ದು ಕರ್ನಾಟಕದ 20 ಕ್ಷೇತ್ರಗಳ ಅಭ್ಯರ್ಥಿಗಳ ಹೆಸರು ಪ್ರಕಟಗೊಂಡಿದೆ. ಧಾರವಾಡದಲ್ಲಿ ಹಾಲಿ ಸಂಸದ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಮತ್ತೆ ಮಣೆ ಹಾಕಲಾಗಿದೆ. ಹಾವೇರಿಯಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರನ್ನು ಕಣಕ್ಕಿಳಿಸುವುದಾಗಿ ಬಿಜೆಪಿ ಘೋಷಿಸಿದೆ. ಇದರೊಂದಿಗೆ, ಕಾಂಗ್ರೆಸ್ ತೊರೆದು ಮತ್ತೆ ಬಿಜೆಪಿ ಸೇರಿದ್ದ ಮಾಜಿ ಸಿಎಂ ಜಗದೀಶ್ ಶೆಟ್ಟರ್‌ಗೆ ಮತ್ತೆ ಹಿನ್ನಡೆಯಾದಂತಾಗಿದೆ.

ಧಾರವಾಡ ಲೋಕಸಭಾ ಕ್ಷೇತ್ರದ ಟಿಕೆಟ್ ಮೇಲೆ ಶೆಟ್ಟರ್ ಕಣ್ಣಿಟ್ಟಿದ್ದರು. ಒಂದು ವೇಳೆ ಧಾರವಾಡದಿಂದ ಸಿಗದಿದ್ದರೆ ಹಾವೇರಿ ಕ್ಷೇತ್ರ ಟಿಕೆಟ್ ನೀಡುವಂತೆ ಮನವಿಯನ್ನೂ ಮಾಡಿದ್ದರು. ಈಗ ಇತ್ತ ಧಾರವಾಡವೂ ಇಲ್ಲ, ಅತ್ತ ಹಾವೇರಿಯೂ ಇಲ್ಲ ಎಂಬಂತಾಗಿದೆ ಅವರ



ಪರಿಸ್ಥಿತಿ. ಲೋಕಸಭೆ ಚುನಾವಣೆಯಲ್ಲಿ ಟಿಕೆಟ್ ಕೊಡುತ್ತೇವೆ ಎಂಬ ಬಿಜೆಪಿ ನಾಯಕರ ಭರವಸೆ ಮೇರೆಗೆ ಶೆಟ್ಟರ್ ಘರ್ ವಾಪ್ಸಿ ಆಗಿದ್ದರು. ಪಟ್ಟಿ ಬಿಡುಗಡೆಯಾಗುವ ಕೊನೆಯ ಕ್ಷಣದ ವರೆಗೂ ಟಿಕೆಟ್ ಸಿಗುವ ವಿಶ್ವಾಸದಲ್ಲಿದ್ದರು.

ಅಭ್ಯರ್ಥಿಗಳ ಪಟ್ಟಿ ಬಿಡುಗಡೆಯಾಗುತ್ತಿದ್ದಂತೆಯೇ ರಾಯಚೂರು ಪ್ರವಾಸದಲ್ಲಿದ್ದ ಶೆಟ್ಟರ್, ಅರ್ಧಕ್ಕೆ ಪ್ರವಾಸ ಮೊಟಕುಗೊಳಿಸಿ ವಾಪಸ್ ಆಗಿದ್ದಾರೆ. ಇಂದು ಬೆಂಗಳೂರಿಗೆ ಪ್ರಯಾಣ ಬೆಳಸುವ ಸಾಧ್ಯತೆ ಇದೆ. ಮಾಜಿ ಸಿಎಂ ಯಡಿಯೂರಪ್ಪ ಕೂಡಾ ಶೆಟ್ಟರ್ ಪರ ಲಾಬಿ ಮಾಡಿದ್ದರು. ಹೀಗಾಗಿ ಹಿರಿಯ ನಾಯಕರನ್ನು ಶೆಟ್ಟರ್ ಭೇಟಿ ಮಾಡುವ ಸಾಧ್ಯತೆ ಇದೆ.

ಕಳೆದ ವರ್ಷ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಟಿಕೆಟ್ ದೊರೆಯದ ಕಾರಣ ಅಸಮಾಧಾನಗೊಂಡಿದ್ದ ಶೆಟ್ಟರ್ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದರು. ನಂತರ ಕಾಂಗ್ರೆಸ್ ಟಿಕೆಟ್ ನಿಂದ ಹುಬ್ಬಳ್ಳಿ-ಧಾರವಾಡ ಕ್ಷೇತ್ರದಿಂದ ಸ್ಪರ್ಧಿಸಿ ಬಿಜೆಪಿಯ ಮಹೇಶ್ ಟೆಂಗಿನಾಯಿ ವಿರುದ್ಧ ಸೋಲನುಭವಿಸಿದ್ದರು. ನಂತರ ಅವರನ್ನು ಕಾಂಗ್ರೆಸ್ ಪಕ್ಷವು ವಿಧಾನಪರಿಷತ್ ಸದಸ್ಯರನ್ನಾಗಿ ಮಾಡಿತ್ತು.

ಪುಟ 8

## ಕಾಲಿಂದ ಒದ್ದು ಅಂಬುಲೆನ್ಸ್ ಚಾಲಕನ ಮೇಲೆ ಬೆಂಗಳೂರು ದಂಪತಿ ಹಲ್ಲೆ!

# ಬಂಧನ, ಬಿಡುಗಡೆ

**ಬೆಂಗಳೂರು:** ಆ ದಂಪತಿ ಬೆಂಗಳೂರು ಮೂಲದವರು. ಕುಟುಂಬ ಸಮೇತ ಧರ್ಮಸ್ಥಳ ಸೇರಿದಂತೆ ಸುತ್ತಮುತ್ತಲಿನ ಧಾರ್ಮಿಕ ಪ್ರದೇಶಗಳಿಗೆ ಭೇಟಿ ಕೊಡಲು ಬಂದಿದ್ದರು. ಧರ್ಮಸ್ಥಳ ಸೇರಿದಂತೆ ವಿವಿಧ ದೇವಸ್ಥಾನಗಳ ದರ್ಶನದ ಬಳಿಕ ಬೆಂಗಳೂರಿಗೆ ವಾಪಸ್ ಆಗುತ್ತಿದ್ದರು. ಆದರೆ ರೋಡ್ ರೇಗ್ ನಿಂದಾಗಿ ದಂಪತಿ ಪೊಲೀಸರ ವಶವಾಗಿದ್ದಾರೆ!



ಬೆಂಗಳೂರಿನಿಂದ ಬಂದಿದ್ದ ಶರತ್ ಕುಮಾರ್ ದಾರಿಯಲ್ಲಿ ಆಂಬುಲೆನ್ಸ್ ಚಾಲಕನಿಗೆ ಕಾಲಿನಿಂದ ಒದ್ದು ಹಲ್ಲೆ ಮಾಡಿದ್ದಾರೆ. ಈತನ ಪತ್ನಿ ಶ್ರುತಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಈ ರೀತಿಯ ಗಲಾಟೆಗೆ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲೂಕಿನ ಲಾಯಿಲ ಬಳಿ ನೆರೆದಿದ್ದ ಜನರು ಸಾಕ್ಷಿಯಾಗಿದ್ದಾರೆ.

ಪುಟ 2




## ನಾಲ್ಕು ಅಂತಸ್ತಿನ ಕಟ್ಟಡಕ್ಕೆ ಬೆಂಕಿ

# 4 ಮಂದಿ ಸಜೀವ ದಹನ

ದೆಹಲಿ: ದೆಹಲಿಯ ಗೀತಾ ಕಾಲೋನಿಯಲ್ಲಿ ನಾಲ್ಕು ಅಂತಸ್ತಿನ ಕಟ್ಟಡದಲ್ಲಿ ಇದ್ದಕ್ಕಿದ್ದಂತೆ ಬೆಂಕಿ ಕಾಣಿಸಿಕೊಂಡ ಪರಿಣಾಮ ಇಬ್ಬರು ಮಕ್ಕಳು ಸೇರಿ ನಾಲ್ಕು ಮಂದಿ ಸಜೀವ ದಹನವಾಗಿದ್ದಾರೆ. ಪಾರ್ಕಿಂಗ್ ಪ್ರದೇಶದಿಂದ ಬೆಂಕಿ ಹಬ್ಬುತ್ತಾ ಇಡೀ ಕಟ್ಟಡವನ್ನೇ ಆವರಿಸಿಕೊಂಡಿತ್ತು, ಆಗ ಹೊಗೆ ನೋಡಿ ಅಕ್ಕಪಕ್ಕದ ಮನೆಯವರು ತಕ್ಷಣ ಅಗ್ನಿ ಶಾಮಕ ಠಾಣೆಗೆ ಕರೆ ಮಾಡಿ ವಿಷಯ ತಿಳಿಸಿದರು.ತಕ್ಷಣವೇ ಅಗ್ನಿಶಾಮಕ ದಳ ತಂಡ ಸ್ಥಳಕ್ಕೆ ಆಗಮಿಸಿ ತುಂಬಾ ಹೊತ್ತಿನ ಬಳಿಕ ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು. ಈ ಅಪಘಾತದಲ್ಲಿ 4 ಮಂದಿ ಸಾವನ್ನಪ್ಪಿದ್ದಾರೆ. ಮೃತರಲ್ಲಿ ಪತಿ-ಪತ್ನಿಯರ ಜೊತೆಗೆ ಇಬ್ಬರು ಸಹೋದರಿಯರು ಕೂಡ ಮೃತಪಟ್ಟಿದ್ದಾರೆ. ಬೆಳಗ್ಗೆ 5.22ರ ಸುಮಾರಿಗೆ ಘಟನೆ ನಡೆದಿದೆ, ಮೃತರನ್ನು ಮನೋಜ್ (30), ಸುಮನ್ (28), ಇಬ್ಬರು ಮಕ್ಕಳು ಸಾವನ್ನಪ್ಪಿದ್ದಾರೆ.



ಬಾಂಗ್ಲಾದೇಶದಲ್ಲೂ ಅವಘಢ: ಢಾಕಾದ ಆರು ಅಂತಸ್ತಿನ ಕಟ್ಟಡದಲ್ಲಿ ಅಗ್ನಿ ಅವಘಡ, 43 ಮಂದಿ ಸಾವು, ಹಲವರಿಗೆ ಗಾಯ ಬಾಂಗ್ಲಾದೇಶದ ಢಾಕಾದಲ್ಲಿರುವ 6 ಅಂತಸ್ತಿನ ಶಾಂಪಿಂಗ್ ಕಾಂಪ್ಲೆಕ್ಸ್ ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡು 43 ಮಂದಿ ಸಜೀವ ದಹನವಾಗಿರುವ ಹೃದಯ ವಿದ್ರಾವಕ ಘಟನೆ ನಡೆದಿದೆ.

ಪುಟ 2

## ತುಕಾಲಿ ಸಂತೋಷ್ ಕಾರು ಅಪಘಾತ ಪ್ರಕರಣ

# ಚಿಕಿತ್ಸೆ ಫಲಿಸದೆ ಆಟೋ ಚಾಲಕ ಸಾವು

**ಕುಣಿಗಲ್:** ತುಕಾಲಿ ಸಂತೋಷ್ ಅವರು ಇತ್ತೀಚೆಗೆ ಹೊಸ ಕಾರು ಖರೀದಿಸಿದ್ದು ಸಾಕಷ್ಟು ಸುದ್ದಿ ಆಗಿತ್ತು. ಕನಸು ನನಸಾಯಿತು ಎಂದು ಹೇಳಿಕೊಂಡಿದ್ದರು. ಮಾರ್ಚ್ 13ರ ಸಂಜೆ ಈ ಕಾರು ಅಪಘಾತಕ್ಕೆ ಒಳಗಾಗಿತ್ತು. ಆಟೋ ಹಾಗೂ ತುಕಾಲಿ ಸಂತೋಷ್ ಕಾರಿನ ಮಧ್ಯೆ ಅಪಘಾತ ಸಂಭವಿಸಿತ್ತು. ತೀವ್ರವಾಗಿ ಗಾಯಗೊಂಡ ಆಟೋ ಚಾಲಕ ಜಗದೀಶ್ ಅವರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಆದರೆ, ಆ ವ್ಯಕ್ತಿ ಚಿಕಿತ್ಸೆ ಫಲಕಾರಿಯಾಗದೇ ಅವರು ಮೃತಪಟ್ಟಿದ್ದಾರೆ.




# ಕಾಂಗ್ರೆಸ್ ಸೇರುವ ವದಂತಿ ಬಗ್ಗೆ ಡಿವಿಎಸ್ ಸ್ಪಷ್ಟನೆ

**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಡಿ.ವಿ ಸದಾನಂದ ಗೌಡ ಅವರಿಗೆ ಈ ಬಾರಿಯ ಲೋಕಸಭಾ ಚುನಾವಣೆಯ ಟಿಕೆಟ್ ಕೈ ತಪ್ಪಿದೆ. ಈ ಬೆನ್ನಲ್ಲೇ ತಮ್ಮ ವಿರುದ್ಧ ಹರಿದಾಡುತ್ತಿರುವ ಊಹಾಪೋಹಗಳಿಗೆ ಸ್ವತಃ ಅವರೇ ಸ್ಪಷ್ಟನೆಯನ್ನು ಕೊಟ್ಟಿದ್ದಾರೆ.



ತಮ್ಮ ಎಕ್ಸ್ ಖಾತೆಯ ಮೂಲಕ ಸ್ಪಷ್ಟನೆ ನೀಡಿರುವ ಡಿವಿಎಸ್, ನಾನು ಕಾಂಗ್ರೆಸ್ ಪಕ್ಷಕ್ಕೆ ಸೇರುವುದಾಗಿ ಕೆಲವರು ಸುಳ್ಳು ಸುದ್ದಿಯನ್ನು ಹಬ್ಬಿಸುತ್ತಿದ್ದಾರೆ. ಇದು ಸತ್ಯಕ್ಕೆ ದೂರವಾದುದು. ಹಾರಿಕೆ ಸುದ್ದಿಯನ್ನು ಹಬ್ಬುವವರು ದೇಶದ್ರೋಹಿಗಳು ಅಂತಾ ಕಿಡಿಕಾರಿದ್ದಾರೆ.

ಲೋಕಸಭಾ ಟಿಕೆಟ್ ಸಿಗದ್ದಕ್ಕೆ ಡಿವಿ ಸದಾನಂದ ಗೌಡರು ಕಾಂಗ್ರೆಸ್ ಸೇರುತ್ತಾರೆ ಎಂದು ಸೋಶಿಯಲ್ ಮೀಡಿಯಾದಲ್ಲಿ ಸುದ್ದಿ ಹರಿದಾಡಲು ಆರಂಭವಾಗಿದೆ. ಆದರೆ ಇದೀಗ ಡಿವಿಎಸ್ ಅವರೇ ಸ್ಪಷ್ಟನೆ ಕೊಡುವ ಮೂಲಕ ಸುಳ್ಳು ಸುದ್ದಿಗಳಿಗೆ ಬ್ರೇಕ್ ಹಾಕಿದ್ದಾರೆ.

ಕಳೆದ ಚುನಾವಣೆಯಲ್ಲಿ ಗೆದ್ದಿದ್ದ 25 ಸಂಸದರಲ್ಲಿ ಕೆಲವು ಸಂಸದರಿಗೆ ಟಿಕೆಟ್ ಸಿಗುವುದಿಲ್ಲ ಎಂದು ಹೇಳಲಾಗಿತ್ತು. ಇದರಲ್ಲಿ ಸದಾನಂದ ಗೌಡರ ಹೆಸರೂ ಕೇಳಲ್ಪಟ್ಟಿತ್ತು. ಅದು ನಿಜವೂ ಆಗಿದೆ. ಬಿಜೆಪಿ 2ನೇ ಪಟ್ಟಿ ಬಿಡುಗಡೆ ಮಾಡುವುದಕ್ಕೂ ಮುನ್ನ ಎಕ್ಸ್ ಮೂಲಕ ಮತದಾರರಿಗೆ ಧನ್ಯವಾದಗಳನ್ನು ಅರ್ಪಿಸಿದ್ದರು. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ನನ್ನೆಲ್ಲಾ ಪ್ರೀತಿಯ ಬಂಧುಗಳೇ, ನನಗೆ ಕಳೆದ ಹತ್ತು ವರ್ಷಗಳ ಕಾಲ ಈ ಕ್ಷೇತ್ರದ ಲೋಕಸಭಾ ಸದಸ್ಯನಾಗಿ, ನಿಮ್ಮ ಕೆಲಸ ಮಾಡುವ ಅವಕಾಶವನ್ನು ಮಾಡಿಕೊಟ್ಟು ಆಶೀರ್ವಾದವನ್ನು ಮಾಡಿದ್ದೀರಿ.

ಪುಟ 2

## ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕರ್ತವ್ಯಕ್ಕೆ ಪ್ರಾಥಮಿಕ ಶಿಕ್ಷಕರು

# ಆದೇಶ ಹಿಂಪಡೆದ ಕೆಎಸ್‌ಇಎಬಿ



**ಬೆಂಗಳೂರು:** ಕರ್ನಾಟಕ ಶಾಲಾ ಶಿಕ್ಷಣ ಮತ್ತು ಮೌಲ್ಯಮಾಪನ ಮಂಡಳಿ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿಸುವ ಆದೇಶವನ್ನು ಹಿಂಪಡೆದಿದೆ. ಬುಧವಾರ ಹೊರಡಿಸಿರುವ ಪರಿಷ್ಕೃತ ಆದೇಶದಲ್ಲಿ ಪ್ರೌಢಶಾಲಾ ಶಿಕ್ಷಕರಿಗೆ ತರಬೇತಿ ನೀಡಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿಸುವಂತೆ ಎಲ್ಲ ಜಿಲ್ಲೆಗಳ ಉಪನಿರ್ದೇಶಕರಿಗೆ ಮಂಡಳಿ ತಿಳಿಸಿತ್ತು. ಪುಟ್ಟಣ್ಣ, ಮರಿತಿಬ್ಬೇಗೌಡ ಸೇರಿದಂತೆ ವಿವಿಧ ಶಾಸಕರು ಹಾಗೂ ಶಿಕ್ಷಕ ಸಮುದಾಯ ಸಲ್ಲಿಸಿದ್ದ ಮನವಿಯನ್ನು ಪರಿಗಣಿಸಿ ಕೆಎಸ್‌ಇಎಬಿ ಪರಿಷ್ಕೃತ ಆದೇಶ ಹೊರಡಿಸಿದೆ.

ಅವ್ಯವಹಾರ ತಪ್ಪಿಸುವ ನಿಟ್ಟಿನಲ್ಲಿ ಆಡಳಿತ ಮಂಡಳಿ ಈ ಬಾರಿ ಪ್ರೌಢಶಾಲಾ ಶಿಕ್ಷಕರನ್ನು ಕೊಠಡಿ ಪರಿವೀಕ್ಷಕರನ್ನಾಗಿ

ಪುಟ 2



ಮೈಸೂರು ವಿಶ್ವವಿದ್ಯಾಲಯದ 104 ನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಗೆ ಬಾಜನರಾದ ವಿಜಯನಗರದ ಯೋಗಾನರಸಿಂಹಸ್ವಾಮಿ ದೇವಾಲಯದ ಸಂಸ್ಥಾಪಕ ಪ್ರೊ.ಡಾ.ಭಾಷ್ಯಂ ಸ್ವಾಮೀಜಿ ಅವರನ್ನು ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಡಿ ಟಿ ಪ್ರಕಾಶ್ ಅವರು ಅಭಿನಂದಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಬ್ರಾಹ್ಮಣ ಸಂಘಟನೆಯ ಮುಖಂಡರಾದ ಎಂ ಆರ್ ಬಾಲಕೃಷ್ಣ, ಅಪೂರ್ವ ಸುರೇಶ್, ಯೋಗ ನರಸಿಂಹ (ಮುರಳಿ), ಕಡಕೋಳ ಜಗದೀಶ್, ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಸಂಘಟನಾ ಕಾರ್ಯದರ್ಶಿ ಅಜಯ್ ಶಾಸ್ತ್ರಿ, ಹೊಯ್ಸಳ ಕರ್ನಾಟಕದ ನಿರ್ದೇಶಕ ರಂಗನಾಥ್, ಜ್ಯೋತಿ, ದಯಾನಂದ್, ಹಾಗೂ ಇನ್ನಿತರರು ಶುಭ ಕೋರಿದರು.

# ವರ್ಷವಿಡೀ ವಸ್ತುಪ್ರದರ್ಶನ ಚಟುವಟಿಕೆಗೆ ಚಿಂತನೆ



**ಮೈಸೂರು:** ಕರ್ನಾಟಕ ವಸ್ತು ಪ್ರದರ್ಶನದ ಪ್ರದರ್ಶನಗಳು ದಸರಾ ಸಂದರ್ಭದ ಮೂರ್ನಾಲ್ಕು ತಿಂಗಳುಗಳಿಗೆ ಸೀಮಿತವಾಗಿದ್ದು ವರ್ಷಪೂರ್ತಿ ಚಟುವಟಿಕೆಯಿಂದಿರಲು ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ ಎಂದು ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್ ಅವರು ಮಾಹಿತಿ ನೀಡಿದರು.

ಇಂದು ನಗರದ ವಸ್ತು ಪ್ರದರ್ಶನ ಪ್ರಾಧಿಕಾರದ ಸಭಾಂಗಣದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಇನ್ನು ಮುಂದೆ ಮೈಸೂರಿನ ಇತರೆ ಸ್ಥಳಗಳಲ್ಲಿ ನಡೆಯುವ ವಸ್ತುಪ್ರದರ್ಶನಗಳನ್ನು ಪ್ರಾಧಿಕಾರದ ಆವರಣದಲ್ಲಿಯೇ ಆಯೋಜಿಸಲು ನಿಯಮ ರೂಪಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿದೆ ಹಾಗೂ ನಗರದ ಬೇರೆ ಬೇರೆ ಮೈದಾನಗಳಲ್ಲಿ ವಸ್ತು ಪ್ರದರ್ಶನ ನಡೆಸಲು ಪರವಾನಗಿಯನ್ನು ನೀಡಬಾರದೆಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದು, ಯಾರೇ ಆಗಲಿ ವಸ್ತು ಪ್ರದರ್ಶನದ ಮಳಿಗೆಗಳನ್ನು ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿಯೇ ಇಡಬೇಕು. ಅದಕ್ಕೆ ಬೇಕಾಗುವ ಎಲ್ಲಾ ಸೌಲಭ್ಯಗಳನ್ನು ಒದಗಿಸುವ ಜವಾಬ್ದಾರಿ ಪ್ರಾಧಿಕಾರದ್ದಾಗಿದೆ ಎಂದರು.

ಈ ರೀತಿಯಾಗಿ ಬೇರೆ ಬೇರೆ ಸ್ಥಳಗಳಲ್ಲಿ ಆಟದ ಮೈದಾನಗಳನ್ನು ಬಳಸಿಕೊಂಡು ಪ್ರದರ್ಶನ ಆಯೋಜಿಸುವುದರಿಂದ ಕ್ರೀಡಾಪಟುಗಳಿಗೆ, ಪಾರ್ಕಿಂಗ್ ವ್ಯವಸ್ಥೆ, ಕುಡಿಯುವ ನೀರು, ಟ್ರಾಫಿಕ್ ಇತ್ಯಾದಿ ಮೂಲಭೂತ ಸಮಸ್ಯೆಗಳು ಎದುರಾಗುತ್ತವೆ. ಹಾಗಾಗಿ ನಮ್ಮ ವಸ್ತು ಪ್ರದರ್ಶನ ಆವರಣದಲ್ಲಿ ಎಲ್ಲಾ ರೀತಿಯ ಅನುಕೂಲಗಳು ಇರುವುದರಿಂದ ಇನ್ನು ಮುಂದೆ ಯಾವುದೇ ವಸ್ತು ಪ್ರದರ್ಶನವು ಕೂಡ ಪ್ರದರ್ಶನದ ಆವರಣದಲ್ಲಿಯೇ ಏರ್ಪಡಿಸಬೇಕು ಎಂದರು.

ವಸ್ತು ಪ್ರದರ್ಶನದ ?ಎ' ಬ್ಲಾಕ್ ಅನ್ನು ಹೆರಿಟೇಜ್ ವಿನ್ಯಾಸ ಮಾಡಿ, ಪ್ರಸ್ತುತ ಇರುವ ಫೌಂಟೈನ್ ಅನ್ನು ಮ್ಯೂಸಿಕಲ್ ಫೌಂಟೈನ್ ಅನ್ನಾಗಿ ಮಾಡಿ ಸಾರ್ವಜನಿಕರನ್ನು ಆಕರ್ಷಿಸಲಾಗುತ್ತದೆ. ಇದರಿಂದ ಹೆಚ್ಚಿನ ಪ್ರವಾಸಿಗರು ಆಗಮಿಸಲು ಸಹಕಾರಿಯಾಗಲಿದೆ ಎಂದರು.

ಏಪ್ರಿಲ್ ಮತ್ತು ಮಾರ್ಚ್ ತಿಂಗಳಲ್ಲಿ ಬೇಸಿಗೆ ಶಿಬಿರವನ್ನು ಏರ್ಪಡಿಸಲಾಗಿದ್ದು, ಆಸಕ್ತರಿಂದ ಅರ್ಜಿಗಳನ್ನು ದಾಖಲಿಸಲಾಗುತ್ತಿದೆ ಎಂದು ತಿಳಿಸಿದರು.

ಮೈಸೂರಿನಲ್ಲಿ ಯೂನಿಟಿ ಮಾಲ್ : ದೇಶದಾದ್ಯಂತ ಯೂನಿಟಿ ಮಾಲ್ ಸ್ಥಾಪಿಸಲು ಕೇಂದ್ರ ಸರ್ಕಾರವು ಅನುದಾನವನ್ನು ಬಿಡುಗಡೆ ಮಾಡಿದ್ದು ಅದರಲ್ಲಿ ರಾಜ್ಯಕ್ಕೆ 193 ಕೋಟಿ ಬಿಡುಗಡೆಯಾಗಿದೆ. ಇದರಿಂದ ಬೆಂಗಳೂರಿನಲ್ಲಿ ಯೂನಿಟಿ ಮಾಲ್ ಸ್ಥಾಪಿಸಬೇಕು ಎಂಬ ಚಿಂತನೆಗಳಿದ್ದು, ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರ ಆಶಯದಂತೆ ಮೈಸೂರಿನಲ್ಲಿ ಯೂನಿಟಿ ಮಾಲ್ ಸ್ಥಾಪಿಸಲು ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡಲಾಗುವುದೆಂದರು.

ದೇಶದ ಎಲ್ಲಾ ರಾಜ್ಯಗಳಿಂದ ಹಾಗೂ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ತಮ್ಮ ತಮ್ಮ ರಾಜ್ಯ ಮತ್ತು ಜಿಲ್ಲೆಯ ಉತ್ಪನ್ನಗಳು ದೊರೆಯುವ ಮಳಿಗೆಗಳನ್ನು ಒಂದೇ ಸ್ಥಳದಲ್ಲಿ ಸ್ಥಾಪಿಸುವುದಾಗಿದೆ. ಪ್ರಾಧಿಕಾರದ ಸಿಇಒ ರಾಜೇಶ್ ಗೌಡ ಉಪಸ್ಥಿತರಿದ್ದರು.

## ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗಾಗಿ ಸಹಾಯವಾಣಿ

**ಬೆಂಗಳೂರು:** ಎಸ್.ಎಸ್.ಎಲ್.ಸಿ. ಪರೀಕ್ಷೆ ವಿದ್ಯಾರ್ಥಿ ಜೀವನದಲ್ಲಿ ನಿರ್ಣಾಯಕ ಹಂತದ ಪರೀಕ್ಷೆಯಾಗಿರುತ್ತದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಮಕ್ಕಳು ಗಳಿಸಬೇಕೆಂದು ಪೋಷಕರ ಅಭಿಲಾಷೆಯಾಗಿರುತ್ತದೆ. ವಿದ್ಯಾರ್ಥಿಗಳ ಸಾಮರ್ಥ್ಯ, ಬುದ್ಧಿಶಕ್ತಿ, ಆಸಕ್ತಿ, ಕ್ರಿಯಾಶೀಲತೆ, ಕಠಿಣ ಪರಿಶ್ರಮ ಇವುಗಳನ್ನು ಗಣನೆಗೆ ತೆಗೆದುಕೊಳ್ಳದೆ ಹೆಚ್ಚು ಅಂಕಗಳನ್ನು ಗಳಿಸ ಬೇಕು ಎಂದು ಅವರ ಮೇಲೆ ಒತ್ತಡವನ್ನು ಪೋ?ಕರು / ಶಿಕ್ಷಕರು ಹಾಕುತ್ತಿರುವುದು ಇತ್ತೀಚಿನ ಸಮಸ್ಯೆಯಾಗಿದೆ. ಇದರಿಂದ ವಿದ್ಯಾರ್ಥಿಗಳು ಅಧ್ಯಯನದ ಕಡೆ ಗಮನಹರಿಸಲಾಗದಿರುವುದು, ಏಕಾಗ್ರತೆಯನ್ನು ಕಳೆದುಕೊಳ್ಳುತ್ತಿರುವುದನ್ನು ಕಂಡು ಬಂದಿದ್ದು, ಈ ಸಮಸ್ಯೆ ನಿವಾರಣೆಯಾಗದೆ ವಿದ್ಯಾರ್ಥಿ ಪರೀಕ್ಷೆಯನ್ನು ಸಮರ್ಥವಾಗಿ ಬರೆಯಲು ಸಾಧ್ಯವಾಗುವುದಿಲ್ಲ. ಈ ಸಮಸ್ಯೆಗಳ ನಿವಾರಣೆ ಮಾಡಿ, ಪರೀಕ್ಷೆಯನ್ನು ಸಮರ್ಥವಾಗಿ ಬರೆಯಲು ಸ್ಫೂರ್ತಿ ನೀಡಬೇಕಾದ ಆವಶ್ಯಕತೆ ಇದೆ. ಈ ರೀತಿಯ ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಕಂಡು ಹಿಡಿಯುವ ಹಾಗೂ ಭಯರಹಿತವಾಗಿ ಪರೀಕ್ಷೆ ಬರೆಯಲು ಆತ್ಮಸ್ಥೆರ್ಯ ತುಂಬುವ ಸದುದ್ದೇಶದಿಂದ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ಹಿಂದಿನ ವರ್ಷಗಳಂತೆ ಈ ವರ್ಷವೂ 'ಸಹಾಯವಾಣಿ'ಕೌನ್ಸಿಲಿಂಗ್ ಕಾರ್ಯಕ್ರಮವನ್ನು 2024ನೇ ಮಾರ್ಚ್ 14ರಂದು ಗುರುವಾರ ಅಪರಾಹ್ನ 02.30 ಗಂಟೆಗೆ ಪ್ರಾರಂಭಿಸಲಾಗುವುದು. ಇದಕ್ಕಾಗಿ 080-23310075 ಮತ್ತು 080-23310076 ಎರಡು ದೂರವಾಣಿ ಸಂಖ್ಯೆಗಳನ್ನು ಮೀಸಲಿಡಲಾಗಿದೆ. ಈ ''ಸಹಾಯವಾಣಿಯು ಮಾರ್ಚ್ 14ರಿಂದ 22 ರವರೆಗೆ ಪ್ರತಿ ದಿನ ಅಪರಾಹ್ನ 02.30 ರಿಂದ ಸಂಜೆ 6.30 ಗಂಟೆಯವರೆಗೆ ಹಾಗೂ ಮಾರ್ಚ್ 17 ರಂದು ಬೆಳಿಗ್ಗೆ 11.00 ಗಂಟೆಯಿಂದ ಸಂಜೆ 6.00 ರವರೆಗೆ ಕಾರ್ಯನಿರ್ವಹಿಸಲಾಗುತ್ತದೆ. ಮಾರ್ಚ್ 25ರಿಂದ ಏಪ್ರಿಲ್ 06ರ ವರೆಗೆ ನಿಯಂತ್ರಣ ಕೊಠಡಿಯಾಗಿ ಬೆಳಿಗ್ಗೆ 10.00 ರಿಂದ ಮಧ್ಯಾಹ್ನ 2.00 ಗಂಟೆಯವರೆಗೆ ಪರೀಕ್ಷಾ ದಿನಗಳಂದು ಮಾತ್ರ ಕಾರ್ಯನಿರ್ವಹಿಸಲಾಗುತ್ತದೆ. ಪೋಷಕರು, ವಿದ್ಯಾರ್ಥಿಗಳು ಮೇಲೆ ತಿಳಿಸಿರುವ ದೂರವಾಣಿ ಸಂಖ್ಯೆಗೆ ಕರೆಮಾಡಿ ತಮ್ಮ ಸಮಸ್ಯೆಗಳಿಗೆ, ಸಂದೇಹಗಳಿಗೆ ಪರಿಹಾರ ಪಡೆದುಕೊಳ್ಳಬಹುದು. ಹೆಚ್ಚಿನ ರೀತಿಯಲ್ಲಿ ವಿದ್ಯಾರ್ಥಿಗಳು, ಪೊ?ಷಕರು ಸದರಿ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 5, 8, 9ನೇ ತರಗತಿಗಳಿಗೆ ನಡೆಯಬೇಕಿದ್ದ ಮೌಲ್ಯಾಂಕನ ಮುಂದೂಡಿಕೆ

ಬೆಂಗಳೂರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು 5ನೇ ತರಗತಿಯ ವಿದ್ಯಾರ್ಥಿಗಳಿಗೆ ಮಾಚ್ 13 ರಿಂದ 14 ರವರೆಗೆ ಹಾಗೂ 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳಿಗೆ ಮಾಚ್ 13 ರಿಂದ 16 ರವರೆಗೆ ನಡೆಸಬೇಕಿರುವ ಮೌಲ್ಯಾಂಕನವನ್ನು ಮುಂದೂಡಿದೆ. ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 5, 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳಿಗೆ 2023-24ನೇ ಸಾಲಿನ ಸಂಕಲನಾತ್ಮಕ ಮೌಲ್ಯಮಾಪನ-2 ಮೌಲ್ಯಾಂಕನವನ್ನು ನಡೆಸುವ ಸಂಬಂಧ ಹೈಕೋರ್ಟ್ ಏಕಸದಸ್ಯ ಪೀಠವು ರದ್ದುಪಡಿಸಿ ನೀಡಿದ್ದ ತೀರ್ಪಿಗೆ ವಿಭಾಗೀಯ ಪೀಠವು ಮಧ್ಯಂತರ ತಡೆಯಾಜ್ಞೆ ನೀಡಿತ್ತು. ಸದರಿ ವಿಭಾಗೀಯ ಪೀಠವು ನೀಡಿದ್ದ ಮಧ್ಯಂತರ ತಡೆಯಾಜ್ಞೆಯನ್ನು ಸರ್ವೋಚ್ಚ ನ್ಯಾಯಾಲಯವು ರದ್ದುಪಡಿಸಿರುತ್ತದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಲ ಮಂಡಳಿಯಿಂದ ಅದಾಲತ್

**ಬೆಂಗಳೂರು:** ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ಉತ್ತರ-2-1, ದಕ್ಷಿಣ-2-1, ನೈರುತ್ಯ -1, ನೈರುತ್ಯ - 4, ಪೂರ್ವ -1-2, ಪೂರ್ವ -2-2, ಆಗ್ನೇಯ - 2, ಆಗ್ನೇಯ ? 5, ಪಶ್ಚಿಮ-1-2 ಮತ್ತು ಪಶ್ಚಿಮ-2-2, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಮಾರ್ಚ್ 14 ರಂದು ಬೆಳಿಗ್ಗೆ 9.30 ಗಂಟೆಯಿಂದ 11 ಗಂಟೆಯವರೆಗೆ ನೀರಿನ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ. ಯಲಹಂಕ ಓಲ್ಡ್ ಟೌನ್, ಯಲಹಂಕ ನ್ಯೂಟೌನ್, ಅಟ್ಟೂರು, ಜೆ.ಪಿ.ನಗರ-2, ಕೊತ್ತನೂರು ದಿಣ್ಣೆ, ವಿಜಯಬ್ಯಾಂಕ್ ಕಾಲೋನಿ, ಅರಕೆರೆ ಮೈಕೋ ಲೇಔಟ್, ಜೆ.ಪಿ.ನಗರ ? 13, ಜಯನಗರ 4ನೇ ಟಿ ಬ್ಲಾಕ್, ಜಯನಗರ 4ನೇ ಬ್ಲಾಕ್, ಹೊಂಬೇಗೌಡನಗರ, ಬೈರಸಂದ್ರ, ಎಲ್.ಎಲ್.ಆರ್, ಚಿಕ್ಕಲಾಲ್‌ಬಾಗ್, ಬನ್ನಪ್ಪ ಪಾರ್ಕ್, ಸುಧಾಮನಗರ -1, ಕತ್ರಿಗುಪ್ಪೆ, ಹೊಸಕೆರೆಹಳ್ಳಿ, ದೇವಗಿರಿ-1, ಇಟ್ಟಮಡು, ಬನಗಿರಿನಗರ, ಎ.ನಾರಾಯಣಪುರ, ದೊಡ್ಡನಕುಂದಿ, ವಿಜ್ಞಾನನಗರ, ಬಾಣಸವಾಡಿ, ಓ.ಎಂ.ಬಿ.ಆರ್., ಲಿಂಗರಾಜಪುರಂ, ಕಸ್ತೂರಿನಗರ, ಹಲಸೂರು, ದೊಮ್ಮಲೂರು, ಮಾರತ್ ಹಳ್ಳಿ, ಕೋರಮಂಗಲ- 12, ವಿಜಯನಗರ ಓ.ಎಚ್.ಟಿ, ಮೂಡಲಪಾಳ್ಯ, ನಾಗರಬಾವಿ, ಅನ್ನಪೂರ್ಣೇಶ್ವರಿನಗರ, ಸರ್.ಎಂ.ವಿ ಲೇಔಟ್, ಮೂಡಲಪಾಳ್ಯ ಸೇವಾ ಠಾಣೆಗಳಲ್ಲಿ ಅದಾಲತ್ ನಡೆಯಲಿದೆ. ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸ್‌ಆಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ತಿಳಿಸಿದ್ದಾರೆ.

# ಮಹಿಳೆಯರಿಗೆ ಕಾನೂನು ಅರಿವು ಕಾರ್ಯಕ್ರಮ

**ಕೋಲಾರ:** ಪ್ರತಿ ವರ್ಷ ಮಾರ್ಚ್ 08 ರಂದು ವಿಶ್ವದಾಧ್ಯಂತ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. 1910 ರಲ್ಲಿ ಮೊದಲ ಬಾರಿಗೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಲು ಪ್ರಾರಂಭಿಸಲಾಯಿತೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ ಎಸ್ ಹೊಸಮನಿ ಅವರು ತಿಳಿಸಿದರು.

ಜಿಲ್ಲಾ ಆರೋಗ್ಯಾಧಿಕಾರಿಗಳ ಕಛೇರಿಯ ಸ್ಕ್ಯಾನಿಟೋರಿಯಂನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೋಲಾರ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ, ಅಂತರರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ವರ್ಷದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಘೋಷವಾಕ್ಯ ಮಹಿಳೆಯರಲ್ಲಿ ಶಿಕ್ಷಣವನ್ನು ನೀಡಿ ಅಭಿವೃದ್ಧಿ ವೇಗವನ್ನು ಪ್ರಗತಿಗೊಳಿಸುವುದು ಎಂಬುದಾಗಿರುತ್ತದೆ. ಮಹಿಳೆಯು ಸಹ ಪುರುಷರಷ್ಟೇ ಸಮಾನವಾಗಿದ್ದು, ಎಲ್ಲಾ ರಂಗಗಳಲ್ಲಿ ಮಹಿಳೆ ಮಹತ್ವದ ಪಾತ್ರ ವಹಿಸುತ್ತಿದ್ದಾಳೆ. ಮಹಿಳೆ ಅಬಲೆ ಅಲ್ಲ ಸಬಲೆ ಎಂಬುದನ್ನು ತೋರಿಸಿಕೊಟ್ಟಿದ್ದಾಳೆ. ಮಹಿಳೆ ಎಂದು ನಿರ್ಲಕ್ಷಿಸದೆ ಅವಳಿಗೆ ಎಲ್ಲಾ ರಂಗದಲ್ಲಿ ಅವಕಾಶ ನೀಡಿದರೆ ಅವಳು ಸಹ ಕುಟುಂಬ ನಿರ್ವಹಣೆ ಮಾಡಲು ಸಮರ್ಥರಾಗುತ್ತಾರೆ. ಮಹಿಳೆಯರ ಸಬಲೀಕರಣಗೊಳಿಸುವುದು ದೊಡ್ಡ ಜವಾಬ್ದಾರಿಯಾಗಿದೆ ಮತ್ತು ಲಿಂಗ ಸಮಾನತೆಗೆ ಇದು ಅವಶ್ಯಕವಾಗಿದೆ. ಮಹಿಳೆಯರಿಗೆ ಸಮಾನ ಗೌರವ ನೀಡಿದಾಗ ಸಮಾಜ ಉತ್ತಮವಾಗಿರುತ್ತದೆ. ಮಹಿಳೆಯನ್ನು ಗೌರವಿಸಿದರೆ ಒಳ್ಳೆಯ ಸಮಾಜ ನಿರ್ಮಾಣ ಮಾಡಬಹುದು, ನಮ್ಮ ಜೀವನದಲ್ಲಿ ಮತ್ತು ಸಮಾಜದಲ್ಲಿ ಮಹಿಳೆಯರ ಮಹತ್ವ ಗುರುತಿಸೋಣ ಮತ್ತು ಭವಿಷ್ಯದ ಹೆಚ್ಚಿನ ಸಾಧನೆಗಳಿಗಾಗಿ ಅವರನ್ನು ಪ್ರೇರೆಪಿಸೋಣ. ಯಾವ ಸಮಾಜದಲ್ಲಿ ಮಹಿಳೆಯರನ್ನು ಗೌರವಿಸಲಾಗುತ್ತದೆ ಅದು ಉತ್ತಮ ಸಮಾಜ ಆಗಿರುತ್ತದೆಯೆಂದು ತಿಳಿಸಿದರು.

ಪ್ರತಿಯೊಬ್ಬರು ಕಾನೂನು ತಿಳಿದುಕೊಂಡು ಅನುಸರಿಸಿದರೆ ಅವರಿಗೆ ಕಾನೂನಿನಲ್ಲಿ ರಕ್ಷಣೆ ಇರುತ್ತದೆ. ಮನುಷ್ಯ ಹುಟ್ಟುವ ಪೂರ್ವದಲ್ಲಿ ಕಾನೂನುಗಳು ಪ್ರಾರಂಭವಾಗಿ ಮೃತಪಡುವವರೆಗೂ ಕಾನೂನಿನ ಅಡಿಯಲ್ಲಿ ಜೀವನ ಮಾಡಬೇಕಾಗುತ್ತದೆ ಎಂದು ತಿಳಿಸಿದರು. ಹೆಣ್ಣು ಭ್ರೂಣ ಎಂದು ಅದನ್ನು ತೆಗೆಸಿದರೆ ಹೆಣ್ಣು ಭ್ರೂಣ ಹತ್ಯೆ ತಡೆ ಕಾಯ್ದೆ ಅಡಿಯಲ್ಲಿ ಶಿಕ್ಷೆ ಇರುತ್ತದೆ ಎಂದು ತಿಳಿಸಿದರು. ಇತ್ತೀಚಿಗೆ ಬಾಲ್ಯ ವಿವಾಹಗಳು ಹೆಚ್ಚಾಗುತ್ತಿದ್ದು ಅದನ್ನು ತಡೆಗಟ್ಟಲು ಬಾಲ್ಕ ವಿವಾಹ ನಿಷೇಧ ಕಾಯ್ದೆ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು. ಬಾಲ್ಕ ವಿವಾಹ ನಿಷೇಧ ಕಾಯ್ದೆ ಅಡಿಯಲ್ಲಿ 02 ವರ್ಷದವರೆಗೆ ಜೈಲು ಶಿಕ್ಷೆ ಮತ್ತು 01 ಲಕ್ಷದ ವರೆಗೆ ದಂಡ ವಿಧಿಸುವ ಅವಕಾಶ ಇರುತ್ತದೆ. ಬಾಲ್ಕ ವಿವಾಹ ಆಗುವುದು ಕಂಡು ಬಂದರೆ ಅದನ್ನು ತಡೆಗಟ್ಟಲು ಮಕ್ಕಳ ಸಹಾಯವಾಣಿ 1098 ಗೆ ತಿಳಿಸಬೇಕು ಎಂದು ತಿಳಿಸಿದರು. ಅಷ್ಟೇ ಅಲ್ಲದೆ ಪೋಕ್ಸೊ ಪ್ರಕರಣಗಳು ಹೆಚ್ಚಾಗುತ್ತಿದ್ದು, ಆ ದೃಷ್ಟಿಯಿಂದ ಕಾಯ್ದೆ ಬಗ್ಗೆಯೂ ಸಹ ಅರಿವನ್ನು ಮೂಡಿಸಬೇಕು ಎಂದು ತಿಳಿಸಿದರು. ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಇರುವ ಹಲವಾರು ಕಾನೂನುಗಳ ಬಗ್ಗೆ ತಿಳಿದುಕೊಂಡು ಮಕ್ಕಳ ರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಜಗದೀಶ್ ಎಂ., ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದನ್ ಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರೇಮಾ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ನಾಗರತ್ನಮ್ಮ, ಇವರು ಭಾಗವಹಿಸಿದ್ದರು.

### ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಭಿಮತ

# ಕಂದಾಯ ಇಲಾಖೆಯಲ್ಲಿ ಆನ್‌ಲೈನ್ ಸೇವೆ

**ಬೆಂಗಳೂರು:** ಕಂದಾಯ ಇಲಾಖೆಯಲ್ಲಿ ತಂತ್ರಜ್ಞಾನ ಆಧಾರಿತ ಆನ್‌ಲೈನ್ ಸೇವೆಗಳನ್ನು ಒದಗಿಸಿ, ಜನರನ್ನು ಕಚೇರಿಗಳಿಗೆ ಭೇಟಿ ಮಾಡುವುದರಿಂದ ಮುಕ್ತಿಗೊಳಿಸುವುದೇ ನಮ್ಮ ಉದ್ದೇಶವೆಂದು ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ತಿಳಿಸಿದರು.




ವಿಕಾಸಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಂದಾಯ ಇಲಾಖೆ, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ ಹಾಗೂ ಕಂದಾಯ ಆಯುಕ್ತಾಲಯ ಇವರ ಸಹಭಾಗಿತ್ವದಲ್ಲಿ ಹೊಸದಾಗಿ ಆಯ್ಕೆಯಾದ 991 ಪರವಾನಗಿ ಭೂಮಾಪಕರುಗಳಿಗೆ ಪರವಾನಗಿ ಪ್ರಮಾಣಪತ್ರ ಹಾಗೂ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತಾನಾಡಿದರು.

ಪ್ರತಿ ತಿಂಗಳು ಸುಮಾರು ಒಂದು ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳನ್ನು ಮೋಜಿಣೀ ಅಡಿಯಲ್ಲಿ ಸ್ವೀಕರಿಸಿ ವಿಲೇವಾರಿ ಮಾಡಲಾಗುತ್ತಿದೆ. ಕಳೆದ ವರ್ಷ ಮೇ ನಿಂದ ಈ ಫೆಬ್ರವರಿವರೆಗೆ ಒಟ್ಟು 11,77,564 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಹೊಸದಾಗಿ ಆಯ್ಕೆಯಾದ ಸುಮಾರು 991 ಭೂಮಾಪಕರಿಗೆ ತರಬೇತಿಯನ್ನು ಸಹ ಒದಗಿಸಲಾಗಿದೆ. ಡ್ರೋಣ್ ಆಧಾರಿತ ಮರು ಭೂಮಾಪನ ಕಾರ್ಯ ಕೈಗೊಳ್ಳಲಾಗಿದ್ದು, ಸ್ವಾತಂತ್ರ್ಯ ಬಂದ ನಂತರ ಇದೇ ಮೊದಲ ಬಾರಿಗೆ 21 ಜಿಲ್ಲೆಗಳಲ್ಲಿ 1,50,000 ಚದರ ಕಿ.ಮೀ ಡ್ರೋನ್ ತಂತ್ರಜ್ಞಾನ ಬಳಸಿಕೊಂಡು ಭೂಮಾಪನ ಕಾರ್ಯ ಕೈಗೊಳ್ಳಲಾಗುತ್ತಿದೆ. ರಾಮನಗರ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಸಂಪೂರ್ಣ ಡ್ರೋಣ್ ಫ್ಲೈಯಿಂಗ್ ಕಾರ್ಯ ಪೂರ್ಣಗೊಂಡಿದೆ ಎಂದರು.

ಜನರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕಂದಾಯ ಇಲಾಖೆಯಲ್ಲಿ ಶಾಶ್ವತ ಯೋಜನೆ ಜಾರಿ ಮಾಡಿ, ಇದಕ್ಕೆ ನೀಲಿನಕ್ಷೆಯನ್ನು ಸಿದ್ದಪಡಿಸಬೇಕು, ಇದಕ್ಕೆ ಅನುಗುಣವಾಗಿ ಸಿಬ್ಬಂದಿಗಳನ್ನು ನೇಮಿಸಿ ಕಾರ್ಯಕ್ರಮಗಳು ತ್ವರಿತಗತಿಯಲ್ಲಿ ಮಾಡಬೇಕು. ನಾವಿನ್ನು 18 ರಿಂದ 19ನೇ ಶತಮಾನದ ಮನಸ್ಥಿತಿಯನ್ನು ಹೊಂದಿದ್ದೇವೆ. ಈ ಶತಮಾನದ ಹೊಸ ತಂತ್ರಜ್ಞಾನಗಳಿಗೆ ನಮ್ಮನ್ನು ಒಗ್ಗಿಸಿಕೊಂಡು ವೇಗವಾಗಿ ಕೆಲಸ ನಿರ್ವಹಿಸಬೇಕೆಂದರು.

ಸರ್ಕಾರವು 364 ಸರ್ಕಾರಿ ಸರ್ವೆಯರ್ಗಳ ನೇಮಕಾತಿಗೆ ಒಪ್ಪಿಗೆ ನೀಡಿದ್ದು, ಇನ್ನು 6 ತಿಂಗಳೊಳಗೆ ಇವರಿಗೆ ನೇಮಕಾತಿ ಆಗಲಿದೆ. 27 ಸಹಾಯಕ ನಿರ್ದೇಶಕರು, ಭೂದಾಖಲೆಗಳ ಹುದ್ದೆಗಳ ಆಯ್ಕೆಗೆ ಅರ್ಜಿ ಕರೆಯಲಾಗಿದೆ. ಅಲ್ಲದೆ 541 ಸರ್ವೆಯರ್ಗಳ ನೇರ ನೇಮಕಾತಿಗೆ ಸಹ ಸರ್ಕಾರ ಸಕರಾತ್ಮಕವಾಗಿ ಸ್ಪಂದಿಸಿದೆ. 500 ಸರ್ವೆಯರ್ಗಳ ಹೆಚ್ಚುವರಿ ಹುದ್ದೆಗಳಿಗೆ ಸಹ ಬೇಡಿಕೆ ಇಡಲಾಗಿದ್ದು, ಮುಂಬರುವ ದಿನಗಳಲ್ಲಿ ನೇಮಕವಾಗಲಿದೆ. 13 ಕೋಟಿ ವೆಚ್ಚದಲ್ಲಿ 420 ರೋವರ್ಸ್ ಮಿಷನ್‌ಗಳ ಟೆಂಡರ್ ಕರೆಯಲಾಗಿದೆ. ಇದರಿಂದ ಭೂ ಅಳತೆ ಕಾರ್ಯ ಸುಗಮವಾಗಿ ಕೈಗೊಳ್ಳಲಾಗುವುದೆಂದರು.

ಭೂದಾಖಲೆಗಳಲ್ಲಿ ಅತಿ ಮುಖ್ಯವಾದ ಆಕಾರ್ಬಂದ್ ಪುಸ್ತಕಗಳ ಗಣಕೀಕರಣ ಕಾರ್ಯ ಕೈಗೊಳ್ಳಲಾಗುತ್ತಿದ್ದು ಬಾಕಿ ಇರುವ 80 ಲಕ್ಷ ಆಕಾರ್ ಬಂದ್ ಮಾಹಿತಿಯನ್ನು ಆಂದೋಲನ ರೂಪದಲ್ಲಿ ಗಣಕೀಕರಣ ಗೊಳಿಸಲಾಗುತ್ತಿದ್ದು, ಒಂದೆರೆಡು ತಿಂಗಳಲ್ಲಿ ಪೂರ್ಣಗೊಳ್ಳಲಿದೆ ಇದಕ್ಕೆ ಹೊಸ ಮಾದರಿ ಕ್ಯಾಮೆರಾ, ಕಂಪ್ಯೂಟರ್, ಪಿಂಟರ್ಗಳ ಖರೀದಿ 55 ಕೋಟಿ ರೂಗಳಿಗೆ ಟೆಂಡರ್ ನೀಡಲಾಗಿದೆ, ನಕಲಿ ವ್ಯವಹಾರಗಳನ್ನು ತಡೆಯಲು ದಾಖಲೆಗಳನ್ನು ಡಿಜಿಟಲೀಕರಣ ಮಾಡಿ, ಪಹಣಿಗಳಿಗೆ ಆಧಾರ್ ಜೋಡಣೆ ಮಾಡಲಾಗುತ್ತಿದೆ, ಗ್ರಾಮ ಆಡಳತಾಧಿಕಾರಿಗಳ / ಲೆಕ್ಕಾಧಿಕಾರಿಗಳಿಗೆ 25 ಕೋಟಿ ವೆಚ್ಚದಲ್ಲಿ ಲ್ಯಾಪ್‌ಟಾಪ್ ಖರೀದಿಸಿ ವಿತರಣೆ ಮಾಡಲಾಗುತ್ತಿದ್ದು, ಒಂದು ವರ್ಷದಲ್ಲಿ ಇವರೆಲ್ಲರಿಗೂ ವಿತರಿಸಲಾಗುತ್ತಿದೆ, ಕಂದಾಯ ಇಲಾಖೆಯಲ್ಲಿ ಎಲ್ಲಾ ಕಡತಗಳೂ ಆನ್‌ಲೈನ್ ಮೂಲಕವಾಗಿ ತ್ವರಿತ ವಿಲೇವಾರಿ ಮಾಡಲು ಪ್ರೋತ್ಸಾಹ ನೀಡಲಾಗುತ್ತಿದೆ.

ಇದೇ ಏಪ್ರಿಲ್ 01 ರಿಂದ ಗ್ರಾಮ ಸೇವಕರಿಗೆ ನೀಡುವ ವೇತನವನ್ನು 13 ಸಾವಿರದಿಂದ 18 ಸಾವಿರಕ್ಕೆ ಹೆಚ್ಚಿಸಲಾಗುವುದುದೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕರಾದ ರಿಜ್ವಾನ್ ಅರ್ಷದ್, ಕಂದಾಯ ಇಲಾಖೆಯನ್ನು ಗೊಂದಲದ ಗೂಡಗಿಯೇ ಇನ್ನು ಜನ ನೋಡುತ್ತಿದ್ದಾರೆ. ಕಂದಾಯ ಸಚಿವರ ನೇತೃತ್ವದಲ್ಲಿ ಯೋಜನೆಗಳು ಜನರಿಗೆ ತ್ವರಿತವಾಗಿ ತಲುಪಲು ಇದಕ್ಕೆ ಅಧಿಕಾರಿ, ಸಿಬ್ಬಂದಿಗಳ ಕಾರ್ಯಕ್ಷಮತೆ ಸಹ ಬಹು ಮುಖ್ಯ ಎಂದರು.

ಸಮಾರಂಭದಲ್ಲಿ ಭೂಮಾಪನ ಮಾರ್ಗದರ್ಶಿ ಸಂಪುಟ-1, ಸಂಪುಟ-2, ಭೂಮಾಪನ ಇಲಾಖೆ ಪದಕೋಶವನ್ನು ಗಣ್ಯರು ಬಿಡುಗಡೆ ಗೊಳಿಸಿದರು.

ಕಾರ್ಯಕ್ರಮದಲ್ಲಿ ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯ ಆಯುಕ್ತರು ಜೆ.ಮಂಜುನಾಥ ಪ್ರಾಸ್ತಾವಿಕ ಭಾಷಣ ಮಾಡಿದರು, ಕಾರ್ಯಕ್ರಮದಲ್ಲಿ ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಹಾಗೂ ವಿಧಾನಪರಿಷತ್ ಸದಸ್ಯರಾದ ನಸೀರ್ ಅಹ್ಮದ್, ಕಂದಾಯ ಇಲಾಖೆ ಆಯುಕ್ತರಾದ ಸುನೀಲ್ ಕುಮಾರ್, ಕಂದಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ ಉಪಸ್ಥಿತರಿದ್ದರು.

# ರೈತರಿಂದ ರಾಗಿ ಖರೀದಿ ಪ್ರಕ್ರಿಯೆ ಆರಂಭ

**ರಾಮನಗರ:** 2023-24ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ (ಎಂ.ಎಸ್.ಪಿ) ಜಿಲ್ಲೆಯ ರೈತರಿಂದ ರಾಗಿ ಖರೀದಿ ಪ್ರಕ್ರಿಯೆಯು ಆರಂಭಗೊಂಡಿದ್ದು, ಜಿಲ್ಲೆಯ ಎಲ್ಲಾ ರೈತರು ಇದರ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

ಜಿಲ್ಲೆಯಲ್ಲಿ ಈಗಾಗಲೇ ಚನ್ನಪಟ್ಟಣ/ಕನಕಪುರ/ಮಾಗಡಿ/ರಾಮನಗರ ತಾಲ್ಲೂಕುಗಳಲ್ಲಿಯೂ ಸಹ ಖರೀದಿ ಕೇಂದ್ರ ತೆರೆಯಲಾಗಿರುತ್ತದೆ.

ಖರೀದಿ ಕೇಂದ್ರದ ವಿಳಾಸ: ಕೆ.ಎಫ್.ಸಿ.ಎಸ್.ಸಿ. ಚನ್ನಪಟ್ಟಣ ಸಗಟು ಮಳಿಗೆ, ಜಾನಪದ ಲೋಕದ ಎದುರು, ಬಿ.ಎಂ. ರಸ್ತೆ, ಚನ್ನಪಟ್ಟಣ, ಕೆ.ಎಫ್.ಸಿ.ಎಸ್.ಸಿ. ಕನಕಪುರ ಸಗಟು ಮಳಿಗೆ, ಮೆಳೆಕೋಟೆ, ರಾಮನಗರ ರಸ್ತೆ, ಕನಕಪುರ, ಕೆ.ಎಫ್.ಸಿ.ಎಸ್.ಸಿ. ಮಾಗಡಿ ಸಗಟು ಮಳಿಗೆ, ಗುಡೇಮಾರನಹಳ್ಳಿ ರಸ್ತೆ, ಮಾಗಡಿ, ಕೆ.ಎಫ್.ಸಿ.ಎಸ್.ಸಿ. ರಾಮನಗರ ಸಗಟು ಮಳಿಗೆ, ಜಾನಪದ ಲೋಕದ ಎದುರು, ಬಿ.ಎಂ. ರಸ್ತೆ, ರಾಮನಗರ

ರಾಗಿ ಖರೀದಿ ಕೇಂದ್ರಗಳಲ್ಲಿ ದಲ್ಲಾಳಿಗಳಿಗೆ ಅವಕಾಶವಿರುವುದಿಲ್ಲ, ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಿಕೊಂಡ ರೈತರು ಉತ್ತಮ ಗುಣಮಟ್ಟದ ರಾಗಿಯನ್ನು ಮಾತ್ರ ನೀಡಬೇಕು, ಖರೀದಿ ಕೇಂದ್ರದ ಅಧಿಕಾರಿಗಳು ಮತ್ತು ಗ್ರೇಡರ್ ಗಳು ಗುಣಮಟ್ಟದ ರಾಗಿಯನ್ನು ಮಾತ್ರ ರೈತರಿಂದ ಖರೀದಿಸಬೇಕು, ರೈತರು ಯಾವುದೇ ದೂರುಗಳು, ಸಮಸ್ಯೆಗಳಿದ್ದಲ್ಲಿ ತಾಲ್ಲೂಕಿನ ತಹಶೀಲ್ದಾರ್, ಆಹಾರ ಶಿರಸ್ತೇದಾರರು ಹಾಗೂ ಆಹಾರ ನಿರೀಕ್ಷಕರನ್ನು ಸಂಪರ್ಕಿಸಬಹುದಾಗಿದೆ, ಖರೀದಿ ಕೇಂದ್ರಗಳಲ್ಲಿ ರೈತರನ್ನು ಹೊರತುಪಡಿಸಿ ಇತರೆ ಜನ/ದಲ್ಲಾಳಿ/ಮಧ್ಯವರ್ತಿಗಳು ಕಂಡು ಬಂದಲ್ಲಿ ಅವರ ವಿರುದ್ಧ ಕಾನೂನು ರೀತ್ಯಾ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

ಈ ಅವಕಾಶವನ್ನು ಜಿಲ್ಲೆಯ ರೈತರು ಸದುಪಯೋಗಪಡಿಸಿಕೊಳ್ಳುವಂತೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.ವಿ.ಜೆ ಜನ್ಮ ದಿನೋತ್ಸವ ಪೂರ್ವಭಾವಿ ಸಭೆ

**ಕೋಲಾರ:** ಮಾರ್ಚ್ 17ರಂದು ಡಾ. ಡಿ.ವಿ.ಗುಂಡಪ್ಪರವರ 137ನೇ ಜನ್ಮ ದಿನವನ್ನು ಅವರ ಸ್ವಗೃಹದ ಆವರಣದಲ್ಲಿ ಪ್ರಸ್ತುತ ನಿರ್ಮಾಣ ಮಾಡಲಾಗಿರುವ ಶಾಲೆಯಲ್ಲಿ ಆಚರಿಸಲಾಗುವುದು ಎಂದು ತಹಶೀಲ್ದಾರ್ ಶರೀನ್ ತಾಜ್. ತಿಳಿಸಿದರು. ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಡಿ.ವಿ.ಜಿಯವರ ಜನ್ಮ ದಿನೋತ್ಸವವನ್ನು ಅಚರಿಸುವ ಸಂಬಂಧ ಕರೆಯಲಾದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.



ಕಾರ್ಯಕ್ರಮವನ್ನು ಶಾಲಾ ಮಕ್ಕಳನ್ನೊಳಗೊಡಂತೆ ಸಾರ್ವಜನಿಕರು ಭಾಗಿಯಾಗುವಂತೆ ಆಚರಿಸಬೇಕು. ಬೇಸಿಗೆ ಕಾಲವಾದ್ದರಿಂದ ಕಾರ್ಯಕ್ರಮವನ್ನು ಬೆಳಿಗ್ಗೆ 8.30 ಕ್ಕೆ ಆರಂಭಿಸಲು ಸೂಚಿಸಿದರು. ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಾಗದಂತೆ ಎಚ್ಚರ ವಹಿಸಬೇಕು. ಡಿ.ವಿ.ಜಿ ಯವರ ಭಾವಚಿತ್ರವನ್ನು ಪಲ್ಲಕ್ಕಿಯಲ್ಲಿ ಮೆರವಣಿಗೆ ಮಾಡಲು ಜಿಲ್ಲಾಡಳಿತದಿಂದ ಅನುಮತಿ ಪಡೆಯಬೇಕು ಒಂದು ವೇಳೆ ಚುನಾವಣಾ ನೀತಿ ಸಂಹಿತೆ ಜಾರಿಯಾದಲ್ಲಿ ನಿಯಮಾವಳಿಗಳನ್ವಯ ಕ್ರಮ ಕೈಗೊಳ್ಳಬೇಕು. ಒಟ್ಟಾರೆ ಮಹನೀಯರ ಜನ್ಮ ದಿನೋತ್ಸವವನ್ನು ಅಚ್ಚುಕಟ್ಟಾಗಿ ಆಚರಿಸಬೇಕು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಮುಳಬಾಗಿಲು ತಹಶೀಲ್ದಾರರಾದ ರೇಖಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಗೀತಾ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪ್ರತಿಷ್ಠಾನದ ಸದಸ್ಯರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಅಂಧತ್ವ ನಿವಾರಣೆಗೆ ಸೂಕ್ತ ಚಿಕಿತ್ಸೆ ಅತ್ಯಗತ್ಯ



**ಕೋಲಾರ:** ಗ್ಲಾಕೋಮಕ್ಕೆ ಸೂಕ್ತ ಚಿಕಿತ್ಸೆಯನ್ನು ಪಡೆಯದಿದ್ದಲ್ಲಿ ಶಾಶ್ವತ ಅಂಧತ್ವ ಉಂಟಾಗುತ್ತದೆ. ಸರಿಯಾದ ಸಮಯದಲ್ಲಿ ಸೂಕ್ತ ಚಿಕಿತ್ಸೆ ಅತ್ಯಗತ್ಯ ಎಂದು ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿಗಳು ಹಾಗೂ ನೋಡಲ್ ಅಧಿಕಾರಿಗಳಾದ ಡಾ. ನಾರಾಯಣಸ್ವಾಮಿ ಎನ್.ಸಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ, ವಿಶ್ವ ಗ್ಲಾಕೋಮಾ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಗ್ಲಾಕೋಮಾ ಎನ್ನುವುದು ಆಪ್ಟಿಕ್ ನರಕ್ಕೆ ಹಾನಿಯಾಗುವ ಪರಿಸ್ಥಿತಿಗಳ ಒಂದು ಗುಂಪು ಗ್ಲಾಕೋಮಾದಲ್ಲಿ ಆಪ್ಟಿಕ್ ನರವು ಅದರ ಮೇಲೆ ಬೀರುವ ಅಸಾಮಾನ್ಯವಾದ ಹೆಚ್ಚಿನ ಒತ್ತಡದಿಂದ ನಮ್ಮ ಕಣ್ಣಿಗೆ ಹಾನಿಯಾಗುತ್ತದೆ. ಈ ನರಕ್ಕೆ ಹಾನಿಯು ಅಂತಿಮವಾಗಿ ಕುರುಡತನಕ್ಕೆ ಕಾರಣವಾಗುವುದೆಂದು ತಿಳಿಸಿದರು.

ನಿರಂತರ ತಲೆನೋವು, ಕಣ್ಣು ಕೆಂಪಾಗುವುದು, ಕಣ್ಣಿನಲ್ಲಿ ನೋವು, ಬೆಳಕಿನ ಮೂಲಕ ಸುತ್ತ ಬಣ್ಣಬಣ್ಣದ ವೃತಗಳು ಕಾಣುವುದು. ಹೊಟ್ಟೆ ಅಸಮಾಧಾನ ಮತ್ತು ವಾಂತಿ ಗ್ಲಾಕೋಮಾದ ಲಕ್ಷಣಗಳಾಗಿದ್ದು, ತಕ್ಷಣವೇ ವೈದ್ಯರನ್ನು ಭೇಟಿ ಮಾಡಬೇಕು. ಪದೇ ಪದೇ ಕನ್ನಡಕವನ್ನು ಬದಲಾಯಿಸುತ್ತಿದ್ದರೆ. ಈಗಾಗಲೇ ಕಡ್ಡಾಯವಾಗಿ ಕಣ್ಣಿನ ಒತ್ತಡ ಪರೀಕ್ಷೆಯನ್ನು ಮಾಡಿಸಿಕೊಳ್ಳಿ, ಕಣ್ಣಿಗೆ ಯಾವುದೇ ರೀತಿಯಲ್ಲಿ ಗಾಯಗಳನ್ನು ಉಂಟುಮಾಡುವ ಕೆಲಸ ನಿರ್ವಹಿಸುವಾಗ ನಿಮ್ಮ ಕಣ್ಣುಗಳನ್ನು ರಕ್ಷಿಸಿಕೊಳ್ಳಬೇಕು. 40ವ?ರ್ ವಯಸ್ಸಿನ ನಂತರ ಪ್ರತಿಯೊಬ್ಬರು ವ?ರ್ಕೊಮ್ಮೆ ಕಣ್ಣಿನ ಒತ್ತಡದ ಪರೀಕ್ಷಿಸಿಕೊಳ್ಳಿ ಮಧುಮೇಹ, ರಕ್ತದೊತ್ತಡ ಹಾಗೂ ದೃಷ್ಟಿ ದೋ?ವಿರುವವರಲ್ಲಿ ಹೆಚ್ಚು ಗ್ಲಾಕೋಮಾ ಕಂಡುಬರುತ್ತದೆ ಎಂದರು.

ಭಾರತ ದೇಶದಲ್ಲಿ ಸುಮಾರು 27 ಲಕ್ಷ ಜನ ಗ್ಲಾಕೋಮಾದಿಂದ ನೆರಳುತ್ತಿದ್ದಾರೆ. ನಮ್ಮ ಕರ್ನಾಟಕದಲ್ಲಿ 2.5 ಲಕ್ಷ ಈ ಸಮಸ್ಯೆಗೀಡಾಗಿದ್ದಾರೆ. ಕೋಲಾರ ಜಿಲ್ಲೆಯಲ್ಲಿ 40 ವ?ರ್ ಮೇಲ್ಪಟ್ಟವರಲ್ಲಿ 1470 ಪ್ರಕರಣಗಳನ್ನು ಪತ್ತೆ ಹಚ್ಚಿದ್ದೇವೆ. ಮಕ್ಕಳಲ್ಲಿ 163 ಪ್ರಕರಣಗಳು ಕಾಣಿಸಿಕೊಂಡಿದೆಯೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದನ್ ಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಚಾರಣಿ, ಜಿಲ್ಲಾ ಕ್ಷಯರೋಗ ನಿವಾರಣಾಧಿಕಾರಿ ಡಾ. ಪ್ರಸನ್ನ ಕುಮಾರ್, ಕೋಲಾರ ತಾಲ್ಲೂಕಿನ ಆರೋಗ್ಯಾಧಿಕಾರಿ ಡಾ. ಎ.ವಿ ನಾರಾಯಣಸ್ವಾಮಿ, ಮುಳಬಾಗಿಲು ತಾಲ್ಲೂಕಿನ ಆರೋಗ್ಯಾಧಿಕಾರಿ ಡಾ. ಸುಗುಣ, ಕೆ.ಜಿ.ಎಫ್ ತಾಲ್ಲೂಕಿನ ಆರೋಗ್ಯಾಧಿಕಾರಿ ಪದ್ಮಾವತಿ, ಜಿಲ್ಲೆಯ ಆಶಾಕಾರ್ಯಕರ್ತರು ಸೇರಿದಂತೆ ಮತ್ತಿತ್ತರು ಭಾಗವಹಿಸಿದ್ದರು.


## ಪುರಸಭೆ ಕಾರ್ಯಾಲಯ, ಹುಣಸಮಾರನಹಳ್ಳಿ

ಯಲಹಂಕ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ-562157 ದೂರವಾಣಿ: 080-23901864
ಇ-ಮೇಲ್: itstaff_ulb_hmhalli@gmail.com ವೆಬ್‌ಸೈಟ್: www.hunasamaranahallitown.mrc.gov.in

ಸಂಖ್ಯೆ: ಹು.ಪು/ತಾ.ಶಾ/ಸಿ.ಆರ್/11/2023-24 ದಿನಾಂಕ: 13-03-2024

### ಟೆಂಡರ್ ಪ್ರಕಟಣೆ (ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಮಾತ್ರ)

ಹುಣಸಮಾರನಹಳ್ಳಿ ಪುರಸಭಾ ವ್ಯಾಪ್ತಿಯಲ್ಲಿನ 2023-24ನೇ ಸಾಲಿನ ಪುರಸಭಾ ನಿಧಿಯಡಿ ಕಾಮಗಾರಿಗಳನ್ನು ಕೈಗೊಳ್ಳಲು ಲೋಕೋಪಯೋಗಿ ಇಲಾಖೆಯ ನೊಂದಾಯಿತ ಅರ್ಹ ದರ್ಜೆ ಗುತ್ತಿಗೆದಾರರು ಹಾಗೂ ನೊಂದಾಯಿತ ಅರ್ಹ ಏಜೆನ್ಸಿದಾರರಿಂದ ಕಾಮಗಾರಿಗಳನ್ನು ನಿರ್ವಹಿಸಲು ಮೊಹರಾದ ಟೆಂಡರ್‌ನ್ನು ಆಹ್ವಾನಿಸಲಾಗಿದೆ

| ಕ್ರಮ. ಸಂಖ್ಯೆ. | ಇಂಡೆಂಟ್ ಸಂಖ್ಯೆ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ವರ್ಗ | ಯೋಜನೆ |
|---|---|---|---|---|
| 1 | DMA/2023-24/EL/WORK_INDENT15747/Call-2 | 10.00 | ಸಾಮಾನ್ಯ | ಪುರಸಭೆ ನಿಧಿ |
| 2 | DMA/2023-24/EL/WORK_INDENT15751/Call-2 | 6.25 | ಸಾಮಾನ್ಯ | ಪುರಸಭೆ ನಿಧಿ |
| 3 | DMA/2023-24/BR/WORK_INDENT15746/Call-2 | 4.94 | ಸಾಮಾನ್ಯ | ಪುರಸಭೆ ನಿಧಿ |
| 4 | DMA/2023-24/WS/WORK_INDENT16402/Call-2 | 29.25 | ಸಾಮಾನ್ಯ | ಪುರಸಭೆ ನಿಧಿ |
| 5 | DMA/2023-24/RD/WORK_INDENT6215/Call-4 | 15.00 | ಸಾಮಾನ್ಯ | ಪುರಸಭೆ ನಿಧಿ |
| 6 | DMA/2023-24/RD/WORK_INDENT17561 | 4.80 | ಸಾಮಾನ್ಯ | ಪುರಸಭೆ ನಿಧಿ |
| 7 | DMA/2023-24/RD/WORK_INDENT17560 | 8.85 | ಸಾಮಾನ್ಯ | ಪುರಸಭೆ ನಿಧಿ |

ಟೆಂಡರ್ ಸಲ್ಲಿಸುವ ವಿವರಗಳು: (1) ಆಕ್ಷೇಪಣೆ / ಮಾಹಿತಿಯನ್ನು ಸಲ್ಲಿಸಲು ದಿನಾಂಕ: 18.03.2024ರ ಸಂಜೆ 5.00 ಗಂಟೆಯವರೆಗೆ. (2) ಕಾಮಗಾರಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 28.03.2024ರ ಸಂಜೆ 5.00 ಗಂಟೆಯವರೆಗೆ. (3) ಟೆಂಡರ್‌ನ ತಾಂತ್ರಿಕ / ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ: 30.03.2024ರ ಸಂಜೆ 5.15 ಗಂಟೆಗೆ. (4) ಹೆಚ್ಚಿನ ವಿವರಗಳಿಗೆ ಕಛೇರಿಯ ತಾಂತ್ರಿಕ ಶಾಖೆಯನ್ನು ಸಂಪರ್ಕಿಸಿ ತಿಳಿದುಕೊಳ್ಳುವುದು ಮತ್ತು ಯಾವುದೇ ತಿದ್ದುಪಡಿ/ಬದಲಾವಣೆಯಿದ್ದಲ್ಲಿ ಕೆ.ಪಿ.ಪಿ ಪೋರ್ಟಲ್ ವಿಳಾಸ https://kppp.karnataka.gov.in ಮೂಲಕ ಮಾತ್ರ ತಿಳಿಸಲಾಗುವುದು.

ಸಹಿ/-
ಮುಖ್ಯಾಧಿಕಾರಿಗಳು,
ಪುರಸಭೆ, ಹುಣಸಮಾರನಹಳ್ಳಿ

ಸಹಿ/-
ಆಡಳಿತಾಧಿಕಾರಿಗಳು,
ಪುರಸಭೆ, ಹುಣಸಮಾರನಹಳ್ಳಿ

DIPR/CP/SPAN/4230/2023-24

## ಡಿಪ್ಲೊಮಾ, ಸರ್ಟಿಫಿಕೇಟ್ ಕೋರ್ಸ್‌ಗೆ ಅರ್ಜಿ

**ಬೆಂಗಳೂರು:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ದೂರ ಶಿಕ್ಷಣ ಘಟಕ, ವಿಸ್ತರಣಾ ನಿರ್ದೇಶನಾಲಯವು 2024-25ನೇ ಶೈಕ್ಷಣಿಕ ಸಾಲಿನಲ್ಲಿ ಎರಡು ಡಿಪ್ಲೊಮಾ ಮತ್ತು ಐದು ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಅರ್ಜಿಗಳನ್ನು ಆಹ್ವಾನಿಸಿದೆ. ಡಿಪ್ಲೊಮಾ ಕೋರ್ಸ್‌ಗಳಾದ ಒಂದು ವರ್ಷದ ಡಿಪ್ಲೊಮಾ (ಕೃಷಿ) ಕೋರ್ಸ್‌ಗೆ ಕೋರ್ಸ್ ಶುಲ್ಕ ರೂ. 10,000/- ಗಳಿದ್ದು, 10ನೇ ತರಗತಿ ಪಾಸಾದವರು ಅರ್ಜಿ ಸಲ್ಲಿಸಬಹುದು ಹಾಗೂ ಒಂದು ವರ್ಷದ ಸ್ನಾತಕೋತ್ತರ ಕೃಷಿ ಡಿಪ್ಲೊಮಾ (ಪಿ.ಜಿ.ಡಿ.ಎ) ಕೋರ್ಸ್‌ಗೆ ಕೋರ್ಸ್ ಶುಲ್ಕ ರೂ. 12,000/- ಗಳಿದ್ದು, ಕೃಷಿ ಪದವೀಧರರು ಅರ್ಜಿ ಸಲ್ಲಿಸಬಹುದು. ಸರ್ಟಿಫಿಕೇಟ್ ಕೋರ್ಸ್‌ಗಳಾದ, ಕೃಷಿಯಲ್ಲಿ ಬೀಜೋತ್ಪಾದನೆ ತಾಂತ್ರಿಕತೆಗಳ ಕೋರ್ಸ್‌ಗೆ ಶುಲ್ಕ ರೂ. 3000/- ಗಳಿದ್ದು, 10ನೇ ತರಗತಿ ಪಾಸಾಗಿರಬೇಕು. ಕೃಷಿಯಲ್ಲಿ ಯಂತ್ರೋಪಕರಣಗಳ ನಿರ್ವಹಣೆ ಕೋರ್ಸ್‌ಗೆ ಶುಲ್ಕ ರೂ. 3000/- ಗಳಿದ್ದು, 10ನೇ ತರಗತಿ ಪಾಸಾಗಿರಬೇಕು. ಜೇನು ಸಾಕಣೆ ಕೋರ್ಸ್‌ಗೆ ಶುಲ್ಕ ರೂ. 3000/- ಗಳಿದ್ದು, 7ನೇ ತರಗತಿ ಪಾಸಾಗಿರಬೇಕು. ಸಮಗ್ರ ಕೃಷಿ ಕೋರ್ಸ್‌ಗೆ ಶುಲ್ಕ ರೂ. 1500/- ಗಳಿದ್ದು, 7ನೇ ತರಗತಿ ಪಾಸಾಗಿರಬೇಕು. ಹಾಗೂ ಸಾವಯವ ಕೃಷಿ (ಅಂಚೆ ಶಿಕ್ಷಣ) ಕೋರ್ಸ್‌ಗೆ ಶುಲ್ಕ ರೂ. 200/-ಗಳಿದ್ದು, ಓದು ಬರಹ ಬಲ್ಲವರು ಅರ್ಜಿ ಸಲ್ಲಿಸಬಹುದು. ಡಿಪ್ಲೊಮಾ ಮತ್ತು ಸರ್ಟಿಪೀಕೇಟ್ ಕೋರ್ಸ್‌ಗಳಿಗೆ 2024ನೇ ಮಾರ್ಚ್ 11ರಿಂದ ಏಪ್ರಿಲ್ 19ರ ವರೆಗೆ ಪ್ರತಿ ಕೋರ್ಸ್‌ಗೆ ಅರ್ಜಿ ಶುಲ್ಕ ರೂ. 100/- ರಂತೆ ಪಾವತಿಸಿ ದೂರ ಶಿಕ್ಷಣ ಘಟಕ, ರೈತ ತರಬೇತಿ ಸಂಸ್ಥೆ, ವಿಸ್ತರಣಾ ನಿರ್ದೇಶನಾಲಯ, ಜಿಕೆವಿಕೆ, ಬೆಂಗಳೂರು-560065 ಹಾಗೂ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕಾರ್ಯವ್ಯಾಪ್ತಿಯಲ್ಲಿ ಬರುವಂತಹ ಕೃಷಿ ವಿಜ್ಞಾನ ಕೇಂದ್ರಗಳಾದ ರಾಮನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಹಾಸನ, ಮಂಡ್ಯ, ಬೆಂಗಳೂರು ಗ್ರಾಮಾಂತರ ಮತ್ತು ತುಮಕೂರು ಜಿಲ್ಲೆಗಳಲ್ಲಿ ಹಾಗೂ ವಿಸ್ತರಣಾ ಶಿಕ್ಷಣ ಘಟಕ, ಮೈಸೂರಿನಲ್ಲಿ ಅರ್ಜಿಗಳನ್ನು ಪಡೆಯಬಹುದು ಅಥವಾ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಜಾಲತಾಣದಿಂದ www.uasbangalore.edu.in ಡೌನ್‌ಲೋಡ್ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ಕೋರ್ಸ್ ಶುಲ್ಕವನ್ನು ಡಿ.ಡಿ. ಮೂಲಕ COMPTROLLER, UAS, GKVK, BANGALORE-560065 ಇವರ ಹೆಸರಿನಲ್ಲಿ ಪಡೆದು ಏಪ್ರಿಲ್ 19ರ ಮಧ್ಯಾಹ್ನ 4.00 ಗಂಟೆ ಒಳಗೆ ಸಂಯೋಜಕರು ಮತ್ತು ಮುಖ್ಯಸ್ಥರು, ದೂರ ಶಿಕ್ಷಣ ಘಟಕ, ರೈತ ತರಬೇತಿ ಸಂಸ್ಥೆ, ವಿಸ್ತರಣಾ ನಿರ್ದೇಶನಾಲಯ, ಕೃ.ವಿ.ವಿ., ಜಿಕೆವಿಕೆ, ಬೆಂಗಳೂರು -560065 ರವರಿಗೆ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ: 080-23636353 ಅನ್ನು ಸಂಪರ್ಕಿಸಬಹುದೆಂದು ಕೃಷಿ ವಿಶ್ವವಿದ್ಯಾಲಯ ಜಿಕೆವಿಕೆ ವಿಸ್ತೀರಣಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರಿಂದ ದೂರು ಸ್ವೀಕಾರ

**ಮಂಡ್ಯ:** ಮಂಡ್ಯ ಲೋಕಾಯುಕ್ತ ವಿಭಾಗದ ಅಧಿಕಾರಿಯವರುಗಳು ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲ್ಲೂಕಿನಲ್ಲಿ ಸಾರ್ವಜನಿಕರ ಕುಂದುಕೊರತೆ ಸಭೆಯನ್ನು ಮಾರ್ಚ್ 18 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಕೆ.ಆರ್.ಪೇಟೆ ತಾಲ್ಲೂಕು ಕಚೇರಿಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮಂಡ್ಯ ಲೋಕಾಯುಕ್ತ ವಿಭಾಗದ ಅಧಿಕಾರಿಯವರುಗಳು ಸರ್ಕಾರಿ ಮತು ಅರೆಸರ್ಕಾರಿ ಕಚೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳು ಸರ್ಕಾರಿ ಕೆಲಸ ಮಾಡಿಕೊಡಲು ಅನಗತ್ಯ ವಿಳಂಬ ಮಾಡಿದ ಬಗ್ಗೆ ಹಾಗೂ ಭ್ರಷ್ಟಾಚಾರದ ಬಗ್ಗೆ ದೂರು/ ಅಹವಾಲುಗಳನ್ನು ಸ್ವೀಕಾರ ಮಾಡಲಾಗುವುದು. ಡಿ.ವೈ.ಎಸ್.ಪಿ ಸುನಿಲ್‌ಕುಮಾರ್. ಎಚ್. ಟಿ, ಮಂಡ್ಯ ಪೊಲೀಸ್ ಇನ್ಸ್‌ಪೆಕ್ಟರ್ ಹಾಗೂ ಕರ್ನಾಟಕ ಲೋಕಾಯುಕ್ತರಾದ ಮೋಹನ್ ರೆಡ್ಡಿ ಆರ್.ಎಂ, ಪ್ರಕಾಶ್.ಜಿ.ಕೆ, ಬ್ಯಾಟರಾಯಗೌಡ. ಬಿ.ಪಿ ಅವರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಕರ್ನಾಟಕ ಲೋಕಾಯುಕ್ತ ಮಂಡ್ಯ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## 18ರಂದು ಅಪ್ರೆಂಟಿಸ್ ಶಿಪ್

**ಮಂಡ್ಯ:** ಅಪ್ರೆಂಟಿಸ್ ಶಿಪ್ ಮೇಳವನ್ನು ಮಾರ್ಚ್ 18 ರಂದು ಮಂಡ್ಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ. ವಿವಿಧ ಪ್ರತಿಷ್ಠಿತ ಉದ್ದಿಮೆಗಳು ಪಾಲ್ಗೊಳ್ಳುತ್ತಿದ್ದು, ಈ ಮೇಳದಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಭಾಗವಹಿಸಿ ಇದರ ಪ್ರಯೋಜನ ಪಡೆದುಕೊಳ್ಳಲು ಕೋರಿದೆ. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ನೋಡಲ್ ಆಫೀಸರ್ ತೇಜೇಂದ್ರ( ಮೊ. ಸಂ. 9844139308) ಹಾಗೂ ಖದೀರ್ ಅಹ್ಮದ್ ( ಮೊ. ಸಂ. 9845801637) ರವರನ್ನು ಸಂಪರ್ಕಿಸಬಹುದಾಗಿದೆ ಎಂದು ಮಂಡ್ಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉದ್ಯೋಗಕ್ಕಾಗಿ ನೇರ ಸಂದರ್ಶನ

**ಮಂಡ್ಯ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಮೆ// ರಾಜ್ ಬಯೋ ಆರ್ಗ್ಯಾನಿಕ್, ಮೆ // ಬಿ. ಜೆಡ್ ಫೈನಾನ್ಸ್ ಪ್ರೈ. ಲಿ., ಮೆ// ಎರಿಯಂಟ್ ಇಂಡಿಯಾ ಪ್ರೈ ಲಿ., ಮತ್ತು ಮೆ// ದ್ವಾರಕ ಗ್ರಾಮೀಣ ಫೈನಾನ್ಸಿಯಲ್ ಸರ್ವಿಸಸ್ ಪ್ರೈ. ಲಿ. ಸಂಸ್ಥೆಗಳ ಸಹಭಾಗಿತ್ವದಲ್ಲಿ ಉದ್ಯೋಗ ನೀಡುವ ಸಂಬಂಧ ಮಾ.15ರ ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನ ನಡೆಯಲಿದೆ. ಆಸಕ್ತರು ಎಸ್. ಎಸ್. ಎಲ್. ಸಿ, ಪಿ.ಯು.ಸಿ, ಐ.ಟಿ.ಐ (ಯಾವುದೇ ಟ್ರೇಡ್) ಹಾಗೂ ಯಾವುದೇ ಪದವಿ ಉತ್ತೀರ್ಣರಾದ 18 ರಿಂದ 28 ವರ್ಷದೊಳಗಿನ ಅಭ್ಯರ್ಥಿಗಳು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ತಮ್ಮ ಬಯೋಡೇಟಾದೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ. 08232- 295124, 9164642684 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

# ಗ್ಯಾರಂಟಿ ಸಮಾವೇಶವನ್ನು ಯಶಸ್ವಿಗೊಳಿಸಿ : ಕೆ.ಮರೀಗೌಡ

**ಮೈಸೂರು:** ಮೈಸೂರಿನಲ್ಲಿ ಇದೇ ತಿಂಗಳು 15ರಂದು ಶುಕ್ರವಾರ ನಡೆಯುವ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಸಮಾವೇಶವನ್ನು ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮಹಿಳೆಯರು ಬಂದು ಯಶಸ್ವಿಗೊಳಿಸಬೇಕೆಂದು ಮೂಡಾ ಅಧ್ಯಕ್ಷ ಕೆ.ಮರೀಗೌಡ ಮನವಿ ಮಾಡಿದರು.

ನಗರದ ಕಾಂಗ್ರೆಸ್ ಕಛೇರಿಯಲ್ಲಿ ನಡೆದ ಚಾಮುಂಡೇಶ್ವರಿ ಕ್ಷೇತ್ರದ ಕಾರ್ಯಕರ್ತರ ಗ್ಯಾರಂಟಿ ಪೂರ್ವ ಭಾವಿ ಸಭೆ ಹಾಗೂ ಇಲವಾಲ ಬ್ಲಾಕ್ ಮಹಿಳಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷೆ ಭಾಗ್ಯಲೋಕೇಶ್ ಅವರ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಮಾತನಾಡಿದ ಅವರು ಚಾಮುಂಡೇಶ್ವರಿ ಕ್ಷೇತ್ರದ ಜನತೆಯ ಆಶೀರ್ವಾದದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ನನ್ನ ಮೇಲೆ ವಿಶ್ವಾಸವಿಟ್ಟು ಮೂಡಾ ಅಧ್ಯಕ್ಷಸ್ಥಾನ ನೀಡಿದ್ದಾರೆ. ಮುಖ್ಯಮಂತ್ರಿಗಳಿಗೆ ಹಾಗೂ ಕ್ಷೇತ್ರದ ಜನತೆಯ ಹೆಸರಿಗೆ ಚ್ಯುತಿ ಬಾರದಂತೆ ಕೆಲಸ ಮಾಡುವೆ ಎಂದ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಅಂಬೇಡ್ಕರ್ ರವರ ಸಂವಿಧಾನದ ಆಶಯದಂತೆ ಮಹಿಳಾ ಸಬಲೀಕರಣಕ್ಕೆ ಹೆಚ್ಚು ಒತ್ತು ಕೊಟ್ಟು ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಯುವನಿಧಿ, ಅನ್ನಭಾಗ್ಯ ಯೋಜನೆಗಳನ್ನು ಜಾತಿ, ಭೇದವಿಲ್ಲದೆ ಜಾರಿಗೆ ತಂದಿದ್ದರಿಂದ ಇಂದು ರಾಜ್ಯದ ಮಹಿಳೆಯರು ಬಡವರು ನೆಮ್ಮದಿಯಾಗಿದ್ದಾರೆ. ಕಾಂಗ್ರೆಸ್ ಸರ್ಕಾರದ ಈ ಗ್ಯಾರಂಟಿ ಯೋಜನೆಗಳನ್ನು ಜನರಿಗೆ ತಿಳಿಸಬೇಕು.




ಕೇಂದ್ರ ಸರ್ಕಾರ ಸುಳ್ಳು ಭರವಸೆಗಳನ್ನು ನೀಡುತ್ತಾ ದಿನನಿತ್ಯ ವಸ್ತುಗಳ ಬೆಲೆಗಳನ್ನು ಏರಿಸುತ್ತಾ ದೇಶವನ್ನು ದಿವಾಳಿಯತ್ತ ಕೊಂಡೊಯ್ಯುತ್ತಿದೆ. ಕೇಂದ್ರ ಸರ್ಕಾರದ ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪಿದೆಯೇ ಎಂದು ಪ್ರಶ್ನಿಸಿದ ಅವರು ಮುಂಬರುವ ಲೋಕಸಭಾ ಚುನಾವಣೆಯಲ್ಲಿ 20ಕ್ಕೂ ಹೆಚ್ಚು ಸ್ಥಾನಗಳನ್ನು ಕಾಂಗ್ರೆಸ್ ಪಕ್ಷ ಗೆಲ್ಲಲ್ಲಿದ್ದು. ಗೆಲುವು ಮೈಸೂರಿನಿಂದಲೇ ಪ್ರಾರಂಭವಾಗಬೇಕು. ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ಸೋತಿರಬಹುದು, 1983 ರಿಂದಲೂ ಸಿದ್ದರಾಮಯ್ಯರವರ ಬೆಂಬಲಕ್ಕೆ ನಿಂತ ನೀವು 341 ಭೂತಗಳ ಕಾರ್ಯಕರ್ತರು, ಮುಖಂಡರು ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಗ್ಯಾರಂಟಿ ಸಮಾವೇಶವನ್ನು ಯಶಸ್ವಿಗೊಳಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ. ಬಿ.ಜೆ. ವಿಜಯ್ ಕುಮಾರ್, ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷೆ ಲತಾ ಸಿದ್ದಶೆಟ್ಟಿ ಟಿ.ಕೆ, ನಗರ ಅಧ್ಯಕ್ಷೆ ಪುಷ್ಪಲತಾ ಚಿಕ್ಕಣ್ಣ, ಕೆಪಿಸಿಸಿ ಸದಸ್ಯರಾದ ನರಸೇಗೌಡ, ನಾಗವಾಲ, ನರೇಂದ್ರ, ಮಾಜಿ ಮೇಯರ್ ಟಿ.ಬಿ. ಚಿಕ್ಕಣ್ಣ, ಮೋದಾಮಣಿ, ಜಿ.ಪಂ.ಮಾಜಿ ಸದಸ್ಯರಾದ ಲೇಖಾ ವೆಂಕಟೇಶ್, ಕೂರ್ಗಳ್ಳಿ ಮಹಾದೇವ, ಉದ್ಯಮಿ, ಗಂಧನಹಳ್ಳಿ ವೆಂಕಟೇಶ್, ಎಪಿಎಂಸಿ ಮಾಜಿ ಅಧ್ಯಕ್ಷ ಹೊಸಹುಂಡಿ ರಘು, ಶಿವಣ್ಣ, ಹಿನಕಲ್ ಹೊನ್ನಪ್ಪ, ಮಾರ್ಬಳ್ಳಿ ಕುಮಾರ್, ನಾಗರತ್ನ, ಹರೀಶ್ ಮೊಗಣ್ಣ, ಕೃಷ್ಣಕುಮಾರ ಸಾಗರ್, ಪ್ರೊ. ಶಿವಕುಮಾರ್, ಶಿವ ಪ್ರಸಾದ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಬಿ.ಗುರುಸ್ವಾಮಿ, ಜೆ. ಸತೀಶ್ ಕುಮಾರ್, ಜವರೇಗೌಡ, ಕೆಂಚಪ್ಪ, ರವಿ ಚಂದ್ರು, ಬಸವರಾಜು, ಆನಂದೂರು ರಾಮೇಗೌಡ, ಪ್ರಕಾಶ್, ರಾಜಶೇಖರ ಮೂರ್ತಿ, ಹಂಚ್ಯಾ ಸಣ್ಣಸ್ವಾಮಿ, ಮಹದೇವ ಹಾಜರಿದ್ದರು.

# 32 ಬಾಲ ಕಾರ್ಮಿಕರ ರಕ್ಷಣೆ

## ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಮಾಹಿತಿ



**ಬೆಂಗಳೂರು ಗ್ರಾಮಾಂತರ ಜಿಲ್ಲೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಿ, ಜಿಲ್ಲಾ ಬಾಲಕಾರ್ಮಿಕ ಯೋಜನೆ ಮತ್ತು ಕಾರ್ಮಿಕ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ ನಿಷೇಧ ಮತ್ತು ನಿಯಂತ್ರಣ ಕಾಯ್ದೆ 1986 ಮತ್ತು ತಿದ್ದುಪಡಿ ಕಾಯ್ದೆ 2016ರ ಬಗ್ಗೆ ಜನಜಾಗೃತಿ ಮೂಡಿಸಲು ಸಂಚಾರಿ ವಾಹನಕ್ಕೆ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು 14 ವರ್ಷದೊಳಗಿನ ಯಾವುದೇ ಮಕ್ಕಳನ್ನು ಯಾವುದೇ ಕ್ಷೇತ್ರದಲ್ಲಿ ಹಾಗೂ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿದಲ್ಲಿ ಅಂತಹವರಿಗೆ ಕನಿಷ್ಠ 06 ತಿಂಗಳಿಗಿಂತ ಕಡಿಮೆ ಇಲ್ಲದಂತೆ ಹಾಗೂ 02 ವರ್ಷದವರೆಗೆ ಜೈಲು ಶಿಕ್ಷೆ ಮತ್ತು 20 ಸಾವಿದಿಂದ 50 ಸಾವಿರುಗಳವರೆಗೂ ದಂಡ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ ಎಂದು ತಿಳಿಸಿದರು.

ಬಾಲಕಾರ್ಮಿಕ ಪದ್ಧತಿಯಂತಹ ಸಮಾಜ ವಿರೋಧಿ ಆಚರಣೆ ಕುರಿತು ಇರುವ ಕಾನೂನುಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಅವಶ್ಯಕವಾಗಿದೆ, ಜಿಲ್ಲೆಯ ನಾಲ್ಕೂ ತಾಲ್ಲೂಕುಗಳಲ್ಲಿ ಅಧಿಕಾರಿಗಳು ಅ ಬಗ್ಗೆ ದೊಡ್ಡ ಮಟ್ಟದಲ್ಲಿ ಅರಿವು ಮೂಡಿಸಬೇಕಿದೆ ಎಂದು ಸೂಚನೆ ನೀಡಿದರು.

ಪ್ರಸ್ತುತ 2023-24ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರ ಅನಿರೀಕ್ಷಿತ ತಪಾಸಣೆ ಮತ್ತು ದಾಳಿಯಲ್ಲಿ 32 ಬಾಲ/ಕಿಶೋರ ಕಾರ್ಮಿಕರನ್ನು ರಕ್ಷಿಸಲಾಗಿದ್ದು ಸಂಬಂಧಪಟ್ಟ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ.

ದುಡಿಯುವ ಮಕ್ಕಳು / ಕಿಶೋರರು ಕಂಡುಬಂದಲ್ಲಿ ಸಾರ್ವಜನಿಕರು ತಕ್ಷಣವೇ ಮಕ್ಕಳ ಉಚಿತ ಸಹಾಯವಾಣಿ-1098 ಹಾಗೂ ಪೊಲೀಸ್ ಇಲಾಖೆಯ ತುರ್ತು ಸಹಾಯವಾಣಿ ? 112 ಗೆ ಕರೆ ಮಾಡಿ ಮಕ್ಕಳನ್ನು ರಕ್ಷಿಸ ಬೇಕೆಂದು ಕರೆ ನೀಡಿದರು.

ಜಿಲ್ಲಾಯಾದ್ಯಂತ ಅನಿರೀಕ್ಷಿತ ತಪಾಸಣೆ ಮತ್ತು ದಾಳಿಗಳನ್ನು ಕೈಗೊಳ್ಳುವುದರ ಜತೆಗೆ ಜನರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಎಲ್ಲ ಮಕ್ಕಳು ಸಹ ಕಡ್ಡಾಯವಾಗಿ ಶಾಲೆಗಳಲ್ಲಿ ಶಿಕ್ಷಣ ನೀಡಿ, ಉತ್ತಮ ಪ್ರಜೆಗಳನ್ನಾಗಿ ರೂಪಿಸುವುದೇ ಮುಖ್ಯ ಉದ್ದೇಶವಾಗಿದೆ.

ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ ನಿಷೇಧ ಮತ್ತು ನಿಯಂತ್ರಣ ಕಾಯ್ದೆ 1986 ಮತ್ತು ತಿದ್ದುಪಡಿ ಕಾಯ್ದೆ 2016ರಡಿಯಲ್ಲಿ ಜಿಲ್ಲೆಯಲ್ಲಿ ಅನಿರೀಕ್ಷಿತ ದಾಳಿ ನಡೆಸಿ ರಕ್ಷಿಸಲಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಕ್ಕಳಿಗೆ ಎಸ್.ಸಿ.ಎಸ್.ಪಿ. ಮತ್ತು ಟಿ.ಎಸ್.ಪಿ ಯೋಜನೆಯಡಿ ಶೈಕ್ಷಣಿಕ ಸಾಮಾಗ್ರಿಗಳನ್ನು ಮತ್ತು ಅವರ ಪೋಷಕರಿಗೆ ಆಹಾರ ಧಾನ್ಯಗಳ ಕಿಟ್ ಗಳನ್ನು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅವರು ವಿತರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ನಾಗೇಂದ್ರ ಹೆಚ್ ಆರ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಸುಬ್ಬಾರಾವ್.ಎಸ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂಧಿಗಳಾದ ಶ್ರೀಧರ್, ಶಿವಪ್ಪ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಸಿಬ್ಬಂಧಿಗಳಾದ ಕಾವ್ಯ ಮತ್ತು ಲಕ್ಷ್ಮೀಕಾಂತ ಹಾಜರಿದ್ದರು.



**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನೆ ಮತ್ತು ಕಾರ್ಮಿಕ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ಮತ್ತು ತಿದ್ದುಪಡಿ ಕಾಯ್ದೆ 2016ರ ಬಗ್ಗೆ ಜನಜಾಗೃತಿ ಸಂಚಾರಿ ವಾಹನ 2024 ಕಾರ್ಯಕ್ರಮವನ್ನು ಮಾನ್ಯ ಜಿಲ್ಲಾಧಿಕಾರಿಗಳಾದ ಡಾ.ಶಿವಶಂಕರ್ .ಎನ್ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆಯನ್ನು ನೀಡಿದರು. 2023-24ನೇ ಸಾಲಿನಲ್ಲಿ ಬಾಲಕಾರ್ಮಿಕರನ್ನು ಹಾಗೂ ಕಿಶೋರ ಕಾರ್ಮಿಕರನ್ನು ನೇಮಿಸಿಕೊಂಡಿರುವವರ ವಿವಿಧ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಅನಿರೀಕ್ಷಿತ ತಪಾಸಣೆ ಮತ್ತು ಹಠಾತ್ ದಾಳಿಯನ್ನು ಕೈಗೊಂಡಾಗ ಕಂಡುಬಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಬಾಲಕಾರ್ಮಿಕ ಮಕ್ಕಳಿಗೆ ಎಸ್.ಸಿ.ಎಸ್.ಪಿ. ಮತ್ತು ಟಿ.ಎಸ್.ಪಿ ಯೋಜನೆಯಡಿ ಶೈಕ್ಷಣಿಕ ಸಾಮಾಗ್ರಿಗಳನ್ನು ಮತ್ತು ಅವರ ಪೋಷಕರಿಗೆ ಆಹಾರ ಧಾನ್ಯಗಳ ಕಿಟ್ ಗಳನ್ನು ವಿತರಿಸಿದರು.**

# ಮಹಿಳಾ ದಿನಾಚರಣೆ ಪ್ರಯುಕ್ತ ಮಹಿಳೆಯರಿಗೆ ಕ್ರೀಡಾಕೂಟ ಆಯೋಜನೆ

**ಬೆಂಗಳೂರು ಗ್ರಾಮಾಂತರ ಜಿಲ್ಲೆ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ, ಮಾರ್ಚ್ 16 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಹಯೋಗದಲ್ಲಿ ಮಹಿಳೆಯರಿಗಾಗಿ ಕೆಳಕಂಡ ಕ್ರೀಡಾಕೂಟಗಳನ್ನು ಆಯೋಜನೆ ಮಾಡಲಾಗಿದೆ. ಮಹಿಳೆಯರು ಮಾರ್ಚ್ 16 ರಂದು ಬೆಳಿಗ್ಗೆ 9.00 ಗಂಟೆಗೆ ದೇವನಹಳ್ಳಿ ಟೌನ್ ಕ್ರೀಡಾಂಗಣದಲ್ಲಿ ವರದಿ ಮಾಡಿಕೊಂಡು ನೋಂದಣಿ ಮಾಡಿಕೊಳ್ಳುವುದು. ಕ್ರೀಡಾ ಸ್ಪರ್ಧೆಗಳು ಬೆಳಿಗ್ಗೆ 10.30 ಗಂಟೆಗೆ ಪ್ರಾರಂಭವಾಗುವುದು. 19 ವರ್ಷ ಮೇಲ್ಪಟ್ಟ ಮಹಿಳೆಯರಿಗೆ 'ಹಗ್ಗ ಜಗ್ಗಾಟ'(ಗುಂಪು ಕ್ರೀಡೆ) ಇದರಲ್ಲಿ 6 ಜನ ಭಾಗಿಯಾಗಬಹುದು. 19-40 ವರ್ಷ ಒಳಪಟ್ಟ ಮಹಿಳೆಯರಿಗೆ(ತಲಾ ಒಬ್ಬರು) ಮ್ಯೂಸಿಕಲ್ ಚೇರ್, ಮೆಮೋರಿ ಟೆಸ್ಟ್, ಬಾಲ್‌ಇನ್ ದಿ ಬಕೆಟ್, 50 ಮೀ ವಾಕ್ ರೇಸ್, ಹೂಪ್ಸ್ ರಿಲೇ ಕ್ರೀಡೆಗಳಲ್ಲಿ 40 ವರ್ಷ ಮೇಲ್ಪಟ್ಟ ಮಹಿಳೆಯರು ಭಾಗಿಯಾಗಬಹುದು. ಈ ಕ್ರೀಡೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸಿ. ಮಾಹಿತಿಗಾಗಿ 9980590960 / 9632778567 / 080-29787443 ಈ ಸಂಖ್ಯೆಗೆ ಸಂಪರ್ಕಿಸಿ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವ ಚೌಪಾಲ್ ಕಾರ್ಯಕ್ರಮ



**ಮೈಸೂರು:** ಬಿಜೆಪಿ ಮೈಸೂರು ನಗರ ಯುವಮೋರ್ಚಾ ವತಿಯಿಂದ ರಾಜ್ಯ ಬಿಜೆಪಿ ಯುವ ಮೋರ್ಚಾ ಆದೇಶದ ಮೇರೆಗೆ ನಮೋ ಯುವ ಚೌಪಾಲ್ ಕಾರ್ಯಕ್ರಮವನ್ನು ಚಾಮರಾಜ ವಿಧಾನಸಭಾ ಕ್ಷೇತ್ರದಲ್ಲಿರುವ ಗೂಕುಲಂ,6ನೇ ವಾರ್ಡಿನ ಯುವಕರೊಂದಿಗೆ ಹಾಗೂ ವಾರ್ಡ್ ನಂಬರ್ 58 ಚಾಮುಂಡೇಶ್ವರಿ ಕ್ಷೇತ್ರದ ಯುವಕರೊಂದಿಗೆ ಮತ್ತು ವಿಜಯನಗರ ಚಾಮುಂಡೇಶ್ವರಿ ಕ್ಷೇತ್ರ ಗ್ರಾಮಾಂತರ ಯುವಕರೊಂದಿಗೆ ಪ್ರಧಾನಿ ನರೇಂದ್ರ ಮೋದಿಜಿ ರವರ ಯೋಜನೇಯ ಅಭಿವೃದ್ಧಿ ಕಾರ್ಯಗಳನ್ನು ಯುವಕರಿಗೆ ತಿಳಿಸಲಾಯಿತು. ಮೈಸೂರು ನಗರ ಪ್ರಧಾನ ಕಾರ್ಯದರ್ಶಿಗಳಾದ ಗಿರಿಧರ್ ರವರು ಹಾಗು ಮೈಸೂರು ನಗರ ಯುವಮೋರ್ಚಾ ಅಧ್ಯಕ್ಷರಾದ ರಾಕೇಶ್ ಗೌಡ, ಪ್ರಧಾನ ಕಾರ್ಯದರ್ಶಿಗಳಾದ ಡಿ ಲೋಹಿತ್, ಸಚಿನ್, ನಗರ ಪಾಲಿಕೆ ಸದಸ್ಯರಾದ ಶರತ್, ಕಾರ್ಯಕ್ರಮದ ಸಂಚಾಲಕರಾದ ಭರತ್ ,ಚಾಮರಾಜ ವಿಧಾನಸಭಾ ಕ್ಷೇತ್ರ ಮಂಡಲ ಅಧ್ಯಕ್ಷರಾದ ಶ್ರೀ ದಿನೇಶ್ ಗೌಡ, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಮಂಡಲ ಅಧ್ಯಕ್ಷರಾದ ಶ್ರೀ ರಾಕೇಶ್ ಭಟ್, ಯುವ ಮುಖಂಡರಾದ ಕಾರ್ತಿಕ್ ಮರಿಯಪ್ಪ, ಅರ್ಜುನ್, ಶಿವು, ನಿಖಿಲ್, ಪ್ರಕಾಶ್, ಕಿರಣ್, ಅಶೋಕ್, ಮನೀಷ್, ಚಾಮುಂಡೇಶ್ವರಿ ಗ್ರಾಮಂತರ ಯುವ ಮುಖಂಡರಾದ ಶಿವು ಹಾಗು ಮುಂತಾದವರು ಕಾರ್ಯಕ್ರಮಗಳಲ್ಲಿ ಉಪಸ್ಥಿತರಿದ್ದರು.



**ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ಪದ್ಮಾವತಿ ಅವರು ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ಭೇಟಿ ನೀಡಿ ನಿಗಮದ ಯೋಜನೆಗಳ ಪ್ರಗತಿ ಪರಿಶೀಲಯನ್ನು ನಡೆಸಿದರು. ನಂತರ ದೊಡ್ಡಬಳ್ಳಾಪುರ ತಾಲೂಕಿನ ಆಡೋಹಳ್ಳಿಯಲ್ಲಿರುವ ವಿಜ್ಞಾನ ಕೃಷಿ ಕೇಂದ್ರ, ಲಿಂಗತ್ವ ಅಲ್ಪ ಸಂಖ್ಯಾತರಿಗೆ ಗುರುತಿನ ಚೀಟಿ ವಿತರಿಸಿದರು ಮತ್ತು ಶ್ರೀ ಶಕ್ತಿ ಒಕ್ಕೂಟ ಹಾಗೂ ಉದ್ಯೋಗಿನಿ ಯೋಜನೆಯ ಫಲಾನುಭವಿಗಳೊಂದಿಗೆ ಸಮಾಲೋಚನೆ ನಡೆಸಿದರು. ಮಹಿಳಾ ಅಭಿವೃದ್ಧಿ ನಿಗಮದ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರಾದ, ವಿಜಯ ಕುಮಾರಿ, ಶೇಷಾಭಿವೃದ್ಧಿ ಯೋಜನಾಧಿಕಾರಿ ರವಿಕುಮಾರ್, ಮಾತೃ ವಂದನೆ ಯೋಜನೆಯ ಜಿಲ್ಲಾ ಸಂಯೋಜಕರು ರಾಜಶೇಖರ್ ಉಪಸ್ಥಿತರಿದ್ದರು.**

# ಕನ್ನಡ ಅನುಷ್ಠಾನ- ಶೇ.60ರ ಪ್ರಮಾಣದಲ್ಲಿ ಕನ್ನಡ ನಾಮಫಲಕ ಅಳವಡಿಕೆ ವರದಿಗೆ ಸೂಚನೆ: ಜಿಲ್ಲಾಧಿಕಾರಿ

**ರಾಮನಗರ:** ಜಿಲ್ಲೆಯಲ್ಲಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ ಮತ್ತು ತಿದ್ದುಪಡಿ ವಿಧೇಯಕ ಅನುಸಾರ ಕಾಲಮಿತಿಯೊಳಗೆ ಶೇ. 60 ರಷ್ಟು ಪ್ರಮಾಣದಲ್ಲಿ ಕನ್ನಡ ಭಾಷಾ ಬಳಕೆ ಹಾಗೂ ಕನ್ನಡ ಅನುಷ್ಠಾನ ಕುರಿತಂತೆ ಕ್ರಮವಹಿಸಬೇಕು. ಈ ಕುರಿತಂತೆ ವಾರದೊಳಗೆ ಮಾಹಿತಿ ಸಂಗ್ರಹಿಸಿ ವರದಿ ನೀಡುವಂತೆ ಉಪವಿಭಾಗಾಧಿಕಾರಿಗಳು ಹಾಗೂ ತಹಶೀಲ್ದಾರರಿಗೆ ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಸಭೆ ನಡೆಸಿದ ಅವರು, ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ-2022 ಮತ್ತು ತಿದ್ದುಪಡಿ ವಿಧೇಯಕ 2024 ಅನ್ನು ಅನುಷ್ಠಾನಗೊಳಿಸಲು ಈಗಾಗಲೇ ತಾಲ್ಲೂಕು ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ. ಕನ್ನಡ ಅನುಷ್ಠಾನ ಕುರಿತಂತೆ ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾ ಮಟ್ಟದ ಸಮಿತಿಗೆ ವರದಿ ನೀಡಬೇಕು ಎಂದು ಸೂಚನೆ ನೀಡಿದರು.

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ ಮತ್ತು ತಿದ್ದುಪಡಿ ವಿಧೇಯಕ ಅನುಸಾರ ನಗರ ಪ್ರದೇಶದ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸರ್ಕಾರ ಮತ್ತು ಸ್ಥಳೀಯ ಪ್ರಾಧಿಕಾರಗಳಿಂದ ಅನುಮತಿ ಮತ್ತು ಮಂಜೂರಾತಿಯೊಂದಿಗೆ ಕಾರ್ಯನಿರ್ವಹಿಸುತ್ತಿರುವ ವಾಣಿಜ್ಯ, ಕೈಗಾರಿಕೆ ಮತ್ತು ವ್ಯವಹಾರ ಉದ್ಯಮಗಳು, ಟ್ರಸ್ಟ್‌ಗಳು, ಸಮಾಲೋಚನೆ ಕೇಂದ್ರ, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮಳಿಗೆಗಳು, ಬ್ಯಾಂಕ್ ಗಳು, ಕೈಗಾರಿಕೆಗಳು, ಶಿಕ್ಷಣ ಸಂಸ್ಥೆಗಳು, ಹೋಟೆಲ್‌ಗಳು ಹಾಗೂ ಎಲ್ಲ ಖಾಸಗಿ ಸಂಸ್ಥೆಗಳು, ಮನರಂಜನಾ ಕೇಂದ್ರಗಳು, ಹೋಟೆಲ್‌ಗಳು ಒಳಗೊಂಡಂತೆ ಇತರೆ ಸಂಸ್ಥೆಗಳು ಅಳವಡಿಸಿರುವ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು ಶೇ.60 ರಷ್ಟು ಪ್ರಮಾಣದಲ್ಲಿ ಪ್ರದರ್ಶಿಸಲಾಗಿದೆ ಮತ್ತು ನಾಮಫಲಕದಲ್ಲಿ ಕನ್ನಡ ಭಾಷೆಯು ಮೇಲ್ಭಾಗದಲ್ಲಿ ಪ್ರದರ್ಶಿತವಾಗಿದೆ ಎಂಬುದನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳಬೇಕು. ಇದಲ್ಲದೇ ರಸ್ತೆಗಳು ಮತ್ತು ಬಡಾವಣೆ ಪ್ರದೇಶಗಳ ಹೆಸರು ಸೇರಿದಂತೆ ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳ ಮತ್ತು ಸ್ಥಳೀಯ ಪ್ರಾಧಿಕಾರಗಳ ಮೇಲ್ವಿಚಾರಣೆಯಲ್ಲಿ ಹಾಕಲಾಗಿರುವ ಫಲಕಗಳ ಮೇಲೆ ಕನ್ನಡವನ್ನು ಬಳಸಬೇಕು. ಈ ಕುರಿತಂತೆ ಪರಿಶೀಲನೆ ನಡೆಸಿ ಮುಂದಿನ ಒಂದು ವಾರದಲ್ಲಿ ವರದಿ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕನ್ನಡ ಭಾಷೆಯಲ್ಲಿ ನಿಯಮಾನುಸಾರ ನಾಮಫಲಕ ಅಳವಡಿಸದೇ ಇರುವವರಿಗೆ ಕಾಲಾವಕಾಶ ನೀಡಿ, ನಿಯಮದ ಬಗ್ಗೆ ಅರಿವು ಮೂಡಿಸಿ ನಾಮಫಲಕಗಳಲ್ಲಿ ಶೇ. 60ರ ಪ್ರಮಾಣದಲ್ಲಿ ಕನ್ನಡ ಭಾಷೆಯಲ್ಲಿ ನಾಮಫಲಕ ಬರೆಸಿ ಅಳವಡಿಸುವಂತೆ ತಿಳುವಳಿಕೆ ನೀಡಿ ಕಾಲಮಿತಿಯೊಳಗೆ ಅಳವಡಿಕೆಗೆ ಸೂಚನೆ ನೀಡಿ ಎಂದು ಹೇಳಿದರು.

ಸರ್ಕಾರಿ ಮತ್ತು ಸರ್ಕಾರದ ಅಧೀನ ಸಂಸ್ಥೆಗಳು, ಸ್ಥಳೀಯ ಪ್ರಾಧಿಕಾರಿಗಳು ಹೊರಡಿಸುವ ಎಲ್ಲ ಟೆಂಡರ್ ಅಧಿಸೂಚನೆ, ಜಾಹೀರಾತುಗಳು, ಅರ್ಜಿ ನಮೂನೆ, ಡಿಜಿಟಲ್ ನಮೂನೆ ಪ್ರಮಾಣಪತ್ರ ಮತ್ತು ಅಧಿಸೂಚನೆಗಳು, ಬ್ಯಾನರ್, ಫ್ಲೆಕ್ಸ್, ಎಲೆಕ್ಟ್ರಾನಿಕ್ ಫಲಕಗಳು, ನೋಟಿಸ್‌ಗಳು, ರಸೀದಿ ಬಿಲ್ಲುಗಳು, ಪತ್ರವ್ಯವಹಾರಗಳು ಪ್ರಮುಖವಾಗಿ ನಿಯಮಾನುಸಾರ ಕನ್ನಡ ಭಾಷೆಯಲ್ಲೇ ಇರುವಂತೆ ನೋಡಿಕೊಳ್ಳಬೇಕು. ಈ ಕುರಿತಂತೆ ಕಾಲಕಾಲಕ್ಕೆ ಪರಿಶೀಲನೆ ನಡೆಸಲು ಸೂಚನೆ ನೀಡಿದರು.

ಗ್ರಾಮೀಣ ಭಾಗದಲ್ಲಿ ಅಳವಡಿಸಿರುವ ನಾಮಫಲಕಗಳ ಪರಿಶೀಲನೆ, ಆಯಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ನಡೆಸಬೇಕು. ನಗರ ಪ್ರದೇಶಗಳಲ್ಲಿ ಅಳವಡಿಸಿರುವ ನಾಫಲಕಗಳ ಪರಿಶೀಲನೆ ನಗರ ಸ್ಥಳೀಯ ಸಂಸ್ಥೆಗಳು ಮುಖ್ಯಾಧಿಕಾರಿಗಳು, ಪೌರಾಯುಕ್ತರು ಪರಿಶೀಲನೆ ನಡೆಸಬೇಕು. ವಾಣಿಜ್ಯ ಮಳಿಗೆಗಳು, ಕೈಗಾರಿಕಾ ಸಂಸ್ಥೆಗಳ ನಾಮಫಲಕಗಳನ್ನು ಕೈಗಾರಿಕಾ ಇಲಾಖೆ ಜಂಟಿ ನಿರ್ದೇಶಕರು ನಡೆಸಬೇಕು ಎಂದರು.

ಜಿಲ್ಲಾ ಮಟ್ಟದ ಸಮಿತಿಯಲ್ಲಿ ಜಿಲ್ಲಾಧಿಕಾರಿಗಳು ಅಧ್ಯಕ್ಷರಾಗಿದ್ದು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ನಗರಸಭೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು, ಕೈಗಾರಿಕಾ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಜಂಟಿ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಸದಸ್ಯರಾಗಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿದ್ದಾರೆ. ತಾಲ್ಲೂಕು ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದ್ದು, ಉಪವಿಭಾಗಾಧಿಕಾರಿಗಳು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್ ಆಯುಕ್ತರು ಹಾಗೂ ಮುಖ್ಯಾಧಿಕಾರಿಗಳು, ಆಯಾ ತಾಲ್ಲೂಕಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸದಸ್ಯರಾಗಿದ್ದು, ಆಯಾ ತಾಲೂಕಿನ ತಹಶೀಲ್ದಾರಗಳನ್ನು ಸಂಚಾಲಕರನ್ನಾಗಿ ನೇಮಕ ಮಾಡಿ ಸಮಿತಿಗಳನ್ನು ರಚಿಸಲಾಗಿದೆ. ಸಮಿತಿಯು ಕನ್ನಡ ಅನುಷ್ಠಾನ ಕುರಿಂತೆ ಕಾಲಕಾಲಕ್ಕೆ ಪರಿಶೀಲನೆ ನಡೆಸಬೇಕು ಎಂದರು.

ಸಭೆಯಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ, ನಗರಸಭೆ ಹಾಗೂ ಸಾಕ್ಷರತಾ ಇಲಾಖೆಯ ಅಧಿಕಾರಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಉಪಸ್ಥಿತರಿದ್ದರು.

# 2.10 ಕೋಟಿಯ ವೆಚ್ಚದಲ್ಲಿ ಓವರ್ ಹೆಡ್ ಟ್ಯಾಂಕ್ ನಿರ್ಮಾಣಕ್ಕೆ ಗುದ್ದಲಿ ಪೂಜೆ

**ಮೈಸೂರು:** ನಗರದ ವಾರ್ಡ್ ನಂ.23 ಹಾಗೂ 42 ಮತ್ತು 50ರ ಕಾಕರವಾಡಿ, ಬೆಸ್ತರಗೇರಿ, ಕುಂಬಾರಗೇರಿ, ಕುರುಬಗೇರಿ, ಗೊಲ್ಲಗೇರಿ, ಗೀತಾ ರಸ್ತೆ, ಕೆ ಜಿ ಕೊಪ್ಪಲ್, ಹಳೆ ಬಂಡಿಕೇರಿ, ಗಾಣಿಗರ ಬೀದಿ, ಬೆಳ್ಳಿಕಟ್ಟೆ , ಹಾಗೂ ದೇವರಾಜ ಮೊಹಲ್ಲಾ ಭಾಗದ ಪ್ರದೇಶಕ್ಕೆ ಮೂಡಾ ಕಛೇರಿ ಪಕ್ಕದಲ್ಲಿ 10 ಲಕ್ಷ ಲೀಟರ್ ಸಾಮರ್ಥ್ಯದ ಮೇಲ್ಮಟ್ಟದ ಜಲಸಂಗ್ರಹಾಗರವನ್ನು ನಿರ್ಮಿಸಿ, ರಾಮಸ್ವಾಮಿ ವೃತ್ತದ ಸಮೀಪ ಲಿಂಕಿಂಗ್ ಮಾಡುವ ಕಾಮಗಾರಿಯ ಅಂದಾಜು 2.10 ಕೋಟಿ ಮೊತ್ತದ ಕಾಮಗಾರಿ ಗುದ್ದಲಿ ಪೂಜೆಯನ್ನು ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ಹರೀಶ್ ಗೌಡ ನೆರವೇರಿಸಿದರು

ನಂತರ ಮಾತನಾಡಿದ ಅವರು ಚಾಮರಾಜ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸರಬರಾಜು ವಿಚಾರವಾಗಿ ಜನಸಾಮನ್ಯರ ಮನೆಮನೆಗೆ ಕುಡಿಯುವ ನೀರಿನ ಪೂರೈಕೆ ದೃಷ್ಟಿಯಿಂದ 2.10 ಕೋಟಿಯ ವೆಚ್ಚದಲ್ಲಿ ಓವರ್ ಹೆಡ್ ಟ್ಯಾಂಕ್ ನಿರ್ಮಾಣಕ್ಕೆ ಗುದ್ದಲಿ ಪೂಜೆ ನಡೆದಿದ್ದು ಕಾಮಗಾರಿ ಪ್ರಾರಂಭವಾಗಲಿದೆ, ಕುರುಬರ ಬೀದಿ, ಗೊಲ್ಲಗೇರಿ, ಸೋನಾರ್ ಬೀದಿ ಅಗಸರಗೇರಿ, ಗೀತಾ ರಸ್ತೆ ಹಾಗೂ ಕೆ ಜಿ ಕೊಪ್ಪಲ್ ಬಡಾವಣೆಗಳಿಗೆ ಕುಡಿಯುವ ನೀರು ಪೂರೈಕೆ ಸಮರ್ಪಕವಾಗಿ ಮನೆ ಮನೆಗೆ ಪೂರೈಕೆಯಾಗಲಿದ್ದು, ಮೈಸೂರು ನಗರಕ್ಕೆ ಇಲ್ಲಿಯವರೆಗೂ ನೀರಿನ ತೊಂದರೆ ಬಂದಿಲ್ಲ ಮುಂಜಾಗ್ರತಾ ಕ್ರಮವಾಗಿ ಜಿಲ್ಲಾಧಿಕಾರಿ ಮತ್ತು ನಗರಪಾಲಿಕೆ ಆಯುಕ್ತರು ಹಾಗೂ ವಾಣಿವಿಲಾಸ ನೀರು ಸರಬರಾಜು ಮಂಡಳಿ ತಂಡ ರಚಿಸಿ ಸಹಾಯವಾಣಿ ತೆರೆಯಲಾಗಿದೆ, ಸಾರ್ವಜನಿಕರು ಮಿತವಾಗಿ ನೀರು ಬಳಸಬೇಕು ಹಾಗೂ ಮುಂದಿನ ಎರಡು



ತಿಂಗಳ ಬಳಿಕ ಉತ್ತಮ ಮಳೆಯಾಗುವ ನಿರೀಕ್ಷೆಯಿದೆ ಎಂದರು.

ಜೀವ ಸಂಕುಲದ ವೈವಿಧ್ಯದಲ್ಲಿ ನೀರಿನ ಮಹತ್ವ ಅತಿಮುಖ್ಯವಾಗಿದೆ. ಭೂಮಿಯಲ್ಲಿ ಅತಿ ಹೆಚ್ಚು ಬಳಸುವ ವಸ್ತುಗಳಲ್ಲಿ ನೀರು ಸಹ ಒಂದು. ಇದನ್ನು ಇತಿ-ಮಿತವಾಗಿ ಬಳಸಿ, ನೀರನ್ನು ಸದ್ಬಳಕೆ ಮಾಡುವಂತೆ ಮೈಸೂರಿನ ನಾಗರೀಕರಲ್ಲಿ ಮನವಿ ಮಾಡಿದರು. ಮುಖಂಡರಾದ ಕುಮಾರ್, ನವೀನ್, ಬೋರಪ್ಪ, ಅಧಿಕಾರಿ ಪ್ರಸನ್ನ, ಕಂಟ್ರಾಕ್ಟರ್ ರಮೇಶ್, ಮೈಸೂರು ಮಹಾನಗರ ಪಾಲಿಕೆಯ ಅಧಿಕಾರಿಗಳಾದ ಇಇ ನಾಗರಾಜ್, ಎಇಇ ಧನುಷ್, ಪ್ರಶಾಂತ್, ಇನ್ನಿತರ ಅಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಹಾಜರಿದ್ದರು.

# ಸಂಜೆ ಟಿಪ್ಸ್



## ರೆಫ್ರಿಜರೇಟರ್‌ಗಳನ್ನು ಬಿಡುಗಡೆ ಮಾಡಿದ ಗೋದ್ರೇಜ್

ಗೋದ್ರೇಜ್ ಗ್ರೂಪ್ನ ಪ್ರಮುಖ ಕಂಪನಿಯಾದ ಗೋದ್ರೇಜ್ ಅಂಡ್ ಬಾಯ್ಸ್ನ ಭಾಗವಾಗಿರುವ ಗೋದ್ರೇಜ್ ಅಪ್ಲೈಯನ್ಸಸ್ ಪ್ರಕೃತಿಯಿಂದ ಸ್ಫೂರ್ತಿ ಪಡೆದ ವುಡ್-ಫಿನಿಶ್ ಗೃಹೋಪಯೋಗಿ ಉಪಕರಣಗಳ ಹೊಸ ಸರಣಿಯಾದ ಇಯಾನ್ ವೋಗ್ ಅನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದೆ. ಸುಧಾರಿತ ರೆಫ್ರಿಜರೇಟರ್‌ಗಳು ಮತ್ತು ಏರ್ ಕಂಡೀಷನರ್‌ಗಳನ್ನು ಒಳಗೊಂಡಿರುವ ಈ ಶ್ರೇಣಿಯು, ಸದ್ಯದ ಭಾರತೀಯ ಗೃಹಾಲಂಕಾರಕ್ಕೆ ಪೂರಕವಾಗಿರುವ ಸೌಂದರ್ಯಶಾಸ್ತ್ರ ಮತ್ತು ತಂತ್ರಜ್ಞಾನದ ಅನನ್ಯ ಮಿಶ್ರಣ ಹೊಂದಿದೆ. ಬ್ರ್ಯಾಂಡ್ ಉತ್ಪನ್ನಗಳ ಕುರಿತಾಗಿ ಭಾರತೀಯ ಮನೆಗಳ ಸಮೀಕ್ಷೆ ನಡೆಸಿತ್ತು. ಆ ಸಮೀಕ್ಷೆಯಲ್ಲಿ ಪ್ರತಿಕ್ರಿಯಿಸಿದ 70%ಕ್ಕಿಂತ ಹೆಚ್ಚು ಜನರು ತಮ್ಮ ಮನೆಯ ಅಲಂಕಾರಕ್ಕೆ ಸೂಕ್ತವಾದ ಉಪಕರಣಗಳ ಆಯ್ಕೆ ಮಾಡಲು ಬಯಸುತ್ತೇವೆ ಎಂದು ತಿಳಿಸಿದ್ದಾರೆ. ಅರ್ಧಕ್ಕಿಂತ ಹೆಚ್ಚು ಜನರು ತಮ್ಮ ಮನೆಗಳಲ್ಲಿ ಇರುವ ಎಲ್ಲಾ ಉತ್ಪನ್ನಗಳು ಸೂಕ್ತವಾಗಿ ಹೊಂದಿಕೆಯಾಗಬೇಕೆಂದು ಬಯಸುತ್ತೇವೆ ಎಂದು ತಿಳಿಸಿದರು.ಹೊಸ ಉತ್ಪನ್ನಗಳ ಕುರಿತು ಮಾತನಾಡಿದ ಗೋದ್ರೇಜ್ ಅಪ್ಲೈಯನ್ಸಸ್ ನ ಬಿಸಿನೆಸ್ ಹೆಡ್ ಮತ್ತು ಕಾರ್ಯನಿರ್ವಾಹಕ ಉಪಾಧ್ಯಕ್ಷ ಕಮಲ್ ನಂದಿ, ''ಮನೆಯ ಮಾಲೀಕತ್ವದ ಸರಾಸರಿ ವಯಸ್ಸು ಕಡಿಮೆಯಾಗುತ್ತಿದೆ. ಈಗ 30ರ ಹರೆಯದವರೂ ಮನೆ ಮಾಲೀಕರಾಗಿದ್ದಾರೆ ಎಂದು ಹೇಳಲಾಗುತ್ತದೆ. ಎಲ್ಲವೂ ವಿನ್ಯಾಸಕ್ಕೆ ಪೂರಕವಾಗಿ ಇರುವಂತೆ ನೋಡಿಕೊಳ್ಳುತ್ತಾರೆ. ಅವರ ಮನೆಯ ಅಲಂಕಾರಕ್ಕೆ ಸೂಕ್ತವಾಗಿ ಹೊಂದುವ ಉಪಕರಣಗಳನ್ನೇ ಖರೀದಿಸುತ್ತಾರೆ. ಸೌಂದರ್ಯಶಾಸ್ತ್ರವು ಈ ಕಾಲದ ಪ್ರಮುಖ ಅಂಶವಾಗಿದೆ. ಇವೆಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಆ ಅಗತ್ಯವನ್ನು ಪೂರೈಸಲು ಗೋದ್ರೇಜ್ ಅಪ್ಲೈಯನ್ಸಸ್ ವಿಶಿಷ್ಟ ವಿನ್ಯಾಸದ, ಪ್ರಕೃತಿಯಿಂದ ಸ್ಫೂರ್ತಿ ಪಡೆದ, ವುಡ್-ಫಿನಿಶ್ ಏರ್ ಕಂಡಿಷನರ್ ಗಳು ಮತ್ತು ರೆಫ್ರಿಜರೇಟರ್‌ಗಳ ಶ್ರೇಣಿಯಾದ ದಿ ಗೋದ್ರೇಜ್ ಇಯಾನ್ ವೋಗ್ ಸರಣಿ ನೀಡುತ್ತಿದೆ. ಈ ಮೂಲಕ ಬ್ರ್ಯಾಂಡ್ ತನ್ನ ಪ್ರೀಮಿಯಂ ವಿಭಾಗವನ್ನು 45% ರಿಂದ 55%ಕ್ಕೆ ಬೆಳೆಸುವ ಗುರಿಯನ್ನು ಹೊಂದಿದೆ ಮತ್ತು ಅಪೂರ್ವ ಉತ್ಪನ್ನಗಳೊಂದಿಗೆ ಬೇಸಿಗೆಯ ಬೆಳವಣಿಗೆ 20%ಕ್ಕೆ ಹೆಚ್ಚಿಸಲಿದೆ'' ಎಂದು ಹೇಳಿದರು.

## ಪನ್ನೀರ್ ಖೀರ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಪನ್ನೀರ್: ಕಪ್, ಹಾಲು: 2 ಕಪ್, ಕಾರ್ನ್ ಫ್ಲೋರ್: 2 ಚಮಚ, ಸಕ್ಕರೆ : 2-3 ಚಮಚ, ಏಲಕ್ಕಿ ಪುಡಿ : ಸ್ವಲ್ಪ, ಪಿಸ್ತಾ: 2 ಚಮಚ, ಕೇಸರಿ : ಸ್ವಲ್ಪ, ಬಾದಾಮಿ : 2 ಚಮಚ

### ಮಾಡುವ ವಿಧಾನ

ಒಂದು ಪಾತ್ರೆಗೆ ಒಂದು ಕಪ್ ಹಾಲನ್ನು ಹಾಕಿ ಅದಕ್ಕೆ ಕೇಸರಿಯನ್ನು ಹಾಕಿ ನೆನೆಸಿಡಿ. ಸ್ವಲ್ಪ ತಣ್ಣನೆ ಹಾಲಿಗೆ ಕಾರ್ನ್ ಫ್ಲೋರ್ ಹಾಕಿ ಮಿಕ್ಸ್ ಮಾಡಿ. ಇನ್ನೊಂದು ಪಾತ್ರೆಗೆ ಉಳಿದ ಹಾಲನ್ನು ಹಾಕಿ ಕುದಿಸಿ. ಹಾಲು ಕುದಿಯುತ್ತಿರುವಾಗ ಕಾರ್ನ್ಫ್ಲೋರ್ ಮಿಶ್ರಿತ ಹಾಲನ್ನು ಹಾಕಿ 10 ನಿಮಿಷ ಕೈ ಆಡಿಸಿ. ಹಾಲು ಸ್ವಲ್ಪ ದಪ್ಪಗಾಗುತ್ತದೆ. ಇದಕ್ಕೆ ಕೇಸರಿಯುಕ್ತ ಹಾಲನ್ನು ಹಾಕಿ. ನಂತ್ರ ಅದಕ್ಕೆ ಪನ್ನೀರ್ ಹಾಗೂ ಸಕ್ಕರೆ ಹಾಕಿ ಮಿಕ್ಸ್ ಮಾಡಿ. 10 ನಿಮಿಷ ಕುದಿಸಿದ ನಂತ್ರ ಏಲಕ್ಕಿ ಪುಡಿ, ಪಿಸ್ತಾ ಪುಡಿ, ಬಾದಾಮಿ ಪುಡಿಯನ್ನು ಹಾಕಿ ಕುದಿಸಿ. ಬಿಸಿ ಬಿಸಿ ಪನ್ನೀರ್ ಖೀರ್ ರೆಡಿ.

## ಸಲ್ಮಾನ್ ಖಾನ್‌ಗೆ ಮದುವೆ ಆಗಿದ್ಯಾ?

ಬಾಲಿವುಡ್ ಸೂಪರ್ ಸ್ಟಾರ್ ನಟ ಸಲ್ಮಾನ್ ಖಾನ್ ಅವರ ಬಗ್ಗೆ ವಿಶೇಷ ಪರಿಚಯ ಅಗತ್ಯವಿಲ್ಲ. ತಮ್ಮ ಸಿನಿ ಜರ್ನಿಯಲ್ಲಿ ಹಲವು ಸೂಪರ್ ಹಿಟ್ ಚಿತ್ರಗಳನ್ನು ನೀಡಿದ್ದಾರೆ. ಇನ್ನು ವಯಸ್ಸು ಐವತ್ತು ದಾಟಿದರೂ ಸಲ್ಮಾನ್ ಭಾಯ್ ಇನ್ನೂ ಸಿಂಗಲ್.ಆದ್ರೆ ನಟನಿಗೆ 2013ರಲ್ಲಿ ಮದುವೆಯಾಗಿತ್ತು ಎನ್ನುವ ಸುದ್ದಿಯೊಂದು ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ.

ಸಲ್ಮಾನ್ ಖಾನ್ ಅವರ ಮೇಲೆ 2013ರಲ್ಲಿ ಛತ್ತೀಸ್ಗಢ ಮೂಲದ ಮಹಿಳೆಯನ್ನು ಮದುವೆಯಾಗಿದ್ದಾರೆ ಎಂಬ ಆರೋಪ ಮಾಡಲಾಗಿದೆ. ಬೈಕುಂಟ್ಪುರದ ರಾಣಿ ಎಂಬ ಮಹಿಳೆಯನ್ನು ಸಲ್ಮಾನ್ ಖಾನ್ ಮದುವೆಯಾಗಿದೆ ಎಂಬ ಆರೋಪ ಕೇಳಿ ಬಂದಿದೆ. ಈ ವಿಷಯವಾಗಿ ಯುವತಿಯ ಚಿಕ್ಕಮ್ಮ ಬಸಂತಿಬಾಯಿ ನ್ಯಾಯಾಲಯದ ಮೆಟ್ಟಿಲೇರಿದ್ದಾರೆ.

**ಪ್ರಕರಣದ ಹಿನ್ನೆಲೆ :** ಛತ್ತೀಸ್‌ಗಢದ ರಾಣಿ ಎಂಬ ಮಹಿಳೆ ಬಸಂತ್ ಲಾಲ್ ಎಂಬ ವ್ಯಕ್ತಿಯನ್ನು ಮದುವೆಯಾಗಿದ್ದಳು. 2013 ರಲ್ಲಿ ಬಸಂತ್ ನೇಣು ಬಿಗಿದುಕೊಂಡು ಆತ್ಮಹತ್ಯೆ ಶರಣಾಗಿದ್ದರು. ಅವರ ಮರಣದ ನಂತರ, ಆತನ ಕೆಲಸವು ಅವನ ಹೆಂಡತಿಗೆ ಹೋಗಬೇಕು. ಆದರೆ ಬಸಂತ್ ಲಾಲ್ ಅವರ ತಾಯಿ ಬಸಂತಿಬಾಯಿ ಇದನ್ನು ವಿರೋಧಿಸಿದರು. ಅಲ್ಲದೆ, ರಾಣಿ ತನ್ನ ಸೊಸೆಯಲ್ಲ ಎಂದು ಆಕ್ಷೇಪಿಸಿದರು. ಇದರೊಂದಿಗೆ ರಾಣಿ ಛತ್ತೀಸ್ಗಢ ನ್ಯಾಯಾಲಯದ ಮೊರೆ ಹೋಗಿದ್ದರು. ಬಸಂತ್ ಲಾಲ್ ಸಾವಿನ ನಂತರ ರಾಣಿ ಓಡಿಹೋಗಿ ಬಾಲಿವುಡ್ ಹೀರೋ ಸಲ್ಮಾನ್ ಖಾನ್ ರನ್ನು ಮದುವೆಯಾದರು ಎಂದು ಬಸಂತಿಬಾಯಿ ಪರ ವಕೀಲರು ನ್ಯಾಯಾಲಯದಲ್ಲಿ ವಾದ ಮಂಡಿಸಿದ್ದರು. ರಾಣಿ ಸಲ್ಮಾನ್ ಖಾನ್ ಜೊತೆಗಿನ ಫೋಟೋಗಳನ್ನು ನ್ಯಾಯಾಲಯಕ್ಕೆ ಸಾಕ್ಷಿಯಾಗಿ ನೀಡಲಾಯಿತು. 2013 ರಿಂದ, ಈ ಪ್ರಕರಣವು ಛತ್ತೀಸ್ಗಢದ ವಿವಿಧ ನ್ಯಾಯಾಲಯಗಳಲ್ಲಿ ನಡೆಯುತ್ತಿದೆ. ಆದರೆ, ಪ್ರಕರಣದಲ್ಲಿ ಯಾವುದೇ ಪಕ್ಷದ ಪರವಾಗಿ ತೀರ್ಪು ಬಂದಿಲ್ಲ. ರಾಣಿಯ ಪರ ವಕೀಲ ಅಶೋಕ್ ಕುಮಾರ್ ಶುಕ್ಲಾ ಅವರು ಛತ್ತೀಸ್ಗಢ ಹೈಕೋರ್ಟ್ನಲ್ಲಿ ಮನವಿ ಮಾಡಿದರು, ಬಸಂತಿಬಾಯಿ ಅವರು ನ್ಯಾಯಾಲಯವನ್ನು ತಪ್ಪುದಾರಿಗೆಳೆಯಲು ಬಾಲಿವುಡ್ ಭಾಯಿಜಾನ್ ಅವರನ್ನು ಮದುವೆಯಾಗಿದ್ದಾರೆ ಎಂಬ ನಕಲಿ ಫೋಟೋಗಳನ್ನು ಎಡಿಟ್ ಮಾಡಿದ್ದಾರೆ ಎಂದು ದೂರಿದ್ದರು. ಸದ್ಯ ಈ ಪ್ರಕರಣ ಹೈಕೋರ್ಟ್ ನಲ್ಲಿ ವಿಚಾರಣೆ ಹಂತದಲ್ಲಿದೆ. ಇನ್ನೂ ಅಂತಿಮ ತೀರ್ಪು ಪ್ರಕಟವಾಗಿಲ್ಲ. ಆದರೆ, ಕೋರ್ಟ್ ಗಳಲ್ಲಿ ನಡೆಯುತ್ತಿರುವ ಈ ಪ್ರಕರಣ ಬಾಲಿವುಡ್ ಮಸಲ್ ಮ್ಯಾನ್ ಸಲ್ಮಾನ್ ಖಾನ್ ಹೆಸರು ಬಂದಿದ್ದು ಮಾತ್ರ ವಿಪರ್ಯಾಸ.. ಮುಂದೇನಾಗುತ್ತೆ ಅಂತ ಕಾಯ್ದು ನೋಡಬೇಕಿದೆ.





## ಮೆಂತ್ಯ ಸೊಪ್ಪು ಸೇವನೆಯ ಪ್ರಯೋಜನ

### ಹೆಲ್ತ್ ಟಿಪ್ಸ್



ಮೆಂತ್ಯ ಸೊಪ್ಪು ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ. ಜನರು ಕೂಡ ಈ ಸೊಪ್ಪನ್ನು ತುಂಬಾ ಇಷ್ಟಪಡುತ್ತಾರೆ. ಜನರು ಮೆಂತ್ಯ ಪರಾಠ, ಪಕೋಡಗಳು ಮತ್ತು ಇತರ ಅನೇಕ ಖಾದ್ಯಗಳನ್ನು ತಯಾರಿಸುತ್ತಾರೆ. ಕ್ಯಾಲ್ಸಿಯಂ, ಕಬ್ಬಿಣ, ಪ್ರೊಟೀನ್, ಜೀವಸತ್ವಗಳು ಮತ್ತು ಇತರ ಅನೇಕ ಪೋಷಕಾಂಶಗಳು ಇದರಲ್ಲಿ ಕಂಡುಬರುತ್ತವೆ. ಮಧುಮೇಹಿಗಳು ತಿನ್ನುವುದರಿಂದ ಶುಗರ್ ಲೆವಲ್ ಕಂಟ್ರೋಲ್ ಮಾಡಲು ಸಹಾಯ ಮಾಡುತ್ತದೆ. ಜೀರ್ಣಕ್ರಿಯೆ ಉತ್ತಮವಾಗಿಡಲು ಇದು ಬಹಳ ಮುಖ್ಯ. ಹೊಟ್ಟೆ ಉಬ್ಬುವಿಕೆ ಸಮಸ್ಯೆಯನ್ನು ಹೋಗಲಾಡಿಸಲು ತುಂಬಾ ಸಹಾಯ ಮಾಡುತ್ತದೆ. ಅಸಿಡಿಟಿ ಸಮಸ್ಯೆ ಇರುವವರು ಮೆಂತ್ಯ ಸೊಪ್ಪು ಸೇವಿಸುವುದರಿಂದ ಪರಿಹಾರ ಪಡೆಯಬಹುದು.

**ತೂಕ ನಿಯಂತ್ರಣ:** ನಿಮ್ಮ ತೂಕ ಹೆಚ್ಚಾಗುತ್ತಿದ್ದರೆ ಪ್ರತಿದಿನ ಮೆಂತ್ಯ ಸೇವಿಸಬಹುದು. ಫೈಬರ್ನಲ್ಲಿ ಸಮೃದ್ಧವಾಗಿರುವ ಈ ಸೊಪ್ಪು ನಿಮ್ಮ ತೂಕವನ್ನು ನಿಯಂತ್ರಿಸಲು ತುಂಬಾ ಸಹಾಯ ಮಾಡುತ್ತದೆ. ಇದು ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳಿಗೂ ಪರಿಹಾರ ನೀಡುತ್ತದೆ. ಮುಖದ ಮೇಲಿನ ಕಲೆಗಳನ್ನು ತೊಲಗಿಸಲು ಮೆಂತ್ಯ ಸೊಪ್ಪು ಸಹಾಯಕ. ಇದರಲ್ಲಿ ಹೇರಳವಾದ ಉತ್ಕರ್ಷಣ ನಿರೋಧಕ ಗುಣಗಳಿದ್ದು, ಚರ್ಮಕ್ಕೆ ಪ್ರಯೋಜನಕಾರಿಯಾಗಿದೆ. ಶೀತ ಮತ್ತು ಕೆಮ್ಮಿಗೂ ಮೆಂತ್ಯ ಸೊಪ್ಪು ಪ್ರಯೋಜನಕಾರಿ. ಅನಾರೋಗ್ಯದ ಸಂದರ್ಭದಲ್ಲಿ ಇದನ್ನು ಸೇವಿಸಿದರೆ ಎಲ್ಲಾ ಆರೋಗ್ಯ ಸಮಸ್ಯೆಗಳು ಗುಣವಾಗುತ್ತವೆ. ಇದರಲ್ಲಿ ಬ್ಯಾಕ್ಟೀರಿಯಾ ವಿರೋಧಿ ಗುಣಲಕ್ಷಣಗಳು ಕಂಡುಬರುವ ಕಾರಣ ಜ್ವರದಿಂದಲೂ ನಮ್ಮನ್ನು ರಕ್ಷಿಸುತ್ತದೆ.

## ಹೊಳೆಯುವ 'ಚರ್ಮ'ಕ್ಕೆ ಟಿಪ್ಸ್

### ಬ್ಯೂಟಿ ಟಿಪ್ಸ್



ಹೊಳೆಯುವ ಚರ್ಮವನ್ನ ಪಡೆಯುವುದಕ್ಕಾಗಿ ನೀವು ಯಾವಾಗಲೂ ದುಬಾರಿ ಫೇಶಿಯಲ್ ಮಾಡಿಸಬೇಕು ಅಂತೇನೂ ಇಲ್ಲ. ತಾಳ್ಮೆಯಿಂದ ಮನೆಯಲ್ಲಿಯೇ ಕೆಲವು ಬ್ಯೂಟಿ ಟ್ರೀಟ್‌ಮೆಂಟ್ ಪಡೆದುಕೊಳ್ಳುವುದರಿಂದಲೂ ಆರೋಗ್ಯವಂತ ಮತ್ತು ಹೊಳೆಯುವ ಸುಂದರ ಚರ್ಮ ನಿಮ್ಮದಾಗಬಹುದು. ಅದೆಷ್ಟೋ ಚಿಕ್ಕ ಚಿಕ್ಕ ಸರಳ ಮನೆಮದ್ದಿನಿಂದಲೇ ಚರ್ಮದ ಅಂದ ಹೆಚ್ಚಬಲ್ಲದು. ಔಷಧ ಅಂಗಡಿಯಲ್ಲಿ ಸುಲಭವಾಗಿ ದೊರೆಯುವಂಥ ಗ್ಲಿಸರಿನ್ ಚರ್ಮದ ಆರೋಗ್ಯವನ್ನ ಹೆಚ್ಚಿಸುವಂಥ ಉತ್ಪನ್ನ. ಇದನ್ನ ಆಯ್ಲಿ, ಡ್ರೈ, ಸೀವಿಯರ್ ಡ್ರೈ ಹೀಗೆ ಎಲ್ಲಾ ತರಹದ ಚರ್ಮಗಳಿಗೂ ಬಳಸಬಹುದು. ಮೊಡವೆಗಳು, ಕಲೆಗಳು, ಸುಕ್ಕು ತೊಡೆದುಹಾಕಲು ಗ್ಲಿಸರಿನ್ ಸಹಾಯ ಮಾಡುತ್ತದೆ. ನಿಮ್ಮ ಚರ್ಮವನ್ನು ಮೃದುವಾಗಿಸುತ್ತದೆ. ಹತ್ತಿಯ ಉಂಡೆಯನ್ನ ಗ್ಲಿಸರಿನ್ ನಲ್ಲಿ ಅದ್ದಿ ಮೃದುವಾಗಿ ಚರ್ಮದ ಮೇಲೆ ಮಸಾಜ್ ಮಾಡಿಕೊಳ್ಳಿ. ರಾತ್ರಿ ಮಲಗುವ ಮುಂಚೆ ಮುಖವನ್ನ ಉಗುರು ಬೆಚ್ಚಗಿನ ನೀರಿನಲ್ಲಿ ತೊಳೆದುಕೊಂಡು ಗ್ಲಿಸರಿನ್ ಲೇಪಿಸಿಕೊಂಡು ಮಲಗಬೇಕು.

ಚರ್ಮದ ಆರೋಗ್ಯವನ್ನ ಹೆಚ್ಚಿಸಲು ಆಲೀವ್ ಆಯಿಲ್ ಸಹಕಾರಿ. ಶುದ್ಧ ಆಲಿವ್ ಎಣ್ಣೆಯನ್ನ ಅಂಗೈಗೆ ಹಾಕಿಕೊಂಡು ಹದವಾಗಿ ತಿಕ್ಕಿದ ನಂತರ ಮುಖಕ್ಕೆ ಮೃದುವಾಗಿ ಮಸಾಜ್ ಮಾಡಿಕೊಳ್ಳಬೇಕು. ಮುಖ ಮತ್ತು ಕತ್ತಿನ ಭಾಗಗಳಿಗೆ ಮಸಾಜ್ ಮಾಡುವುದರಿಂದ ಚರ್ಮ ಕಪ್ಪಾಗುವುದನ್ನ ತಡೆಗಟ್ಟಬಹುದು. ಡ್ರೈ ಸ್ಕಿನ್ನಿಂದ ಉಂಟಾಗುವ ಕಡಿತದಂಥ ಸಮಸ್ಯೆಗಳೂ ಉಪಶಮನವಾಗುತ್ತದೆ. ಪ್ರತಿದಿನ ರಾತ್ರಿ ಮಲಗುವ ಮುಂಚೆ ಆಲೀವ್ ಆಯಿಲ್ ಮಸಾಜ್ ಮಾಡಿಕೊಳ್ಳುವುದರಿಂದ ಚರ್ಮದ ಕಾಂತಿ ಹೆಚ್ಚಬಹುದು. ಇನ್ನೂ ಬಿಸಿ ಮಾಡಿರದ ಕಚ್ಚಾ ಹಾಲು ಕೂಡ ಚರ್ಮದ ಆರೋಗ್ಯವನ್ನ ಹೆಚ್ಚಿಸಬಲ್ಲ ಒಂದೊಳ್ಳೆಯ ಔಷಧಿ. ಹಾಲಿನಿಂದ ಚರ್ಮದ ಮೃದುತ್ವ ಹೆಚ್ಚಬಲ್ಲದು ಮತ್ತು ಚರ್ಮದ ರಂಧ್ರಗಳನ್ನು ಆಳವಾಗಿ ಶುದ್ಧೀಕರಿಸಬಲ್ಲದು. ರಾತ್ರಿ ಮಲಗುವುದಕ್ಕೂ 10-15 ನಿಮಿಷಗಳ ಮುಂಚೆ ಕಚ್ಚಾ ಹಾಲನ್ನು ಮುಖಕ್ಕೆ ಲೇಪಿಸಿಕೊಳ್ಳಿ. ನಂತರ ಲೇಪಿಸಿಕೊಂಡ ಹಾಲು ಸಂಪೂರ್ಣ ಒಣಗಿದ ಮೇಲೆ ಬೆಚ್ಚಗಿನ ನೀರಿನಲ್ಲಿ ತೊಳೆಯಿರಿ.

## ಕ್ರಿಕೆಟ್ ಮಾತ್ರವಲ್ಲ ಡಬ್ಲ್ಯುಪಿಎಲ್ ನಂಥ ವೇದಿಕೆ ಭಾರತದ ಮಹಿಳೆಯರಿಗೆ ಅತ್ಯುತ್ತಮ ಉದಾಹರಣೆ



ನಾಕೌಟ್ ಹಂತದ ಪಂದ್ಯಾವಳಿ ಆರಂಭಕ್ಕೂ ಮುನ್ನ ವುಮೆನ್ಸ್ ಪ್ರೀಮಿಯರ್ ಲೀಗ್ (ಡಬ್ಲ್ಯುಪಿಎಲ್) ನ ಈ ಋತುವಿನ ಕೊನೆಯ ಲೀಗ್ ಹಂತದ ಪಂಧ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ಆಡಿತು. ಇದರಲ್ಲಿ ಮುಂಬೈ ತಂಡವನ್ನು ಬೆಂಬಲಿಸುವ ಉದ್ದೇಶದಿಂದ ಅದರ ಮಾಲಕಿ ನೀತಾ ಅಂಬಾನಿ ಮಂಗಳವಾರ ದೆಹಲಿಯಲ್ಲಿ ಇದ್ದರು. ಭಾರತದಲ್ಲಿನ ಮಹಿಳಾ ಕ್ರೀಡಾಪಟುಗಳನ್ನು ಬೆಂಬಲಿಸುವುದಕ್ಕೆ ಡಬ್ಲ್ಯುಪಿಎಲ್ ನಂತಹ ವೇದಿಕೆ ಎಷ್ಟು ಮುಖ್ಯ ಎಂಬುದರ ಬಗ್ಗೆ ಅವರು ಮಾತನಾಡಿದರು.

ಡಬ್ಲ್ಯುಪಿಎಲ್ ಎಂಬುದು ಅತ್ಯುತ್ತಮ ಅವಕಾಶ. ಯುವತಿಯರು ವಿಶ್ವದ ಅತ್ಯುತ್ತಮ ಆಟಗಾರ್ತಿಯರ ಜತೆಗೆ ಸೇರಿ ಆಟ ಆಡಬಹುದು. ಅದಕ್ಕೆ ಇದು ಉತ್ತಮ ಅವಕಾಶ ಎಂದು ಹೊಗಳಿದರು. ''ನಮ್ಮ ಯುವತಿಯರಿಗೆ ಪ್ರದರ್ಶನ ನೀಡಲು ಎಂತಹ ವೇದಿಕೆ! ಈ ಯುವತಿಯರು ವಿಶ್ವದ ಅತ್ಯುತ್ತಮ ಆಟಗಾರ್ತಿಯರ ಜತೆಗೆ ಆಟವಾಡುತ್ತಿದ್ದಾರೆ ಮತ್ತು ಇದು ಹೃದಯವನ್ನು ಬೆಚ್ಚಗಾಗಿಸುವ ಭಾವನೆಯಾಗಿದೆ, ಎಂದು ಅವರು ಹೇಳಿದರು. ಈ ವರ್ಷದ ತಂಡದ ಅತ್ಯುತ್ತಮ ತಾರೆಗಳಲ್ಲಿ ಒಬ್ಬರಾದ ಸಜೀವನ್ ಸಜನಾ ಅವರನ್ನು ನೀತಾ ಅಂಬಾನಿ ವಿಶೇಷವಾಗಿ ಉಲ್ಲೇಖಿಸಿದ್ದು, ''ಸಜನಾ ಪ್ರಶಸ್ತಿಯನ್ನು ಪಡೆಯುವುದನ್ನು ನಾನು ನೋಡಿದೆ. ಆಕೆ ರಾಜಕೀಯ ಶಾಸ್ತ್ರದಲ್ಲಿ ಪದವೀಧರೆ, ಆಕೆಯ ತಂದೆ ಆಟೋರಿಕ್ಷಾ ಚಾಲಕರು ಮತ್ತು ಸಜನಾ ಕ್ರಿಕೆಟ್ ಆಡಲು ಆಯ್ಕೆ ಮಾಡಿಕೊಂಡರು. ಪೋಷಕರು ತಮ್ಮ ಹೆಣ್ಣುಮಕ್ಕಳಿಗೆ ಅವರು ಬಯಸುವ ವೃತ್ತಿಯನ್ನು ಆಯ್ಕೆ ಮಾಡುವುದಕ್ಕೆ ಪ್ರೋತ್ಸಾಹಿಸಲು ಇದು ಒಂದು ಉದಾಹರಣೆಯಾಗಿದೆ ಎಂದು ನಾನು ಭಾವಿಸುತ್ತೇನೆ. ಕ್ರಿಕೆಟ್‌ಗೆ ಮಾತ್ರವಲ್ಲ, ಎಲ್ಲ ರೀತಿಯ ಕ್ರೀಡೆಗಳಲ್ಲಿ ಯುವತಿಯರಿಗೆ ಡಬ್ಲ್ಯುಪಿಎಲ್ ಉದಾಹರಣೆಯಾಗಿದೆ, ಎಂದರು.



ನೀತಾ ಅಂಬಾನಿಯವರು ಮಾತು ಮುಂದುವರಿಸಿ, ಒಂದುಕುಟುಂಬ (ಔಟಿಜಈಚಿಟಟಥಿ) ಮತ್ತು ಸಕಾರಾತ್ಮಕ ವಾತಾವರಣವು ಮುಂಬೈ ಇಂಡಿಯನ್ಸ್ ಯಶಸ್ಸಿಗೆ ಪ್ರಮುಖವಾಗಿದೆ ಎಂದು ಹೇಳಿದರು. ''ನಾನು 2010ರಿಂದ ಕ್ರಿಕೆಟ್‌ನಲ್ಲಿದ್ದೇನೆ ಮತ್ತು ಈ ಯುವತಿಯರ ಆಟವನ್ನು ನೋಡುವುದು ನನ್ನ ಹೃದಯವನ್ನು ಬೆಚ್ಚಗಾಗಿಸುವ ಅನುಭವಗಳಲ್ಲಿ ಒಂದಾಗಿದೆ. ಮುಂಬೈ ಇಂಡಿಯನ್ಸ್ ಒಂದು ಕುಟುಂಬದಂತೆ ಮತ್ತು ನಾನು ಅವರಿಗೆ ಹೇಳುವುದೆಂದರೆ ಹೊರಗೆ ಹೋಗಿ, ನಿಮ್ಮ ಕೈಲಾದಷ್ಟು ಮಾಡಿ ಮತ್ತು ಆನಂದಿಸಿ, ಎಂದರು. ಮುಂಬೈ ಇಂಡಿಯನ್ಸ್ ನಾಯಕಿ ಹರ್ಮನ್‌ಪ್ರೀತ್ ಕೌರ್ ಈ ವರ್ಷ ತಂಡಕ್ಕೆ ಪ್ರಮುಖ ರನ್ ಗಳಿಸಿದ ಆಟಗಾರ್ತಿ ಆಗಿದ್ದಾರೆ. ಮತ್ತು ಮುಂಬೈ ಇಂಡಿಯನ್ಸ್ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ವಿರುದ್ಧ ಅಜೇಯ 95 ರನ್ ಗಳಿಸಿ, ಅದ್ಭುತ ಪ್ರದರ್ಶನವನ್ನು ನೀಡಿದ್ದಾರೆ, ಇದು ಈ ಆವೃತ್ತಿಯಲ್ಲಿ ಇದುವರೆಗಿನ ಅತ್ಯಧಿಕ ಸ್ಕೋರ್ ಆಗಿದೆ. ಹರ್ಮನ್‌ಪ್ರೀತ್ ಹಾಗೂ ತಂಡದ ಯಶಸ್ಸಿಗೆ ಮೆಂಟರ್ ಮತ್ತು ಬೌಲಿಂಗ್ ಕೋಚ್ ಜೂಲನ್ ಗೋಸ್ವಾಮಿ ಜೊತೆಗೆ ಮುಖ್ಯ ಕೋಚ್ ಚಾರ್ಲೆಟ್ ಎಡ್ವರ್ಡ್ಸ್ ನೇತೃತ್ವದ ತಂಡದ ಸಹಾಯಕ ಸಿಬ್ಬಂದಿಗೆ ನೀತಾ ಅಂಬಾನಿ ಅವರು ಶ್ರೇಯ ನೀಡಿದರು.

''ಒಂದು ಕುಟುಂಬವಾಗಿ, ಹರ್ಮನ್‌ಪ್ರೀತ್ ನಿಜವಾಗಿಯೂ ಮುಂಚೂಣಿಯಲ್ಲಿ ನಿಂತು ಮುನ್ನಡೆಸಿದ್ದಾರೆ ಎಂದು ನಾನು ಹೇಳಲೇಬೇಕು. ಅವರು ಆಡಿದ ಕೊನೆಯ ಪಂದ್ಯವನ್ನು ನೋಡಿ, ಅದು ಅದ್ಭುತವಾಗಿತ್ತು. ನಮ್ಮ ಡ್ರೆಸ್ಸಿಂಗ್ ರೂಮ್ ವಾತಾವರಣವು ಚಾರ್ಲೆಟ್ ಮತ್ತು ಜೂಲನ್ ನೇತೃತ್ವದಲ್ಲಿ ನಮ್ಮ ಸಹಾಯಕ ಸಿಬ್ಬಂದಿಯೊಂದಿಗೆ ಅದ್ಭುತವಾಗಿದೆ. ಅದು ಕ್ಷೇತ್ರದಲ್ಲಿ ಆಡುವಾಗ ಕಂಡುಬರುತ್ತದೆ ಎಂದು ನಾನು ಭಾವಿಸುತ್ತೇನೆ. ಮುಂಬೈ ಇಂಡಿಯನ್ಸ್ ಒಂದು ಕುಟುಂಬ ಮತ್ತು ನಾವು ಒಂದಾಗಿ ಆಡುತ್ತೇವೆ, ಎಂದು ಹೇಳಿದರು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಆರ್ಥಿಕ ನಷ್ಟಗಳು, ಮಾಟ ಮಂತ್ರ ತಂತ್ರದ ಭೀತಿ, ದಾಂಪತ್ಯದಲ್ಲಿ ನಿರಾಸಕ್ತಿ, ಪಾಲುದಾರಿಕೆಯಲ್ಲಿ ಸಮಸ್ಯೆ.

**ವೃಷಭ:** ಶಾರೀರಿಕ ಅಸಮತೋಲನ, ವೃತ್ತಿಯಲ್ಲಿ ಹಿನ್ನಡೆ, ಆಲಸ್ಯ ಸೋಮಾರಿತನ ಜಿಗುಪ್ಸೆ, ಸಾಲದ ಚಿಂತೆ.

**ಮಿಥುನ:** ಗರ್ಭ ದೋಷಗಳು, ಮಕ್ಕಳ ಭವಿಷ್ಯದ ಚಿಂತೆ, ಉದ್ಯೋಗ ನಷ್ಟ, ಪ್ರೀತಿ-ಪ್ರೇಮದಲ್ಲಿ ಸಮಸ್ಯೆ.

**ಕಟಕ:** ಮಾನಸಿಕ ಅಸಮತೋಲನ, ಮಾಟ ಮಂತ್ರ ತಂತ್ರದ ಯೋಚನೆ, ಮಿತ್ರರಿಂದ ಬೇಸರ, ಲಾಭದ ಪ್ರಮಾಣ ಕುಂಠಿತ.

**ಸಿಂಹ:** ಅವಕಾಶ ವಂಚಿತರಾಗುವಿರಿ, ಪ್ರಯಾಣದಲ್ಲಿ ನಿರಾಸಕ್ತಿ, ಉದ್ಯೋಗ ಬದಲಾವಣೆ ಪ್ರಯತ್ನ, ವಿದ್ಯಾಭ್ಯಾಸದಲ್ಲಿ ಹಿನ್ನಡೆ.

**ಕನ್ಯಾ:** ಆಕಸ್ಮಿಕ ಧನಾಗಮನ, ಕುಟುಂಬದಿಂದ ಬೇಸರ, ವಸ್ತ್ರಾಭರಣಗಳಿಂದ ಸಮಸ್ಯೆ, ಮಾತಿನಿಂದ ಸಮಸ್ಯೆ.

**ತುಲಾ:** ಸ್ವಯಂಕೃತ ಅಪರಾಧಗಳು, ಜಿಗುಪ್ಸೆ ಮತ್ತು ಬೇಸರ, ಸಂಗಾತಿಯಿಂದ ಸಮಸ್ಯೆ, ಆಪತ್ತಿನಿಂದ ರಕ್ಷಣೆ.

**ವೃಶ್ಚಿಕ:** ದುಃಸ್ವಪ್ನಗಳು, ಮೋಜು ಮಸ್ತಿಯಿಂದ ಸಮಸ್ಯೆ, ಸಂಗಾತಿಯಿಂದ ಅಂತರ, ಪಾಲುದಾರಿಕೆಯಲ್ಲಿ ನಷ್ಟ.

**ಧನಸ್ಸು:** ಸಾಲ ತೀರಿಸುವ ಪ್ರಯತ್ನ, ಉದ್ಯೋಗ ಬಿಡುವ ಯೋಜನೆ, ಸೇವಕರಿಂದ ನಷ್ಟ, ಗುಪ್ತ ಶಕ್ತಿಯ ಸಂಚಲನ.

**ಮಕರ:** ಪ್ರೀತಿ ಪ್ರೇಮದಲ್ಲಿ ಸೋಲು, ಮೋಜು ಮಸ್ತಿಯಿಂದ ತೊಂದರೆ, ಉದ್ಯೋಗ ಸಹಾಯದ ನಿರೀಕ್ಷೆ, ಬಾಲಗ್ರಹ ದೋಷಗಳು.

**ಕುಂಭ:** ಸ್ಥಿರಾಸ್ತಿ ವಾಹನದಿಂದ ನಷ್ಟ, ಮಾಟ ಮಂತ್ರದಿಂದ ತೊಂದರೆ, ದೃಷ್ಟಿ ದೋಷಗಳು, ಧಾರ್ಮಿಕ ಕಾರ್ಯದಲ್ಲಿ ಅಡೆತಡೆ.

**ಮೀನ:** ಪ್ರಯಾಣದಲ್ಲಿ ನಿರಾಸಕ್ತಿ, ಭಯ ಗಾಬರಿ ಆತಂಕ, ಆಕಸ್ಮಿಕ ಅವಘಡಗಳು, ಬಂಧುಗಳಿಂದ ನಷ್ಟ.

## ಅಂತರರಾಷ್ಟ್ರೀಯ ಗಣಿತಶಾಸ್ತ್ರದ ದಿನ




ಮಾರ್ಚ್ 14 ರಂದು ಇಂಟರ್ನ್ಯಾಷನಲ್ ಡೇ ಆಫ್ ಮ್ಯಾಥಮ್ಯಾಟಿಕ್ಸ್ ದಿನವನ್ನು ವಿಶ್ವಾದ್ಯಂತ ಆಚರಣೆ ಮಾಡಲಾಗುವುದು. ಅಲ್ಲಿ ಎಲ್ಲಾ ದೇಶಗಳು (ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರನ್ನು ಒಳಗೊಂಡಂತೆ) ಗಣಿತ ಚಟುವಟಿಕೆಗಳಲ್ಲಿ ಭಾಗವಹಿಸುತ್ತವೆ. ಮಾರ್ಚ್ 14 ಅನ್ನು ಈಗಾಗಲೇ ಅನೇಕ ದೇಶಗಳಲ್ಲಿ ಪೈ ದಿನ ಎಂದು ಆಚರಿಸಲಾಗುತ್ತದೆ ಎಂದು ನಿಮಗೆ ತಿಳಿದಿದೆಯೇ? ಹೌದು, ಏಕೆಂದರೆ ಈ ದಿನಾಂಕವನ್ನು 3/14 ಎಂದು ಬರೆಯಲಾಗಿದೆ ಮತ್ತು ಗಣಿತದ ಸ್ಥಿರಾಂಕ ಪೈ ಸರಿಸುಮಾರು 3.14 ಆಗಿದೆ! ಆದ್ದರಿಂದ, ಈ ದಿನವು ಗಣಿತದ ಬಗ್ಗೆ! ಮತ್ತು ಗಣಿತ ಕ್ಷೇತ್ರಕ್ಕೆ ಪ್ರವೇಶಿಸುವುದನ್ನು ಪರಿಗಣಿಸಲು ಉತ್ತಮ ದಿನ ಗಣಿತಶಾಸ್ತ್ರದ ಅಂತರರಾಷ್ಟ್ರೀಯ ದಿನವು ಗಣಿತವನ್ನು ಆಚರಿಸುವ ಜಾಗತಿಕ ಘಟನೆಯಾಗಿದೆ! ಇದು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಗಣಿತದ ಪ್ರಮುಖ ಪಾತ್ರದ ಬಗ್ಗೆ ಜನರಿಗೆ ಶಿಕ್ಷಣ ನೀಡುವುದು, ಜೀವನದ ಗುಣಮಟ್ಟವನ್ನು ಸುಧಾರಿಸುವುದು, ಮಹಿಳೆಯರು ಮತ್ತು ಹುಡುಗಿಯರನ್ನು ಸಬಲೀಕರಣಗೊಳಿಸುವುದು ಮತ್ತು ಸುಸ್ಥಿರ ಅಭಿವೃದ್ಧಿಗೆ ಕೊಡುಗೆ ನೀಡುವ ಗುರಿಯನ್ನು ಹೊಂದಿದೆ. ಇದು ಕೇವಲ ಒಂದೆರಡು ವರ್ಷಗಳ ಹಿಂದೆ ರಚಿಸಲಾದ ತುಲನಾತ್ಮಕವಾಗಿ ಹೊಸ ಘಟನೆಯಾಗಿದೆ. ಯುನೆಸ್ಕೋದ ಕಾರ್ಯಕಾರಿ ಮಂಡಳಿಯ 205 ನೇ ಅಧಿವೇಶನದಲ್ಲಿ ಮಾರ್ಚ್ 14 ಅನ್ನು ಗಣಿತಶಾಸ್ತ್ರದ ಅಂತರರಾಷ್ಟ್ರೀಯ ದಿನವೆಂದು ಘೋಷಿಸಲಾಯಿತು. ನವೆಂಬರ್ 2019 ರಲ್ಲಿ ಯುನೆಸ್ಕೋದ ಸಾಮಾನ್ಯ ಸಮ್ಮೇಳನದ 40 ನೇ ಅಧಿವೇಶನದಲ್ಲಿ ಈ ದಿನವನ್ನು ಅಳವಡಿಸಲಾಯಿತು. ನಂತರ 2020 ರಲ್ಲಿ, ವಿಶ್ವವು ತನ್ನ ಮೊದಲ ಅಂತರರಾಷ್ಟ್ರೀಯ ಗಣಿತ ದಿನವನ್ನು ಮಾರ್ಚ್ 14, 2020 ರಂದು 'ಗಣಿತವು ಎಲ್ಲೆಡೆ ಇದೆ' ಎಂಬ ವಿಷಯದೊಂದಿಗೆ ಆಚರಿಸಿತು. ಗಣಿತಶಾಸ್ತ್ರದ ಅಂತರರಾಷ್ಟ್ರೀಯ ದಿನದ ಪ್ರಮುಖ ಗುರಿಗಳು ಶಿಕ್ಷಣದಲ್ಲಿ ಗಣಿತದ ಪ್ರಾಮುಖ್ಯತೆಯ ಬಗ್ಗೆ ಸಾರ್ವಜನಿಕರಲ್ಲಿ ತಿಳುವಳಿಕೆಯನ್ನು ಸುಧಾರಿಸುವುದು, ಆಧುನಿಕ ಸಮಾಜ, ವಿಜ್ಞಾನ ಮತ್ತು ವಿಪತ್ತು ನಿರ್ವಹಣೆಯಲ್ಲಿ ಗಣಿತದ ಪಾತ್ರದ ಬಗ್ಗೆ ಅರಿವು ಮೂಡಿಸುವುದು; ಗಣಿತದ ಬಗ್ಗೆ ಮಾಹಿತಿಗೆ ಪ್ರವೇಶವನ್ನು ಹೆಚ್ಚಿಸಿ, ಅಂತರರಾಷ್ಟ್ರೀಯ ನೆಟ್ವರ್ಕಿಂಗ್ ಅನ್ನು ಹೆಚ್ಚಿಸಿ, ಮತ್ತು ಗಣಿತದ ಸಾರ್ವಜನಿಕ ಜಾಗೃತಿಯಲ್ಲಿ ಸಹಯೋಗಗಳು ಮತ್ತು ಹೆಚ್ಚಿನವು.

ಸಂಜೆ ಮುಗಿಲು
ಗುರುವಾರ
14.3.2024



# ತಮಿಳುನಾಡಿಲ್ಲCAA ಕಾಯ್ದೆ ಜಾರಿಯಾಗದಿರಲಿ



**ತಮಿಳುನಾಡು:** ಕೇಂದ್ರ ಸರ್ಕಾರ ಪೌರತ್ವ ತಿದ್ದುಪಡಿ ಕಾಯ್ದೆ ಯನ್ನು ಜಾರಿಗೊಳಿಸಿದ ಬೆನ್ನಲ್ಲೆ, ಪರ-ವಿರೋಧ ಚರ್ಚೆಗಳು ನಡೆಯುತ್ತಿದೆ. ಈ ಪೈಕಿ ತಮಿಳು ಚಲನಚಿತ್ರ ನಟ, ತಮಿಳಿಗ ವೆಟ್ರಿ ಕಳಗಂ ಪಾರ್ಟಿ ಸ್ಥಾಪಕ ವಿಜಯ್ ಅವರು ಇದಕ್ಕೆ ತೀರ್ವ ವಿರೋಧ ವ್ಯಕ್ತಪಡಿಸಿದ್ದಾರೆ.

ಹೌದು.. ಪರ-ವಿರೋಧದ ನಡುವೆ ಕೇಂದ್ರ ಸರ್ಕಾರಪೌರತ್ವ ತಿದ್ದುಪಡಿ ಕಾಯ್ದೆ(ಅಂಂ)ಯನ್ನು ಜಾರಿಗೊಳಿಸಿದೆ. ಇದಕ್ಕೆ ವಿರೋಧ ವ್ಯಕ್ತಪಡಿಸಿರುವ ಸೂಪರ್ ಸ್ಟಾರ್ ನಟ ವಿಜಯ್, ಈ ಕಾಯ್ದೆಯನ್ನು ತಮಿಳುನಾಡಿನಲ್ಲಿ ಜಾರಿಯಾಗದಂತೆ ನೋಡಿಕೊಳ್ಳಬೇಕು ಎಂದು ಅಭಿಪ್ರಾಯ ತಿಳಿಸಿದ್ದಾರೆ. ಈ ಕುರಿತು ಪಕ್ಷದ ಸೋಶಿಯಲ್ ಮೀಡಿಯಾದಲ್ಲಿಪೋಸ್ಟ್ ಮಾಡಿರುವ ವಿಜಯ್, ಸಿಎಎ ಜಾರಿಯನ್ನು ಒಪ್ಪಲು ಸಾಧ್ಯವಿಲ್ಲ. ದೇಶದಲ್ಲಿ ಎಲ್ಲರೂ ಸಹಬಾಳ್ವೆಯಿಂದ ಬಾಳುತ್ತಿದ್ದು, ಇಂತಹ ಕಾನೂನಿನ ಅಗತ್ಯವಿಲ್ಲ, ಇದು ವಿಭಜಕ ಕಾಯ್ದೆ ಅಂತ ಕಿಡಿಕಾರಿದ್ದಾರೆ. ಸಿಎಎ ಅನ್ನು ಜಾರಿಗೊಳಿಸಲು ಕೇಂದ್ರವು ನಿನ್ನೆ ಅಧಿಸೂಚನೆಯನ್ನು ಹೊರಡಿಸಿತ್ತು. ಇದಕ್ಕೆ ನಟ ವಿಜಯ್ ಅಷ್ಟೇ ಅಲ್ಲ, ಮಮತಾ ಬ್ಯಾನರ್ಜಿ, ಪಿಣರಾಯಿ ವಿಜಯನ್, ಸೇರಿದಂತೆ ವಿಪಕ್ಷ ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಲ್ಲದೆ, ತಮ್ಮ ತಮ್ಮ ರಾಜ್ಯದಲ್ಲಿ ಈ ಕಾಯ್ದೆಯನ್ನು ಜಾರಿಯಾಗಲು ಬಿಡುವುದಿಲ್ಲ ಎಂದಿದ್ದಾರೆ.

# ಪೇಟಿಎಂ ಫಾಸ್ಟ್‌ಟ್ಯಾಗ್ ರಿಚಾರ್ಜ್‌ಗೆ ಇಲ್ಲ ಅವಕಾಶ

**ದೆಹಲಿ:** ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಲಿಮಿಟೆಡ್ನ ಫಾಸ್ಟಾಗ್ ಹೊಂದಿದವರು ಮಾ.15ರ ಒಳಗಾಗಿ ಹೊಸ ಫಾಸ್ಟಾಗ್ ಖರೀದಿ ಮಾಡಬೇಕು. ಹೀಗೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರ (ಎನ್‌ಎಚ್ಎಐ) ಬುಧವಾರ ಸೂಚನೆ ನೀಡಿದೆ. ಈ ಮೂಲಕ ಟೋಲ್ಪ್ಲಾಜಾಗಳಲ್ಲಿ ಉಂಟಾಗಲಿರುವ ಸಂಭಾವ್ಯ ತೊಂದರೆ ನಿವಾರಿಸಿಕೊಳ್ಳಬೇಕು ಎಂದು ಗ್ರಾಹಕರಿಗೆ ಸಲಹೆ ಸಮಾಡಿದೆ.

ಮಾ.15ರ ಬಳಿಕ ಪೇಟಿಎಂ ಬ್ಯಾಂಕ್ನ ಫಾಸ್ಟಾಗ್ ಹೊಂದಿರುವವರಿಗೆ ರಿಚಾರ್ಜ್ ಮಾಡುವ ವ್ಯವಸ್ಥೆ ಇರುವುದಿಲ್ಲ ಎಂದೂ ಅದು ಹೇಳಿದೆ. ಖಾತೆಯಲ್ಲಿ ಉಳಿದಿರುವ ಮೊತ್ತ ಬಳಕೆ ಮಾಡುವುದಕ್ಕೆ ಅವಕಾಶ ಇದೆ ಎಂದು ಪ್ರಾಧಿಕಾರ ತಿಳಿಸಿದೆ.




## ಅಮೆರಿಕಾಕ್ಕೆ ಪುಟಿನ್ ಎಚ್ಚರಿಕೆ

**ಅಮೆರಿಕ:** ಉಕ್ರೇನ್ ಬೆಂಬಲಿಸಿ ಅಮೆರಿಕಾ ಸೇನೆಯನ್ನು ಕಳುಹಿಸಿದರೆ, ಪರಮಾಣು ಯುದ್ಧ ಅನಿವಾರ್ಯ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಎಚ್ಚರಿಕೆ ನೀಡಿದ್ದಾರೆ. ಯುಎಸ್ ಪಡೆಗಳನ್ನು ಉಕ್ರೇನ್ಗೆ ಕಳುಹಿಸಿದರೆ ಅದು ಯುದ್ಧಕ್ಕೆ ಉತ್ತೇಜನ ನೀಡಿದಂತಾಗುತ್ತದೆ.ಆ ತಪ್ಪು ಮಾಡಿದರೆ 'ಪರಮಾಣು ಯುದ್ಧ' ಅನಿವಾರ್ಯ ಎಂದಿದ್ದಾರೆ. ಉಕ್ರೇನ್ ಮೇಲೆ ಪರಮಾಣು ಶಸ್ತ್ರಾಸ್ತ್ರಗಳನ್ನು ಬಳಸುವ ಅಗತ್ಯವಿಲ್ಲ ಎಂಬುದು ಸ್ಪಷ್ಟವಾಗಿದೆ. ರಷ್ಯಾ ನಿಜವಾಗಿಯೂ ಪರಮಾಣು ಯುದ್ಧಕ್ಕೆ ಸಿದ್ಧವಾಗಿದೆಯೇ ಎಂದು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಪುಟಿನ್, ಮಿಲಿಟರಿ–ತಾಂತ್ರಿಕ ದೃಷ್ಟಿಯಿಂದ ನಾವು ಸಿದ್ಧರಿದ್ದೇವೆ .ಆದರೆ, ಆತುರವಿಲ್ಲ ಮತ್ತು ಕೆಲವು ಕಾರ್ಯವಿಧಾನಗಳಿವೆ. ಈ ಬಗ್ಗೆ ಅಮೆರಿಕಕ್ಕೂ ಅರಿವಿದೆ ಎಂದರು. ಉಕ್ರೇನ್ಗೆ ಬೆಂಬಲ ನೀಡಲು ಸೇನೆಯನ್ನು ಕಳುಹಿಸಿದರೆ, ಈ ಯುದ್ಧದಲ್ಲಿ ಅಮೆರಿಕ ನೇರವಾಗಿ ಮಧ್ಯಪ್ರವೇಶಿಸಿದಂತೆ ಆಗುತ್ತದೆ. ಹಾಗೇನಾದರೂ ನಡೆದರೆ ಖಂಡಿತಾ ಅದಕ್ಕೆ ಪ್ರತಿಕ್ರಿಯಿಸುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ. ಅದೇ ಸಮಯದಲ್ಲಿ, ರಷ್ಯಾ ಉಕ್ರೇನ್ ಜೊತೆ ಮಾತುಕತೆ ನಡೆಸಲು ಸಿದ್ಧವಾಗಿದೆ ಎಂದು ತಿಳಿದುಬಂದಿದೆ. ಆದರೆ.. ಆ ಚರ್ಚೆಗಳು ವಾಸ್ತವ ಸ್ಥಿತಿಗೆ ಅನುಗುಣವಾಗಿ ನಡೆಯಬೇಕು ಎಂದು ಸಲಹೆ ನೀಡಿದ್ದಾರೆ.



## ಚುನಾವಣೆಗೆ ಖರ್ಚು ಮಾಡಲು ನಮ್ಮ ಪಕ್ಷದಲ್ಲಿ ಹಣವಿಲ್ಲ: ಖರ್ಗೆ



**ನವದೆಹಲಿ:** ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ಜನರಿಂದ ದೇಣಿಗೆ ಇಟ್ಟಿದ್ದ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಿದೆ. ಇದರಿಂದ ನಮ್ಮ ಪಕ್ಷವು ಹಣದ ಕೊರತೆಯನ್ನು ಎದುರಿಸುತ್ತಿದೆ ಎಂದು ಎಐಸಿಸಿ ಅಧ್ಯಕ್ಷ ಎಂ ಮಲ್ಲಿಕಾರ್ಜುನ ಖರ್ಗೆ ಎಂದು ಆರೋಪಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ಬಿಜೆಪಿಯನ್ನು ಗುರಿಯಾಗಿಸಿಕೊಂಡ ಖರ್ಗೆ ಮಾತನಾಡಿ, ದೇಶದಲ್ಲಿ ಸಂವಿಧಾನ ಮತ್ತು ಪ್ರಜಾಪ್ರಭುತ್ವ ಉಳಿಸಲು ಜನರು ಒಟ್ಟಾಗಿ ಗಟ್ಟಿಯಾಗಿ ನಿಲ್ಲಬೇಕು. ಮುಂಬರುವ ಲೋಕಸಭೆ ಚುನಾವಣೆಯಲ್ಲಿ ತಮ್ಮ ಪಕ್ಷದ ಗೆಲುವನ್ನು ಖಚಿತಪಡಿಸಿಕೊಳ್ಳಬೇಕು ಎಂದುಕರೆನೀಡಿದ್ದಾರೆ. ಚುನಾವಣೆಯಲ್ಲಿ ಎಲ್ಲರಿಗೂ ಸಮಾನ ಅವಕಾಶ ಸಿಗಬೇಕು. ಬಿಜೆಪಿಯು ಕಾಂಗ್ರೆಸ್‌ನ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಿದೆ. ಆದಾಯ ತೆರಿಗೆ ಮೂಲಕ ಪಕ್ಷಕ್ಕೆ ಭಾರಿ ದಂಡವನ್ನು ವಿಧಿಸುತ್ತಿದೆ. ಆದರೆ ಅವರು ಸಾವಿರಾರು ಕೋಟಿ ರೂಪಾಯಿಗಳನ್ನು ಬಹಿರಂಗಪಡಿಸಲು ಸಿದ್ಧರಿಲ್ಲ. ಸುಪ್ರೀಂ ಕೋರ್ಟ್‌ನ ನಿರ್ದೇಶನಗಳ ಹೊರತಾಗಿಯೂ ಚುನಾವಣಾ ಬಾಂಡ್ ಗಳ ಬಗ್ಗೆ ಮಾಹಿತಿ ಬಹಿರಂಗಪಡಿಸುತ್ತಿಲ್ಲ ಎಂದು ಟೀಕಿಸಿದ್ದಾರೆ. ಜನರು ದೇಣಿಗೆಯಾಗಿ ನೀಡಿದ್ದು ನಮ್ಮ ಪಕ್ಷಕ್ಕೆ ಸೇರಿದ ಹಣ. ಆದರೆ ಬಿಜೆಪಿಯವರು ಅದನ್ನು ಸ್ಥಗಿತಗೊಳಿಸಿದ್ದಾರೆ. ಖರ್ಚು ಮಾಡಲು ನಮ್ಮ ಬಳಿ ಹಣವಿಲ್ಲ. ಆದರೆ, ಅವರು (ಬಿಜೆಪಿ) ಪಡೆದಿರುವ ಚುನಾವಣಾ ಬಾಂಡ್‌ಗಳ ಬಗ್ಗೆ ಬಹಿರಂಗಪಡಿಸುತ್ತಿಲ್ಲ. ಏಕೆಂದರೆ ಅವರ ಕಳ್ಳತನ ಹೊರಗೆ ಬರಬಹುದು. ಅವರ ತಪ್ಪು ಕೆಲಸಗಳು ಹೊರಬರಬಹುದು. ಆದ್ದರಿಂದ ಅವರು ಜುಲೈವರೆಗೆ ಸಮಯ ಕೇಳಿದ್ದಾರೆ ಎಂದು ಆರೋಪಿಸಿದ್ದಾರೆ.

# ಜಗತ್ತಿನ ಟಾಪ್ ಫೈವ್ ಆರ್ಥಿಕತೆಯಾಗಿ ಹೊರಹೊಮ್ಮಿದ ಭಾರತ - ಅಮಿತ್ ಶಾ

**ಮುಂಬೈ:** ಕೇಂದ್ರ ಗೃಹ ಸಚಿವ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಬುಧವಾರ ಮುಂಬೈನಲ್ಲಿ ನಡೆದ ಇಂಡಿಯಾ ಗ್ಲೋಬಲ್ ಫೋರಂನ ವಾರ್ಷಿಕ ಹೂಡಿಕೆ ಶೃಂಗಸಭೆ - NXT10 ಅನ್ನು ಉದ್ದೇಶಿಸಿ ಮಾತನಾಡಿದರು. ಈ ಸಂದರ್ಭದಲ್ಲಿ, 'ಮೋದಿ ನಾಯಕತ್ವದಲ್ಲಿ ಭಾರತ ದುರ್ಬಲ ಆರ್ಥಿಕತೆಯಿಂದ ವಿಶ್ವದ ಐದನೇ ಆರ್ಥಿಕತೆಯಾಗಿ ಹೊರಹೊಮ್ಮಿದೆ' ಎಂದು ಶಾ ಸುಸ್ಪಷ್ಟಪಡಿಸಿದರು.




2004 ರಿಂದ 2014 ರವರೆಗೆ ಕೇಂದ್ರದಲ್ಲಿ ಸೋನಿಯಾ-ಮನಮೋಹನ್ ಸರ್ಕಾರ ಅಧಿಕಾರದಲ್ಲಿದ್ದಾಗ ದೇಶದ ಆರ್ಥಿಕತೆಯು, ವಿಶ್ವದಲ್ಲಿ 11ನೇ ಸ್ಥಾನದಲ್ಲಿತ್ತು ಎಂಬುದು ಭಾರತದ ಪ್ರತಿಯೊಬ್ಬ ನಾಗರಿಕನಿಗೂ ತಿಳಿದಿದೆ. ಕಳೆದ 10 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ದೇಶದ ಆರ್ಥಿಕತೆಯನ್ನು 5ನೇ ಸ್ಥಾನಕ್ಕೆ ತರುವ ಕಾರ್ಯ ಮಾಡಿದೆ. ತಮ್ಮ ಮೂರನೇ ಅವಧಿಯಲ್ಲಿ ದೇಶದ ಆರ್ಥಿಕತೆಯನ್ನು ಮೋದಿಯವರು ಮೂರನೇ ಸ್ಥಾನಕ್ಕೆ ತರುವುದು ಖಚಿತ. 2014ರ ಹಿಂದಿನ 10 ವರ್ಷಗಳವರೆಗೆ ದೇಶದ ಆರ್ಥಿಕತೆಯ ಸ್ಥಿತಿ ಹದಗೆಟ್ಟಿತ್ತು, ಹೂಡಿಕೆದಾರರ ವಿಶ್ವಾಸ ಕುಸಿದಿತ್ತು, ಆದರೆ ಇಂದಿನ ಅಮೃತ ಕಾಲಘಟ್ಟದಲ್ಲಿ ದೇಶದ ಆರ್ಥಿಕತೆಯು ಬಲಿಷ್ಠವಾಗಿದೆ ಮತ್ತು ಭಾರತವು ಆತ್ಮ ವಿಶ್ವಾಸದಿಂದ ಎದ್ದುನಿಂತು ಸ್ವಾವಲಂಬಿಯಾಗಿದೆ. ಮೋದಿಯವರ ದೂರದೃಷ್ಟಿಯ ನಾಯಕತ್ವ ಮತ್ತು 'ಅಂತ್ಯೋದಯ' (ಕೊನೆಯ ಹಂತದ ವ್ಯಕ್ತಿಯ ಉನ್ನತಿ) ರಾಜಕಾರಣಕ್ಕೆ ಹೆಸರಾಗಿರುವ ಅಮಿತ್ ಶಾ ಅವರ ಮಾರ್ಗದರ್ಶನದಲ್ಲಿ ಕೇಂದ್ರ ಸರ್ಕಾರವು 'ನಿಷ್ಕ್ರಿಯ'ತೆಯಿಂದ ಎದ್ದು 'ಚಲನಶೀಲ'ವಾಗಿದೆ. 'ರಿಗ್ರೆಸಿವ್'ನಿಂದ 'ಪ್ರೊಗ್ರೆಸಿವ್'ಗೆ ಬದಲಾಗಿರುವ ಭಾರತದ ಆರ್ಥಿಕತೆಯು 'ದುರ್ಬಲ' ಸ್ಥಾನದಿಂದ ಅಗ್ರ ಸ್ಥಾನಕ್ಕೆ ತಲುಪಿದೆ. ಭಾರತವು ಈಗ ದುರ್ಬಲ ಐದು ಆರ್ಥಿಕತೆ ಹಣೆಪಟ್ಟಿಯಿಂದ ಹೊರಬಂದು, ಅಗ್ರ ಐದು ಆರ್ಥಿಕತೆಗಳ ಪಟ್ಟಕ್ಕೆ ತಲುಪಿದೆ. ಹೊಸ ಜಾಗತಿಕ ಭೂಪಟದಲ್ಲಿ ಭಾರತವು 'ಡಾರ್ಕ್ ಸ್ಪಾಟ್' ನಿಂದ 'ಬ್ರೈಟ್ ಸ್ಪಾಟ್' ಆಗಿ ಹೊರಹೊಮ್ಮಿದೆ. 10 ವರ್ಷಗಳಲ್ಲಿ ಸರ್ಕಾರವು ನೋಟು ಅಮಾನ್ಯೀಕರಣ, ಜಿಎಸ್ಟಿ, ಜನ್ ಧನ್, ತ್ರಿವಳಿ ತಲಾಖ್, ಹೊಸ ಶಿಕ್ಷಣ ನೀತಿ, ಸಿಎಎ, ವಿಧಿ 370 ಮತ್ತು 35 ಎ, ನಾರಿ ಶಕ್ತಿ ವಂದನ್ ಅಧಿನಿಯಮ್, ಮೂರು ಹೊಸ ಕಾನೂನುಗಳು, ರಾಮಮಂದಿರ ನಿರ್ಮಾಣ, ಹೊಸ ಸಂಸತ್ತಿನ ಕಟ್ಟಡ, ಕರ್ತಾರ್ಪುರ ಕಾರಿಡಾರ್ ನಿರ್ಮಾಣ, ಈಶಾನ್ಯ, ಕಾಶ್ಮೀರ ಮತ್ತು ಎಡಪಂಥೀಯ ಉಗ್ರವಾದದ ಮೇಲೆ ನಿಯಂತ್ರಣ, ಗೃಹೋಪಯೋಗಿ ವಿದ್ಯುತ್, ಅನಿಲ ಮತ್ತು ನೀರು, ? 5 ಲಕ್ಷದವರೆಗೆ ಉಚಿತ ಚಿಕಿತ್ಸೆ, ರೈತರಿಗೆ ಆರ್ಥಿಕ ನೆರವು, ಸರ್ಜಿಕಲ್ ಸ್ಟ್ರೈಕ್, ವೈಮಾನಿಕ ದಾಳಿ ಮತ್ತು ಇನ್ನೂ ಅನೇಕ ನಿರ್ಧಾರಗಳು ಸೇರಿದಂತೆ 50 ಕ್ಕೂ ಹೆಚ್ಚು ಪರಿವರ್ತಕ ನಿರ್ಧಾರಗಳನ್ನು ತೆಗೆದುಕೊಂಡಿದೆ. ಇವು ಭಾರತಕ್ಕೆ ವಿಶ್ವದಲ್ಲಿ ಹೊಸ ಗುರುತನ್ನು ನೀಡಿದೆ. ಇಂದಿನ ಅಮೃತ ಕಾಲಘಟ್ಟದಲ್ಲಿ, 2024ರ ಲೋಕಸಭೆ ಚುನಾವಣೆಯೂ ಸಮೀಪಿಸುತ್ತಿದೆ. ಮೋದಿ ಸರ್ಕಾರದ ಸಾಧನೆಗಳೊಂದಿಗೆ ಭಾರತೀಯ ರಾಜಕಾರಣದ ಚಾಣಕ್ಯ ಚುನಾವಣಾ ಸಮರದಲ್ಲಿ ಪ್ರತಿಪಕ್ಷಗಳಿಗೆ ನಿರ್ಣಾಯಕ ಸೋಲು ನೀಡಲು ಮತ್ತೊಮ್ಮೆ ರಣರಂಗಕ್ಕೆ ಇಳಿದಿದ್ದಾರೆ. ಕಳೆದ 10 ವರ್ಷಗಳ ಸಾಧನೆಯನ್ನು ಆಧರಿಸಿ ದೇಶದ ಜನತೆ ಮತ್ತೊಮ್ಮೆ ನರೇಂದ್ರ ಮೋದಿಯವರನ್ನು ಪ್ರಧಾನಿ ಮಾಡಲು ನಿರ್ಧರಿಸಿದೆ. ಶಾ ಚುನಾವಣಾ ಕಣಕ್ಕೆ ಇಳಿದರೆ ಕಮಲ ಅರಳುವುದು ಖಚಿತ ಎಂಬುದು ವಿರೋಧ ಪಕ್ಷಗಳಿಗೂ ಗೊತ್ತಿದೆ. ಯಾವುದೇ ಚುನಾವಣೆಯಲ್ಲಿ ಗೆಲುವು ಸಾಧಿಸಲು ಭಾರತೀಯ ಜನತಾ ಪಕ್ಷದ ಅಸಾಮಾನ್ಯ ನಾಯಕ ಶಾ ಅಸ್ತ್ರವೊಂದಿದ್ದರೆ ಸಾಕು.

## ವಿಶ್ವಾಸಮತ ಗೆದ್ದ ನೇಪಾಳ ಪ್ರಧಾನಿ



**ಕಠ್ಮಂಡು:** ನೇಪಾಳದ ಪ್ರಧಾನಿ ಪುಷ್ಪಕಮಲ ದಹಾಲ್ 'ಪ್ರಚಂಡ' ಬುಧವಾರ ಸಂಸತ್ನಲ್ಲಿ ವಿಶ್ವಾಸಮತ ಗೆಲ್ಲುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ವರದಿಯಾಗಿದೆ. ಕಮ್ಯುನಿಸ್ಟ್ ಪಾರ್ಟಿ ಆಫ್ ನೇಪಾಳ (ಮಾವೋವಾದಿ) ಪಕ್ಷದ ಮುಖಂಡರಾಗಿರುವ ಪುಷ್ಪಕಮಲ ದಹಾಲ್ 275 ಸದಸ್ಯ ಬಲದ 'ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್'ನಲ್ಲಿ 157 ಮತಗಳನ್ನು ಪಡೆಯುವುದರೊಂದಿಗೆ ವಿಶ್ವಾಸಮತ ಗೆದ್ದಿದ್ದಾರೆ.ನೇಪಾಳಿ ಕಾಂಗ್ರೆಸ್ ಪಕ್ಷದ ಜತೆಗಿನ ಮೈತ್ರಿಯನ್ನು ಕಡಿದುಕೊಂಡ ದಹಾಲ್ ಸಿಪಿಎನ್(ಯುಎಮ್–ಎಲ್) ಪಕ್ಷದೊಂದಿಗೆ ಮೈತ್ರಿ ಮಾಡಿಕೊಂಡು ಹೊಸ ಸರಕಾರ ರಚಿಸಿದ್ದಾರೆ. 2002ರಲ್ಲಿ ಪ್ರಧಾನಿ ಪಟ್ಟಕ್ಕೇರಿದ ಬಳಿಕ ದಹಾಲ್ ಮೂರನೇ ಬಾರಿಗೆ ಸಂಸತ್ನಲ್ಲಿ ವಿಶ್ವಾಸ ಮತ ಕೋರಿದಂತಾಗಿದೆ. ನೇಪಾಳದ ಸಂವಿಧಾನದ ಪ್ರಕಾರ ಆಡಳಿತಾರೂಢ ಮೈತ್ರಿಕೂಟದಿಂದ ಮಿತ್ರಪಕ್ಷವೊಂದು ಬೆಂಬಲ ವಾಪಾಸು ಪಡೆದರೆ ಪ್ರಧಾನಿ ಸಂಸತ್ನಲ್ಲಿ ವಿಶ್ವಾಸಮತ ಸಾಬೀತು ಪಡಿಸಬೇಕು.

## ಉತ್ತರಾಖಂಡದ ಏಕರೂಪ ನಾಗರಿಕ ಸಂಹಿತೆ ಮಸೂದೆಗೆ ರಾಷ್ಟ್ರಪತಿ ಅನುಮೋದನೆ

**ಡೆಹ್ರಾಡೂನ್:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಬುಧವಾರ ಉತ್ತರಾಖಂಡದ ಏಕರೂಪ ನಾಗರಿಕ ಸಂಹಿತೆ ಮಸೂದೆಗೆ ಅನುಮೋದನೆ ನೀಡಿದ್ದಾರೆ ಎಂದು ರಾಜ್ಯ ಸರ್ಕಾರ ದೃಢಪಡಿಸಿದೆ. ರಾಷ್ಟ್ರಪತಿಗಳ ಅನುಮೋದನೆಯೊಂದಿಗೆ ಉತ್ತರಾಖಂಡವು ಯುಸಿಸಿಯನ್ನು ಜಾರಿಗೆ ತಂದ ದೇಶದ ಮೊದಲ ರಾಜ್ಯವಾಗಲು ಸಿದ್ಧವಾಗಿದೆ. ಉತ್ತರಾಖಂಡದ ರಾಜ್ಯಪಾಲ ಗುರ್ಮಿತ್ ಸಿಂಗ್ ಅವರು ಫೆ.29 ರಂದು ರಾಜ್ಯ ಸರ್ಕಾರವು ಕಳುಹಿಸಿದ್ದ ಮಸೂದೆಯನ್ನು ರಾಷ್ಟ್ರಪತಿ ಮುರ್ಮು ಅವರ ಅನುಮೋದನೆಗೆ ಕಳುಹಿಸಿದ್ದರು. ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಸರ್ಕಾರವು ಫೆ.6 ರಂದು ಯುಸಿಸಿ ಮಸೂದೆಯನ್ನು ಮಂಡಿಸಿ, ಅದರ ಮಹತ್ವವನ್ನು ಒತ್ತಿಹೇಳಿತ್ತು. ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ, ವಿಧಾನಸಭೆಯಲ್ಲಿ ಏಕರೂಪ ನಾಗರಿಕ ಸಂಹಿತೆ ಮಸೂದೆಯ ಅಂಗೀಕಾರವು ಉತ್ತರಾಖಂಡದ ಇತಿಹಾಸದಲ್ಲಿ ಐತಿಹಾಸಿಕ ದಿನ ಎಂದು ಬಣ್ಣಿಸಿದ್ದರು.

# ಬೈಡೆನ್, ಟ್ರಂಪ್ ನಡುವೆ ನೇರ ಸ್ಪರ್ಧೆ!



**ವಾಷಿಂಗ್ಟನ್:** ವರ್ಷಾಂತ್ಯದಲ್ಲಿ ನಡೆಯಲಿರುವ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ನಿರೀಕ್ಷೆಯಂತೆಯೇ ಹಾಲಿ ಅಧ್ಯಕ್ಷ ಜೋ ಬೈಡೆನ್ ಹಾಗೂ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವೆ ಹಣಾಹಣಿ ನಿಶ್ಚಿತವಾಗಿದೆ. 2020ರಲ್ಲೂ ಈ ಇಬ್ಬರೂ ನಾಯಕರ ನಡುವೆಯೇ ಸ್ಪರ್ಧೆ ನಡೆದಿತ್ತು.

ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿಯಾಗಲು ಕನಿಷ್ಠ 1968 ಮತ ಗಳ ಅಗತ್ಯವಿದ್ದು, ಬೈಡನ್ 2099 ಮತ ಪಡೆದಿದ್ದಾರೆ. ಡೆಮಾ ಕ್ರಾಟ್ ಪಕ್ಷದ ಅಭ್ಯರ್ಥಿ ಟ್ರಂಪ್ಗೆ 1228 ಮತಗಳು ಸಿಕ್ಕಿವೆ.



## ಅಫ್ಘಾನಿಸ್ತಾನದಲ್ಲಿ ಮತ್ತೆ ಭೂಕಂಪ

**ಕಾಬೂಲ್:** ಭೂಕಂಪ ಪೀಡಿತ ಅಫ್ಘಾನಿಸ್ತಾನದ ಭೂಮಿ ಮತ್ತೊಮ್ಮೆ ಭೂಕಂಪನದಿಂದ ನಡುಗಿದೆ. ಇಲ್ಲಿ ಪ್ರಬಲ ಭೂಕಂಪನದ ಅನುಭವವಾಗಿದೆ. ಭೂಕಂಪದ ತೀವ್ರತೆ ರಿಕ್ಟರ್ ಮಾಪಕದಲ್ಲಿ 5.3 ರಷ್ಟು ದಾಖಲಾಗಿದೆ ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ, ತಿಳಿಸಿದೆ. ಇದರ ಕೇಂದ್ರವು ನೆಲದಿಂದ 146 ಕಿಲೋಮೀಟರ್ ಆಳದಲ್ಲಿತ್ತು. ಪಾಕಿಸ್ತಾನದ ಕೆಲವು ಪ್ರದೇಶಗಳಲ್ಲಿ ಭೂಕಂಪನದ ಅನುಭವವಾಗಿದೆ. ಈವರೆಗೆ ಯಾವುದೇ ಹಾನಿಯ ಬಗ್ಗೆ ವರದಿಯಾಗಿಲ್ಲ, ಆದರೆ ಭೂಕಂಪದ ತೀವ್ರತೆಯನ್ನು ಗಮನಿಸಿದರೆ, ಭಾರಿ ಹಾನಿಯಾಗುವ ಸಾಧ್ಯತೆಯಿದೆ. ಇತ್ತೀಚಿನ ದಿನಗಳಲ್ಲಿ ಅಫ್ಘಾನಿಸ್ತಾನವು ಆಗಾಗ್ಗೆ ಭೂಕಂಪಗಳಿಗೆ ತುತ್ತಾಗುತ್ತಿದೆ. ಇದಕ್ಕೂ ಮೊದಲು ಫೆಬ್ರವರಿ 21 ರಂದು ಬೆಳಿಗ್ಗೆ 4.2 ತೀವ್ರತೆಯ ಭೂಕಂಪ ಸಂಭವಿಸಿತ್ತು. ಭೂಕಂಪ ಸಂಭವಿಸಿದಾಗ ಜನರು ತಮ್ಮ ಮನೆಗಳಲ್ಲಿ ಮಲಗಿದ್ದರು. ಎಚ್ಚರವಾಗಿದ್ದ ಕೆಲವು ಜನರು ಕಂಪನಗಳನ್ನು ಅನುಭವಿಸಿದರು. ಭೂಕಂಪಶಾಸ್ತ್ರದ ರಾಷ್ಟ್ರೀಯ ಕೇಂದ್ರದ ಪ್ರಕಾರ, ಭೂಕಂಪದ ಆಳವು 10 ಕಿ.ಮೀ ಎಂದು ದಾಖಲಾಗಿದೆ. ಇದು 24 ಗಂಟೆಗಳಲ್ಲಿ ಸಂಭವಿಸಿದ ಎರಡನೇ ಭೂಕಂಪವಾಗಿದೆ. ಇದಕ್ಕೂ ಮುನ್ನ ಅಫ್ಘಾನಿಸ್ತಾನದ ಫೈಜಾಬಾದ್ನಲ್ಲಿ 4.7 ತೀವ್ರತೆಯ ಭೂಕಂಪ ಸಂಭವಿಸಿತ್ತು.




# ಅಹ್ಮದ್‌ನಗರವನ್ನು ಅಹಲ್ಯಾ ನಗರ ಎಂದು ಮರುನಾಮಕರಣ ಮಾಡಲು ನಿರ್ಧಾರ




**ಮಹಾರಾಷ್ಟ್ರ:** ಕಳೆದ ವರ್ಷ ಮೇ ತಿಂಗಳಲ್ಲಿ 18ನೇ ಶತಮಾನದ ರಾಣಿ ಅಹಲ್ಯಾಬಾಯಿ ಹೋಳ್ಕರ್ ಅವರ 298ನೇ ಜನ್ಮದಿನದಂದು ಮಹಾರಾಷ್ಟ್ರದ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಅ ಹ್ಮ ದ್ ನ ಗ ರ ವ ನ್ನು ಮರುನಾಮಕರಣ ಮಾಡುವ ಪ್ರಸ್ತಾಪವನ್ನು ಘೋಷಿಸಿದ್ದರು.

18ನೇ ಶತಮಾನದ ಮರಾಠ ರಾಣಿ ಅಹಲ್ಯಾಬಾಯಿ ಹೋಳ್ಕರ್ ಅವರ ಹೆಸರನ್ನು ಅಹ್ಮದ್ನಗರ ಜಿಲ್ಲೆಗೆ ಇಡಲು ಮಹಾರಾಷ್ಟ್ರ ಸರ್ಕಾರ ನಿರ್ಧರಿಸಿದೆ. ಈ ಹಿಂದೆ ಬ್ರಿಟಿಷರ ಕಾಲದ ಹೆಸರುಗಳನ್ನು ನೀಡಲಾಗಿದ್ದ ಮುಂಬೈನ ಏಳು ರೈಲು ನಿಲ್ದಾಣಗಳಿಗೆ ಮರುನಾಮಕರಣ ಮಾಡುವ ಕ್ಯಾಬಿನೆಟ್ ನಿರ್ಧಾರ ಸೇರಿದಂತೆ ಇತರ ಪ್ರಕಟಣೆಗಳ ನಡುವೆ ಈ ನಿರ್ಧಾರವನ್ನು ಪ್ರಕಟಿಸಲಾಗಿದೆ.

ಅನುಮೋದನೆಯ ನಂತರ, ಕರ್ರಿ ರಸ್ತೆಯನ್ನು ಲಾಲ್ಬಾಗ್ ಎಂದು ಮರುನಾಮಕರಣ ಮಾಡಲಾಗುವುದು, ಸ್ಯಾಂಡ್ಹರ್ಸ್ಟ್ ರಸ್ತೆಯನ್ನು ಈಗ ಡೋಂಗ್ರಿ ಎಂದು ಕರೆಯಲಾಗುತ್ತದೆ. ಮೆರೈನ್ ಲೈನ್‌ಗಳನ್ನು ಮುಂಬಾದೇವಿ ಎಂದು ಮರುನಾಮಕರಣ ಮಾಡಲಾಗುತ್ತದೆ. ಕಾಟನ್ ಗ್ರೀನ್ ನಿಲ್ದಾಣವನ್ನು ಕಲಾಚೌಕಿ ಎಂದು ಮರುನಾಮಕರಣ ಮಾಡಲಾಗುವುದು. ಚಾರ್ನಿ ರಸ್ತೆಯನ್ನು ಗಿರ್ಗಾಂವ್, ಡಾಕ್ಯಾರ್ಡ್ ರಸ್ತೆಯನ್ನು ಮಜಗಾಂವ್ ಮತ್ತು ಕಿಂಗ್ ಸರ್ಕಲ್ ಅನ್ನು ತೀರ್ಥಕರ್ ಪಾರ್ಶಿವನಾಥ್ ಎಂದು ಮರುನಾಮಕರಣ ಮಾಡಲಾಗುವುದು. ಮುಂಬೈ ಸೆಂಟ್ರಲ್ ಸ್ಟೇಷನ್ ಅನ್ನು ನಾನಾ ಜಗನ್ನಾಥ್ ಶಂಕರಶೆಟ್ ಸ್ಟೇಷನ್ ಎಂದು ಮರುನಾಮಕರಣ ಮಾಡಲು ಸಚಿವ ಸಂಪುಟ ನಿರ್ಧರಿಸಿದ್ದು, ಇದಕ್ಕಾಗಿ ರೈಲ್ವೆ ಸಚಿವಾಲಯಕ್ಕೆ ಪ್ರಸ್ತಾವನೆ ಕಳುಹಿಸಲಾಗಿದೆ.

# ಹಿಂದೂ ಮಹಾಸಾಗರದಲ್ಲಿ ಬಾಂಗ್ಲಾದ ಸರಕು ನೌಕೆ ಹೈಜಾಕ್




**ಢಾಕ:** ಹಿಂದೂ ಮಹಾಸಾಗರ ಪ್ರದೇಶದಲ್ಲಿ ಬಾಂಗ್ಲಾದೇಶದ ಸರಕು ನೌಕೆಯನ್ನು ಅಪಹರಿಸಲಾಗಿದ್ದು ಹಡಗು ಈಗ ಸೊಮಾಲಿಯಾ ಕರಾವಳಿಯತ್ತ ಸಾಗುತ್ತಿದೆ ಎಂದು ವರದಿಯಾಗಿದೆ. ಒಂದು ದೊಡ್ಡ ದೋಣಿ ಹಾಗೂ ಮತ್ತೊಂದು ಸಣ್ಣ ದೋಣಿಯಲ್ಲಿ ಬಂದ 22 ಮಂದಿ ಸಶಸ್ತ್ರಧಾರಿ ವ್ಯಕ್ತಿಗಳು ಬಾಂಗ್ಲಾ ಸರಕು ನೌಕೆಯನ್ನು ಪ್ರವೇಶಿಸಿದ್ದಾರೆ. ನೌಕೆಯ ಸಿಬಂದಿಗಳಿಗೆ ಯಾವುದೇ ಹಾನಿಯಾಗಿಲ್ಲ ಎಂದು ಬ್ರಿಟನ್ನ 'ಕಡಲಪ್ರದೇಶ ವ್ಯಾಪಾರ ನಿರ್ವಹಣೆ'(ಯುಕೆಎಂಟಿಒ) ವರದಿ ಮಾಡಿದೆ. ಬಾಂಗ್ಲಾದೇಶದ ಧ್ವಜವನ್ನು ಹೊಂದಿದ್ದ ಸರಕು ನೌಕೆಯಲ್ಲಿ 55,000 ಟನ್ಗಳಷ್ಟು ಕಲ್ಲಿದ್ದಲು ಇದ್ದು ಮೊಝಾಂಬಿಕ್ನಿಂದ ಯುಎಇ ಕಡೆ ಪ್ರಯಾಣಿಸುತ್ತಿತ್ತು. ಹಿಂದೂ ಮಹಾಸಾಗರ ಪ್ರದೇಶದಲ್ಲಿ ಸುಮಾರು 20ರಷ್ಟಿದ್ದ ಕಡಲ್ಗಳ್ಳರ ಗುಂಪು ಸರಕುನೌಕೆಯನ್ನು ಅಪಹರಿಸಿದೆ. ಅಂತಿಮ ಮಾಹಿತಿಯ ಪ್ರಕಾರ, ಸರಕು ನೌಕೆಯನ್ನು ಸೊಮಾಲಿಯಾ ಕರಾವಳಿ ತೀರದತ್ತ ಕೊಂಡೊಯ್ಯಲಾಗುತ್ತಿದೆ. ಆದರೆ ಇದು ಸೊಮಾಲಿಯಾದ ಕಡಲ್ಗಳ್ಳರ ಕೃತ್ಯ ಎಂಬುದು ದೃಢಪಟ್ಟಿಲ್ಲ ಎಂದು ಉನ್ನತ ಮೂಲಗಳನ್ನು ಉಲ್ಲೇಖಿಸಿ 'ರಾಯ್ಟರ್ಸ್' ವರದಿ ಮಾಡಿದೆ. ಘಟನೆಯ ನಂತರ ಈ ಪ್ರದೇಶದಲ್ಲಿ ಪ್ರಯಾಣಿಸುವ ಹಡಗುಗಳಿಗೆ ಎಚ್ಚರಿಕೆಯ ಸಂದೇಶ ರವಾನಿಸಲಾಗಿದ್ದು ಪ್ರಕರಣದ ತನಿಖೆ ನಡೆಸಲಾಗುತ್ತಿದೆ ಎಂದು ಯುಕೆಎಂಟಿಒ ಹೇಳಿದೆ. 2023ರ ನವೆಂಬರ್ನಿಂದ ಏಡನ್ ಕೊಲ್ಲಿ ಅಥವಾ ಸೊಮಾಲಿಯಾ ಕಡಲ ಪ್ರದೇಶದಲ್ಲಿ 20ಕ್ಕೂ ಅಧಿಕ ಹಡಗು ಅಪಹರಣ ಅಥವಾ ಅಪಹರಣಕ್ಕೆ ಪ್ರಯತ್ನಗಳು ನಡೆದಿವೆ ಎಂದು ವರದಿ ಹೇಳಿದೆ.

# ಚೀನಾದ ಹೋಟೆಲ್‌ನಲ್ಲಿ ಸ್ಫೋಟ ಇಬ್ಬರು ಬಲಿ



**ಬೀಜಿಂಗ್:** ಉತ್ತರ ಚೀನಾದ ಹೋಟೆಲ್ನಲ್ಲಿ ಬುಧವಾರ ನಡೆದ ಪ್ರಬಲ ಸ್ಫೋಟದಲ್ಲಿ ಕನಿಷ್ಟ 2 ಮಂದಿ ಮೃತಪಟ್ಟಿದ್ದು ಇತರ 26 ಮಂದಿ ಗಾಯಗೊಂಡಿರುವುದಾಗಿ ವರದಿಯಾಗಿದೆ.

ಹೆಬೆಯ್ ಪ್ರಾಂತದ ಸಾಹ್ನೆ ನಗರದಲ್ಲಿರುವ ಹೋಟೆಲ್ ಬಳಿಯ ಹುರಿದ ಕೋಳಿ ಮಾಂಸ(ಚಿಕನ್ ಫ್ರೈ)ದ ಅಂಗಡಿಯಲ್ಲಿ ಗ್ಯಾಸ್ ಸೋರಿಕೆಯಿಂದ ಸ್ಫೋಟ ಸಂಭವಿಸಿದ್ದು ಕಟ್ಟಡಕ್ಕೆ ತೀವ್ರ ಹಾನಿಯಾಗಿದೆ. ಆ ಸಂದರ್ಭ ಹೋಟೆಲ್ನಲ್ಲಿ ಹೆಚ್ಚಿನ ಸಂಖ್ಯೆಯ ಗ್ರಾಹಕರಿದ್ದರು. ಇಬ್ಬರು ಸಾವನ್ನಪ್ಪಿದ್ದು ಇತರ 26 ಮಂದಿ ಗಾಯಗೊಂಡಿದ್ದಾರೆ. ಬೆಂಕಿಯನ್ನು ನಿಯಂತ್ರಿಸಲಾಗಿದೆ ಎಂದು ಅಧಿಕಾರಿಗಳನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ. ಸ್ಫೋಟದ ತೀವ್ರತೆಗೆ ಕಟ್ಟಡ ಕುಸಿದು ಬೀಳುತ್ತಿರುವ, ಹೋಟೆಲ್ ಎದುರು ನಿಲ್ಲಿಸಿರುವ ಹಲವು ವಾಹನಗಳಿಗೆ ಹಾನಿಯಾಗಿರುವ ಮತ್ತು ಕಟ್ಟಡದ ಅವಶೇಷಗಳು ರಸ್ತೆಯ ಮೇಲೆ ಹಾರಿ ಬೀಳುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಬೆಂಕಿಯನ್ನು ನಂದಿಸಲು 36 ಅಗ್ನಿಶಾಮಕ ವಾಹನಗಳು ಹಾಗೂ 154 ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

# ಉಡಾವಣೆಯಾದ ಕೆಲ ಹೊತ್ತಲ್ಲೇ ರಾಕೆಟ್ ಸ್ಫೋಟ!



**ಟೋಕಿಯೊ:** ಜಪಾನಿನ ಕಂಪನಿಯೊಂದು ತಯಾರಿಸಿದ ರಾಕೆಟ್ ಬುಧವಾರ ಉಡಾವಣೆಯಾದ ಕೆಲವೇ ಸಮಯದಲ್ಲಿ ಸ್ಫೋಟಗೊಂಡ ಘಟನೆ ನಡೆದಿದೆ.

ಟೋಕಿಯೋ ಮೂಲದ ಸ್ಟಾರ್ಟ್ ಅಪ್ ಸ್ಪೇಸ್ ಒನ್ ಉಪಗ್ರಹ ಉಡಾವಣೆ ಮಾಡಿತ್ತು. ಕೈರೋಸ್ ರಾಕೆಟ್ ಪಶ್ಚಿಮ ಜಪಾನ್ನ ವಕಯಾಮಾ ಪ್ರಿಫೆಕ್ಚರ್ನಲ್ಲಿರುವ ಸ್ಟಾರ್ಟ್‌ಅಪ್ನ ಉಡಾವಣಾ ಕೇಂದ್ರದಿಂದ ಉಪಗ್ರಹ ಉಡಾವಣೆ ಮಾಡಲಾಗಿತ್ತು. ಯಶಸ್ವಿಯಾಗಿ ಉಪಗ್ರಹವನ್ನು ಕಕ್ಷೆಗೆ ಸೇರಿಸುವ ಮೊದಲ ಜಪಾನಿನ ಖಾಸಗಿ ಸಂಸ್ಥೆಯಾಗುವ ಗುರಿ ಹೊಂದಿತ್ತು. ಆದರೆ ಉಡಾವಣೆಯಾದ ಕೆಲವೇ ಸೆಕೆಂಡುಗಳ ನಂತರ, ರಾಕೆಟ್ ಜ್ವಾಲೆಯ ಚೆಂಡಾಯಿತು. ಉಪಗ್ರಹ ಸ್ಫೋಟಗೊಂಡು ಉಡಾವಣಾ ಪ್ಯಾಡ್ ಪ್ರದೇಶದಲ್ಲಿ ಕಪ್ಪು ಹೊಗೆ ತುಂಬಿತ್ತು. ಉಡಾವಣೆಯಾದ ಸುಮಾರು 51 ನಿಮಿಷಗಳ ಹೊತ್ತಿಗೆ ಉಪಗ್ರಹವನ್ನು ಕಕ್ಷೆಗೆ ಸೇರಿಸುವ ಭರವಸೆಯನ್ನು ಕೈರೋಸ್ ಹೊಂದಿತ್ತು. ಆದರೆ ಪ್ರಯತ್ನ ವಿಫಲವಾಗಿದೆ. ವಿಫಲತೆ ಸಂಬಂಧ ತನಿಖೆ ನಡೆಸಲಾಗುತ್ತಿದೆ ಎಂದು ಸ್ಪೇಸ್ ಒನ್ ತಿಳಿಸಿದೆ. ಕ್ಯಾನನ್ ಎಲೆಕ್ಟ್ರಾನಿಕ್ಸ್, ಐಎಚ್ಐ ಏರೋಸ್ಪೇಸ್, ನಿರ್ಮಾಣ ಸಂಸ್ಥೆ ಶಿಮಿಜು ಮತ್ತು ಜಪಾನ್ನ ಸರ್ಕಾರಿ ಸ್ವಾಮ್ಯದ ಡೆವಲಪ್ಮೆಂಟ್ ಬ್ಯಾಂಕ್ ಸೇರಿದಂತೆ ಪ್ರಮುಖ ಜಪಾನೀಸ್ ಟೆಕ್ ವ್ಯವಹಾರಗಳ ತಂಡದಿಂದ ಸ್ಪೇಸ್ ಒನ್ ಅನ್ನು 2018 ರಲ್ಲಿ ಸ್ಥಾಪಿಸಲಾಯಿತು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬರ್ತಿದೆ 'ಜೆಎನ್‌ಯು' ಸಿನಿಮಾ




ಕೆಲವು ಸಿನಿಮಾಗಳ ಟೈಟಲ್‌ಗಳು ಸಖತ್ ಸದ್ದು ಮಾಡುತ್ತವೆ. ಈಗ 'ಜೆಎನ್ ಯು' ಸಿನಿಮಾ ಶೀರ್ಷಿಕೆ ಸದ್ದು ಮಾಡುತ್ತಿದೆ. 'ಜೆಎನ್ ಯು' ಎಂದರೆ 'ಜವಾಹರ್ ಲಾಲ್ ನೆಹರು ಯೂನಿವರ್ಸಟಿ' ಅಲ್ಲ. ಈ ಸಿನಿಮಾದಲ್ಲಿ 'ಜೆಎನ್ ಯು' ಎಂದರೆ 'ಜಹಾಂಗೀರ್ ನ್ಯಾಷನಲ್ ಯೂನಿವರ್ಸಿಟಿ' ಎಂದು. ಈ ಚಿತ್ರದ ಫಸ್ಟ್ ಪೋಸ್ಟರ್ ರಿಲೀಸ್ ಆಗಿದೆ. ಈ ಪೋಸ್ಟರ್‌ನಲ್ಲಿ ಕೈ ಒಳಗೆ ಭಾರತದ ಮ್ಯಾಪ್ ಇದೆ. ಈ ಬಗ್ಗೆ ಪರ-ವಿರೋಧ ಚರ್ಚೆಗಳು ನಡೆಯುತ್ತಿವೆ. ಅನೇಕರು ಇದನ್ನು ಪ್ರೊಪೊಗಾಂಡ ಸಿನಿಮಾ ಎಂದು ಕರೆದಿದ್ದಾರೆ.

ಭಾರತದ ನಕಾಶೆ ಒಳಗೆ 'ಒಂದು ಶೈಕ್ಷಣಿಕ ವಿಶ್ವವಿದ್ಯಾಲಯವು ರಾಷ್ಟ್ರವನ್ನು ಒಡೆಯಬಹುದೇ ' ಎಂದು ಬರೆಯಲಾಗಿದೆ. ಈ ವಿಚಾರ ಸಾಕಷ್ಟು ಚರ್ಚೆ ಹುಟ್ಟುಹಾಕಿದೆ. ಬಲಪಂಥೀಯರು 'ಜೆಎನ್ ಯು' ಶಿಕ್ಷಣ ಸಂಸ್ಥೆಯನ್ನು ವಿರೋಧಿಸುತ್ತಲೇ ಬಂದಿದ್ದಾರೆ. ಇದು ಭಯೋತ್ಪಾದಕರನ್ನು ಉತ್ಪಾದಿಸುವ ಶಿಕ್ಷಣ ಸಂಸ್ಥೆ ಎಂದು ಅನೇಕರು ಆರೋಪಿಸಿದ್ದು ಇದೆ. ಈಗ 'ಜೆಎನ್ ಯು' ಸಿನಿಮಾ ಬರುತ್ತಿರುವುದು ಚರ್ಚೆ ಹುಟ್ಟುಹಾಕಿದೆ. ಊರ್ವಶಿ ರೌಟೇಲಾ ಅವರು 'ಜೆಎನ್ ಯು' ಸಿನಿಮಾದಲ್ಲಿ ಮುಖ್ಯಭೂಮಿಕೆ ನಿರ್ವಹಿಸಲಿದ್ದಾರೆ. ಈ ಪೋಸ್ಟರ್ ಗೆ ಅನೇಕರು ವಿರೋಧ ವ್ಯಕ್ತಪಡಿಸಿದ್ದಾರೆ. 'ನೀವು ನಿಮ್ಮನ್ನು ಸೆಲೆಬ್ರಿಟಿ ಎಂದು ಕರೆದುಕೊಳ್ಳಬೇಡಿ. ನೀವು ಭಾರತದಲ್ಲಿ ದ್ವೇಷವನ್ನು ಹರಡುತ್ತಿದ್ದೀರಿ' ಎಂದು ಬರೆಯಲಾಗಿದೆ. ಇನ್ನೂ ಕೆಲವರು 'ಈ ರೀತಿಯ ಟ್ರ್ಯಾಪ್ ಗಳಿಗೆ ಜನರು ಬಲಿಯಾಗುವುದಿಲ್ಲ. ಇದೊಂದು ಪ್ರೊಪೊಗಾಂಡ ಸಿನಿಮಾ' ಎಂದು ಕರೆದಿದ್ದಾರೆ.

ಜೆಎನ್ ಯು ಸಿನಿಮಾ ಪೋಸ್ಟರ್

ವಿನಯ್ ಶರ್ಮಾ ಅವರು 'ಜೆಎನ್ ಯು' ಚಿತ್ರವನ್ನು ನಿರ್ದೇಶನ ಮಾಡುತ್ತಿದ್ದಾರೆ. ಊರ್ವಶಿ ರೌಟೇಲಾ ಜೊತೆಗೆ ಸಿದ್ದಾರ್ಥ್ ಬೋಡ್ಕೆ, ಪಿಯುಷ್ ಮಿಶ್ರಾ, ರವಿ ಕಿಶನ್, ರಶ್ಮಿ ದೇಸಾಯಿ ಮೊದಲಾದವರು ನಟಿಸಿದ್ದಾರೆ. ಈ ಚಿತ್ರ ರಿಲೀಸ್ ಗೂ ಮೊದಲೇ ವಿವಾದ ಸೃಷ್ಟಿ ಮಾಡಿದೆ.

# 'ನನ್ನರಸಿ ರಾಧೆ' ನಟಿ ಕೌಸ್ತುಭ ಮಣಿ ಮದುವೆ ಡೇಟ್ ಫಿಕ್ಸ್



ಕಿರುತೆರೆ ಬ್ಯೂಟಿ ಕೌಸ್ತುಭ ಮಣಿ ಅವರು ಇತ್ತೀಚೆಗೆ ಎಂಗೇಜ್‌ಮೆಂಟ್ ಮಾಡಿಕೊಳ್ಳುವ ಮೂಲಕ ಪಡ್ಡೆಹುಡುಗರಿಗೆ ಶಾಕ್ ಕೊಟ್ಟಿದ್ದರು. ಇದೀಗ ನಟಿಯ ಮದುವೆ ಡೇಟ್ ಫಿಕ್ಸ್ ಆಗಿದೆ. ಏಪ್ರಿಲ್‌ನಲ್ಲಿ ಸಿದ್ಧಾಂತ್ ಸತೀಶ್ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಡುತ್ತಿದ್ದಾರೆ.

ತಮ್ಮ ಬದುಕಿನ ಹೊಸ ಜರ್ನಿ ಶುರು ಮಾಡಲು 'ನನ್ನರಸಿ ರಾಧೆ' ನಟಿ ಎದುರುನೋಡ್ತಿದ್ದಾರೆ. ಗುರುಹಿರಿಯರ ಸಮ್ಮತಿಯ ಮೇರೆಗೆ ಮುಂದಿನ ತಿಂಗಳು ಹಸೆಮಣೆ ಏರೋದಕ್ಕೆ ರೆಡಿಯಾಗಿದ್ದಾರೆ. ಈ ಮದುವೆಗೆ ತಮ್ಮ ಕುಟುಂಬದ ಜೊತೆ ಆಪ್ತರು, ಸ್ನೇಹಿತರಿಗಷ್ಟೇ ಆಹ್ವಾನವಿರಲಿದೆ. ಮಾರ್ಚ್ ಮೊದಲ ಅದ್ದೂರಿಯಾಗಿ ಎಂಗೇಜ್‌ಮೆಂಟ್ ಆಗಿರುವ ಬಗ್ಗೆ ನಟಿ ಗುಡ್ ನ್ಯೂಸ್ ಹಂಚಿಕೊಂಡಿದ್ದರು.

ಇತ್ತೀಚೆಗೆ 'ಗೌರಿ ಶಂಕರ' ಎಂಬ ಸೀರಿಯಲ್‌ನಲ್ಲಿ ನಟಿಸುತ್ತಿದ್ದರು. ಮದುವೆ ನಿಶ್ಚಯವಾಗಿದೆ ಎಂಬ ಕಾರಣಕ್ಕೆ ನಟಿ ಸೀರಿಯಲ್‌ನಿಂದ ಹೊರಬಂದಿದ್ದರು. ಈ ವಿಚಾರ ಫ್ಯಾನ್ಸ್‌ಗೆ ನಿರಾಸೆ ಮೂಡಿಸಿತ್ತು.

'ರಾಮಾಚಾರಿ 2.0' ಸಿನಿಮಾದಲ್ಲಿ ನಾಯಕಿಯಾಗಿ ಬೆಳ್ಳಿತೆರೆಗೆ ಪಾದಾರ್ಪಣೆ ಮಾಡಿದ್ದಾರೆ. ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ನಿರ್ದೇಶನದ ಸಿನಿಮಾದಲ್ಲಿ ರಾಜ್ ಬಿ ಶೆಟ್ಟಿಗೆ ಜೋಡಿಯಾಗಿ ನಟಿಸಿದ್ದಾರೆ. ಶಿವಣ್ಣ, ಉಪೇಂದ್ರ, ರಾಜ್ ಬಿ. ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಸದ್ಯದಲ್ಲೇ ಈ ಚಿತ್ರದ ರಿಲೀಸ್ ಬಗ್ಗೆ ಮಾಹಿತಿ ಸಿಗಲಿದೆ.

# ಮಾಜಿ ಪತಿ ಧನುಷ್‌ಗೆ ಸಂಪೂರ್ಣ ಕ್ರೆಡಿಟ್ ಕೊಟ್ಟ ಐಶ್ವರ್ಯಾ ರಜನಿಕಾಂತ್



ಐಶ್ವರ್ಯಾ ರಜನಿಕಾಂತ್ ಹಾಗೂ ಧನುಷ್ ವಿಚ್ಛೇದನ ಪಡೆದು ಬಹಳ ಸಮಯ ಕಳೆದಿದೆ. ಇವರು ಬೇರೆ ಆಗಬಹುದು ಎಂದು ಯಾರೂ ಊಹಿಸಿರಲಿಲ್ಲ. ವಿಚ್ಛೇದನದ ಬಳಿಕ ಒಬ್ಬರ ಮುಖವನ್ನು ಒಬ್ಬರು ನೋಡಿಕೊಂಡಿಲ್ಲ. ಈಗ ಅವರು ಮಾಜಿ ಪತಿ ಬಗ್ಗೆ ಮಾತನಾಡಿದ್ದಾರೆ. ಮ್ಯೂಸಿಕ್ ಕಂಪೋಸರ್ ಅನಿರುದ್ಧ್ ರವಿಚಂದರ್ ಅವರನ್ನು ಪರಿಚಯಿಸಿದ ಸಂಪೂರ್ಣ ಕ್ರೆಡಿಟ್‌ನ ಅವರು ಧನುಷ್ ಗೆ ನೀಡಿದ್ದಾರೆ. ಅನಿರುದ್ಧ್ , ಧನುಷ್ ಹಾಗೂ ಐಶ್ವರ್ಯಾ '3' ಸಿನಿಮಾದಲ್ಲಿ ಒಟ್ಟಾಗಿ ನಟಿಸಿದ್ದರು.

ಅನಿರುದ್ಧ ಅವರ ಯಶಸ್ಸಿನ ಜರ್ನಿ ಬಗ್ಗೆ ಐಶ್ವರ್ಯಾ ಮಾತನಾಡಿದ್ದಾರೆ. 'ನನಗೆ ಅವರ ಬಗ್ಗೆ ಬಹಳ ಖುಷಿ ಇದೆ. ಆದರೆ, ಅವರನ್ನು ಮ್ಯೂಸಿಕ್ ಡೈರೆಕ್ಟರ್ ಆಗಿ ಮಾಡಿದ್ದರಲ್ಲಿ ನನ್ನ ಕೊಡುಗೆ ಏನೂ ಇಲ್ಲ. ಧನುಷ್ ಅವರಿಂದ ಅನಿರುದ್ಧ್ ಸಿನಿಮಾ ಜಗತ್ತಿಗೆ ಕಾಲಿಟ್ಟರು. ಅನಿರುದ್ಧ್ ಪಾಲಕರು ಅನಿರುದ್ಧ್ ನ ಸಿಂಗಾಪೂರ್ ಗೆ ಕಳುಹಿಸಿ ಎಂಬಿಎ ಓದಿಸುವವರಿದ್ದರು. ಆದರೆ, ಇದಕ್ಕೆ ಧನುಷ್ ಅವಕಾಶ ನೀಡಲಿಲ್ಲ. ಅವರ ಕುಟುಂಬದವರಿಗೆ ಅನಿರುದ್ಧ್ ಕಲೆಯ ಬಗ್ಗೆ ಮನವರಿಕೆ ಮಾಡಿಕೊಟ್ಟರು. ಅವರಿಗೆ ಕೀಬೋರ್ಡ್ ಖರೀದಿಸಿಕೊಟ್ಟರು. ಈ ಮೂಲಕ ಅವರನ್ನು ಕಂಪೋಸರ್ ಆಗಿ ಮಾಡಿದರು. ಧನುಷ್ ಅವರ ಸಹಾಯ ಹಾಗೂ ತಮ್ಮ ಪರಿಶ್ರಮದಿಂದ ಅನಿರುದ್ಧ್ ಇಲ್ಲಿಯವರೆಗೆ ಬಂದಿದ್ದಾರೆ' ಎಂದಿದ್ದಾರೆ ಐಶ್ವರ್ಯಾ.

'ವೈ ದಿಸ್ ಕೊಲವೆರಿ' ಹಾಡು ಸೂಪರ್ ಹಿಟ್ ಆಯಿತು. ಈ ಹಾಡು ಅಂದಿನಕಾಲದಲ್ಲಿ ಸೆನ್ಸೇಷನ್ ಸೃಷ್ಟಿ ಮಾಡಿತ್ತು. ನಂತರ ಧನುಷ್ ಹಾಗೂ ಅನಿರುದ್ಧ್ ಕೆಲವು ಸಿನಿಮಾಗಳಲ್ಲಿ ಒಟ್ಟಾಗಿ ಕೆಲಸ ಮಾಡಿದರು. ನಂತರ ಏಳು ವರ್ಷ ಇಬ್ಬರೂ ಒಂದಾಗಿರಲಿಲ್ಲ. 'ತಿರುಚಿತ್ರಂಬಳಂ' ಸಿನಿಮಾದಲ್ಲಿ ಇವರು ಒಟ್ಟಾಗಿ ಕೆಲಸ ಮಾಡಿದರು. ಇದು ಸೂಪರ್ ಹಿಟ್ ಆಯಿತು.

ಅನಿರುದ್ಧ್ ಅವರು 'ಜೈಲರ್', 'ಜವಾನ್' ಅಂಥ ಸಿನಿಮಾಗಳಿಗೆ ಸಂಗೀತ ಸಂಯೋಜನೆ ಮಾಡಿದ್ದಾರೆ. ಅವರ ಖ್ಯಾತಿ ಹೆಚ್ಚಿದೆ. ಸದ್ಯ ರಜನಿಕಾಂತ್ ನಟನೆಯ 'ವೆಟ್ಟೈಯನ್', ಕಮಲ್ ಹಾಸನ್ ನಟನೆಯ 'ಇಂಡಿಯನ್ 2', ಜೂನಿಯರ್ ಎನ್ ಟಿಆರ್ ಅಭಿನಯದ 'ದೇವರ' ಮೊದಲಾದ ಬಿಗ್ ಬಜೆಟ್ ಚಿತ್ರಗಳಿಗೆ ಅವರು ಮ್ಯೂಸಿಕ್ ಕಂಪೋಸ್ ಮಾಡುತ್ತಿದ್ದಾರೆ.



# ರಮ್ಯಾ ಕಮ್‌ಬ್ಯಾಕ್

## 'ಉತ್ತರಕಾಂಡ' ಸಿನಿಮಾ ಬಗ್ಗೆ ಸಿಕ್ತು ಬಿಗ್ ಅಪ್‌ಡೇಟ್

ಸ್ಯಾಂಡಲ್‌ವುಡ್ ಮೋಹಕ ತಾರೆ ರಮ್ಯಾ ಅಭಿಮಾನಿಗಳಿಗೆ ಇದು ನಿಜಕ್ಕೂ ಸಂತಸದ ಸುದ್ದಿ. ರಮ್ಯಾ ಕಮ್‌ಬ್ಯಾಕ್ ಸಿನಿಮಾ ಉತ್ತರಕಾಂಡ ಚಿತ್ರದ ಬಗ್ಗೆ ಬಿಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ರಮ್ಯಾ ಸದ್ಯದಲ್ಲೇ ಉತ್ತರಕಾಂಡ ಸಿನಿಮಾ ಶೂಟಿಂಗ್‌ಗೆ ಹಾಜರಿ ಹಾಕ್ತಿದ್ದಾರೆ.'ಉತ್ತರಕಾಂಡ' ಸಿನಿಮಾ ಬಗ್ಗೆ ಸಿಕ್ಕಾಪಟ್ಟೆ ಕ್ರೇಜ್ ಇದೆ. ಯಾಕೆಂದ್ರೆ, ರಮ್ಯಾ ಕಮ್‌ಬ್ಯಾಕ್ ಸಿನಿಮಾ ಆಗಿರುವ ಕಾರಣ, ಚಿತ್ರದ ಮೇಲಿನ ನಿರೀಕ್ಷೆ ಡಬಲ್ ಆಗಿದೆ. ಅದಷ್ಟೇ ಅಲ್ಲ, ರಮ್ಯಾ ಜೊತೆ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್, ಡಾಲಿ ಕೂಡ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಈ ಚಿತ್ರದ ಶೂಟಿಂಗ್ ಇದೇ ಎಪ್ರಿಲ್‌ನಿಂದ ಶುರುವಾಗಲಿದೆ. ಚಿತ್ರೀಕರಣದಲ್ಲಿ ಡಾಲಿ, ರಮ್ಯಾ, ಶಿವಣ್ಣ ಮೂವರು ಭಾಗಿಯಾಗುತ್ತಿದ್ದಾರೆ.

'ರತ್ನನ್ ಪ್ರಪಂಚ' ಖ್ಯಾತಿಯ ನಿರ್ದೇಶಕ ರೋಹಿತ್ ಪದಕಿ ಈ ಚಿತ್ರಕ್ಕೆ ನಿರ್ದೇಶನ ಮಾಡುತ್ತಿದ್ದಾರೆ. ಉತ್ತರಕಾಂಡ ಸಿನಿಮಾ ಪಕ್ಕಾ ಆಕ್ಷನ್ ಸೀಕ್ವೇನ್ಸ್ ಇರುವ ಚಿತ್ರವಾಗಿದೆ. ಇನ್ನೂ ಶಿವಣ್ಣ, ರಮ್ಯಾ, ಡಾಲಿ ಮೂವರು ಒಂದೇ ಸಿನಿಮಾದಲ್ಲಿ ನಟಿಸುತ್ತಿರುವ ಕಾರಣ, ಕಥೆ ಮತ್ತು ಪಾತ್ರ ಹೇಗಿರಲಿದೆ ಎಂಬ ಕೌತುಕ ಮೂಡಿಸಿದೆ.

# ಪವಿತ್ರಾ ಗೌಡಗೆ ಟ್ಯಾಟೂ ಹಾಕಿದ 'ಬಿಗ್ ಬಾಸ್' ಖ್ಯಾತಿಯ ನೀತು

ಸ್ಯಾಂಡಲ್‌ವುಡ್ ನಟಿ ಪವಿತ್ರಾ ಗೌಡ ಇದೀಗ ಟ್ಯಾಟೂ ಹಾಕಿಸಿಕೊಂಡಿದ್ದಾರೆ. 'ಬಿಗ್ ಬಾಸ್' ಖ್ಯಾತಿಯ ನೀತು ವನಜಾಕ್ಷಿ ಬಳಿ ಟ್ಯಾಟೂ ಹಾಕಿಸಿಕೊಂಡಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ನಟಿ ಹಂಚಿಕೊಂಡಿದ್ದಾರೆ. ನಟಿ ಪವಿತ್ರಾ ಗೌಡ ತಮ್ಮ ಬಲಗೈ ಮಣಿಕಟ್ಟಿನ ಮೇಲೆ '777' ಎಂದು ಟ್ಯಾಟೂ ಹಾಕಿಸಿದ್ದಾರೆ. ನನ್ನ ಪ್ರೀತಿಯ ಪಾತ್ರರಿಗೆ ಟ್ಯಾಟೂ ಹಾಕಿದ್ದು ಎಂದು ನಟಿ ಬರೆದುಕೊಂಡಿದ್ದಾರೆ. 'ಬಿಗ್ ಬಾಸ್' ಬೆಡಗಿ ನೀತು ಅವರ ಟ್ಯಾಟೂ ಸ್ಟುಡಿಯೋಗೆ ವಿಸಿಟ್ ಮಾಡಿ ಅವರ ಕೈಯಲ್ಲಿಯೇ ಟ್ಯಾಟೂ ಹಾಕಿಸಿದ್ದಾರೆ. ಇನ್ನೂ ಪವಿತ್ರಾ ಕೈಗೆ '777' ಎಂದು ಟ್ಯಾಟೂ ಹಾಕಿಸಿಕೊಂಡಿರೋದು ಅಭಿಮಾನಿಗಳ ಗಮನ ಸೆಳೆದಿದೆ. 777 ಅಂದರೆ ಎನು? ಯಾಕೆ ಅವರು ಹಾಗೆ ಹಾಕಿಸಿಕೊಂಡಿದ್ದಾರೆ ಎಂದು ನೆಟ್ಟಿಗರ ತಲೆಗೆ ಹುಳ ಬಿಟ್ಟಂತೆ ಆಗಿದೆ. 'ಛತ್ರಿಗಳು ಸಾರ್ ಛತ್ರಿಗಳು', ಪ್ರೀತಿ ಕಿತಾಬು, ಅಗಮ್ಯ ಸಿನಿಮಾಗಳಲ್ಲಿ ಪವಿತ್ರಾ ನಟಿಸಿದ್ದಾರೆ. ಕಾಲಿವುಡ್ ಸಿನಿಮಾವೊಂದರಲ್ಲಿ ನಟಿಸಿದ್ದಾರೆ.



# ವಿರಾಟ್ ಕೊಹ್ಲಿ ಆರ್‌ಸಿಬಿ ಕ್ಯಾಂಪ್ ಸೇರುವುದು ಯಾವಾಗ?




ವಿರಾಟ್ ಕೊಹ್ಲಿ ವೈಯಕ್ತಿಕ ಕಾರಣಗಳಿಂದ ಜನವರಿಯಿಂದ ಕ್ರಿಕೆಟ್‌ನಿಂದ ವಿರಾಮ ಪಡೆದಿದ್ದಾರೆ. ಭಾರತದ ದಂತಕಥೆ ಇಂಗ್ಲೆಂಡ್ ವಿರುದ್ಧದ ಆರಂಭಿಕ ಟೆಸ್ಟ್ ಪಂದ್ಯಕ್ಕಾಗಿ ಹೈದರಾಬಾದ್‌ಗೆ ಬಂದಿಳಿದಿದ್ದರು. ಆದರೆ, ನಂತರ ಮೊದಲ ಎರಡು ಟೆಸ್ಟ್‌ಗಳಿಂದ ಹಿಂದೆ ಸರಿದಿದ್ದರು. ಬಳಿಕ ಅವರು ಸಂಪೂರ್ಣ ಸರಣಿಗೆ ಅಲಭ್ಯರಾದರು. ಆ ಬಳಿಕ ಕೊಹ್ಲಿ ಕಮ್‌ಬ್ಯಾಕ್ ಬಗ್ಗೆ ಯಾವುದೇ ಅಧಿಕೃತ ಮಾಹಿತಿಯಿಲ್ಲ.

ಐಪಿಎಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡವನ್ನು ಪ್ರತಿನಿಧಿಸುತ್ತಿರುವ ವಿರಾಟ್ ಕೊಹ್ಲಿಯ ಆಗಮನಕ್ಕೆ ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ. ಇದೀಗ ಬಂದಿರುವ ಮಾಹಿತಿಯ ಪ್ರಕಾರ ಆರ್‌ಸಿಬಿಯ ಮೊದಲ ಪಂದ್ಯದಿಂದ ಕೊಹ್ಲಿ ಲಭ್ಯವಾಗಲಿದ್ದು, ಅಭಿಮಾನಿಗಳಿಗೆ ಸಂತಸದ ಸುದ್ದಿ ಸಿಕ್ಕಿದೆ. ಮಾರ್ಚ್ 17 ರ ಮೊದಲು ವಿರಾಟ್ ಕೊಹ್ಲಿ ಆರ್‌ಸಿಬಿ ತಂಡದ ಶಿಬಿರವನ್ನು ಸೇರಿಕೊಳ್ಳಲಿದ್ದಾರೆ ಎಂದು ಇಂಡಿಯಾ ಟುಡೇ ವರದಿ ಮಾಡಿದೆ. ಅವರು ಮಾರ್ಚ್ 19 ರಂದು ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಆರ್‌ಸಿಬಿ ಅನ್ ಬಾಕ್ಸಿಂಗ್ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಇದರಲ್ಲಿ ಕೆಲ ಮಹತ್ವದ ಘೋಷಣೆ ಆಗುವ ಸಾಧ್ಯತೆ ಇದೆ.

ವಿರಾಟ್ ಕೊಹ್ಲಿ ಐಪಿಎಲ್ 2024 ರ ಮೊದಲ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಆಡುವ ಮೂಲಕ ಮೈದಾನದಕ್ಕೆ ಮರಳಲಿದ್ದಾರೆ. ಎಂಎಸ್ ಧೋನಿ ನೇತೃತ್ವದ ಸಿಎಸ್‌ಕೆ ಶುಕ್ರವಾರ (ಮಾರ್ಚ್ 22) ಎಂಎ ಚಿದಂಬರಂ ಸ್ಟೇಡಿಯಂನಲ್ಲಿ ಋತುವಿನ ಆರಂಭಿಕ ಪಂದ್ಯದಲ್ಲಿ ಆರ್‌ಸಿಬಿಯೊಂದಿಗೆ ಸೆಣಸಾಟ ನಡೆಸಲಿದೆ.

ಆರ್‌ಸಿಬಿ ಮುಂದಿನ ಪಂದ್ಯ ಮಾರ್ಚ್ 25 ರಂದು ಪಂಜಾಬ್ ಕಿಂಗ್ಸ್ ವಿರುದ್ಧ ಆಡಲಿದೆ. ಫಾಫ್ ಡು ಪ್ಲೆಸಿಸ್ ನೇತೃತ್ವದ ತಂಡವು ಮಾರ್ಚ್ 29 ರಂದು ತಮ್ಮ ಮೂರನೇ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ (ಎಪಿಖ) ಅನ್ನು ಎದುರಿಸಲಿದೆ. ಏಪ್ರಿಲ್ 2 ರಂದು ಲಕ್ನೋ ಸೂಪರ್ ಜೈಂಟ್ಸ್, ಏಪ್ರಿಲ್ 6 ರಂದು ರಾಜಸ್ಥಾನ ರಾಯಲ್ಸ್ ವಿರುದ್ಧ ಆಡಲಿದೆ. ಬಿಸಿಸಿಐ ಇದುವರೆಗೆ ಮೊದಲ 21 ಐಪಿಎಲ್ ಪಂದ್ಯಗಳ ವೇಳಾಪಟ್ಟಿಯನ್ನು ಮಾತ್ರ ಪ್ರಕಟಿಸಿದೆ.

2008ರಲ್ಲಿ ಐಪಿಎಲ್‌ನ ಮೊದಲ ಸೀಸನ್‌ನಲ್ಲಿ ಕೊನೆಯ ಸ್ಥಾನ ಪಡೆದಿದ್ದ ಬೆಂಗಳೂರು, ಮುಂದಿನ ಸೀಸನ್‌ನಲ್ಲಿ ಫೈನಲ್‌ಗೆ ತಲುಪಿ ಸೋತಿತ್ತು. 2011ರಲ್ಲಿ ಮತ್ತೊಮ್ಮೆ ತಂಡ ಫೈನಲ್‌ನಲ್ಲಿ ಸೋತಿತ್ತು. ಅಂದಿನಿಂದ, ತಂಡವು ಎಂದಿಗೂ ಸ್ಥಿರವಾಗಿಲ್ಲ. 2016 ರಲ್ಲಿ ಒಮ್ಮೆ ಮಾತ್ರ ಫೈನಲ್‌ಗೆ ತಲುಪಿದೆ. ಈವರೆಗೆ ಕಪ್ ಗೆಲ್ಲದ ಕೆಲವೇ ತಂಡಗಳಲ್ಲಿ ಆರ್‌ಸಿಬಿ ಕೂಡ ಒಂದಾಗಿದೆ.

# ಕುತೂಹಲಘಟ್ಟದಲ್ಲಿ ರಣಜಿ ಟ್ರೋಫಿ ಫೈನಲ್ ಪಂದ್ಯ



ವಾಂಖೆಡೆ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಮುಂಬೈ ಮತ್ತು ವಿದರ್ಭ ನಡುವಣ ರಣಜಿ ಟ್ರೋಫಿ ಫೈನಲ್ ಪಂದ್ಯವು ಕುತೂಹಲಘಟ್ಟದತ್ತ ಸಾಗಿದೆ. ಈಗಾಗಲೇ 4 ದಿನದಾಟಗಳು ಮುಗಿದಿದ್ದು, ಪಂದ್ಯದ ಮೇಲೆ ಉಭಯ ತಂಡಗಳು ಕೂಡ ಹಿಡಿತ ಸಾಧಿಸಿದೆ. ಹೀಗಾಗಿ ಐದನೇ ದಿನದಾಟದಲ್ಲಿ ಫಲಿತಾಂಶ ಯಾರ ಪರ ವಾಲಲಿದೆ ಎಂಬುದೇ ಈಗ ಕುತೂಹಲ.

ಈ ಪಂದ್ಯದಲ್ಲಿ ಟಾಸ್ ಗೆದ್ದ ವಿದರ್ಭ ತಂಡವು ಬೌಲಿಂಗ್ ಆಯ್ದುಕೊಂಡಿತು. ಅದರಂತೆ ಮೊದಲು ಬ್ಯಾಟ್ ಮಾಡಿದ ಮುಂಬೈ ತಂಡವು ಮೊದಲ ಇನಿಂಗ್ಸ್ ನಲ್ಲಿ 224 ರನ್ ಗಳಿಸಿ ಆಲೌಟ್ ಆಯಿತು. ಇದರ ಬೆನ್ನಲ್ಲೇ ಇನಿಂಗ್ಸ್ ಆರಂಭಿಸಿದ ವಿದರ್ಭ ತಂಡವು ಕೇವಲ 105 ರನ್ ಗಳಿಗೆ ಸರ್ವಪತನ ಕಂಡಿತು. ಮುಂಬೈ ಪರ ಶಮ್ಸ್ ಮುಲಾನಿ, ತನುಷ್ ಕೋಟ್ಯಾನ್ ಮತ್ತು ಧವಳ್ ಕುಲ್ಕರ್ಣಿ ತಲಾ 3 ವಿಕೆಟ್ ಕಬಳಿಸಿ ಮಿಂಚಿದರು.

ಇನ್ನು ದ್ವಿತೀಯ ಇನಿಂಗ್ಸ್ ನಲ್ಲಿ ಮುಂಬೈ ಪರ ಯುವ ದಾಂಡಿಗ ಮುಶೀರ್ ಖಾನ್ (136) ಶತಕ ಬಾರಿಸಿದರೆ, ಶ್ರೇಯಸ್ ಅಯ್ಯರ್ 95 ರನ್ ಗಳ ಕೊಡುಗೆ ನೀಡಿದರು. ಹಾಗೆಯೇ ಶಮ್ಸ್ ಮುಲಾನಿ 50 ರನ್ ಬಾರಿಸಿ ಮಿಂಚಿದರು. ಈ ಭರ್ಜರಿ ಬ್ಯಾಟಿಂಗ್ ನೆರವಿನಿಂದ ಮುಂಬೈ ತಂಡವು ದ್ವಿತೀಯ ಇನಿಂಗ್ಸ್ ನಲ್ಲಿ 418 ರನ್ ಕಲೆಹಾಕಿತು. ಮೊದಲ ಇನಿಂಗ್ಸ್ ಹಿನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್ ನಲ್ಲಿ 538 ರನ್ ಗಳ ಗುರಿ ಪಡೆದಿರುವ ವಿದರ್ಭ ತಂಡಕ್ಕೆ ಈ ಬಾರಿ ಕರುಣ್ ನಾಯರ್ ಆಸರೆಯಾದರು. 74 ರನ್ ಗಳನ್ನು ಬಾರಿಸುವ ಮೂಲಕ ಕರುಣ್ ನಾಲ್ಕನೇ ದಿನದಾಟದ ವೇಳೆ ವಿದರ್ಭ ತಂಡದ ಸ್ಕೋರ್ ಅನ್ನು 200 ರ ಗಡಿದಾಟಿಸಿ ವಿಕೆಟ್ ಒಪ್ಪಿಸಿದರು. ಅದರಂತೆ ನಾಲ್ಕನೇ ದಿನದಾಟದ ಅಂತ್ಯದ ವೇಳೆಗೆ ವಿದರ್ಭ ತಂಡವು 5 ವಿಕೆಟ್ ಕಳೆದುಕೊಂಡು 248 ರನ್ ಕಲೆಹಾಕಿದೆ. ಕ್ರೀಸ್ ನಲ್ಲಿ ಅಕ್ಷಯ್ ವಾಡ್ಕರ್ (56) ಹಾಗೂ ಹರ್ಷ್ ದುಬೆ (11) ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ.

ಇದೀಗ 5ನೇ ದಿನದಾಟದಲ್ಲಿ ವಿದರ್ಭ ತಂಡವು 290 ರನ್ ಕಲೆಹಾಕಬೇಕಿದೆ. ಅತ್ತ ಮುಂಬೈ ತಂಡ ಗೆಲ್ಲಲು 5 ವಿಕೆಟ್ ಗಳ ಅವಶ್ಯಕತೆಯಿದೆ. ಹೀಗಾಗಿ ಕೊನೆಯ ದಿನದಾಟದಲ್ಲಿ ವಿಜಯಲಕ್ಷ್ಮಿ ಯಾರಿಗೆ ಒಲಿಯಲಿದೆ ಎಂಬುದೇ ಈಗ ಕುತೂಹಲ.

# ಸಿಎಂ ಸ್ಥಾನದಿಂದ ಬಿಎಸ್‌ವೈ ಇಳಿಸಿದ್ದೇ ಕಟೀಲ್‌ಗೆ ಮುಳುವಾಯ್ತಾ?



**ಮಂಗಳೂರು:** ಲೋಕಸಭೆ ಚುನಾವಣೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಹಾಲಿ ಸಂಸದ ನಳಿನ್ ಕುಮಾರ್ ಕಟೀಲ್‌ಗೆ ಬಿಜೆಪಿ ಟಿಕೆಟ್ ಕೈತಪ್ಪುವ ಸಾಧ್ಯತೆ ಹೆಚ್ಚಿದೆ ಎನ್ನಲಾಗಿತ್ತು. ಅದರಂತೆ ಟಿಕೆಟ್ ಮಿಸ್ ಆಗಿದ್ದು, ಕ್ಷೇತ್ರದಲ್ಲಿ ಕ್ಯಾ.ಬ್ರಿಜೇಶ್ ಚೌಟ ಅವರಿಗೆ ಮಣೆ ಹಾಕಲಾಗಿದೆ. ಹಾಗಿದ್ದರೆ, ಹ್ಯಾಟ್ರಿಕ್ ಗೆಲುವು ಸಾಧಿಸಿದ ಕಟೀಲ್‌ಗೆ ಟಿಕೆಟ್ ಕೈತಪ್ಪಲು ಕಾರಣವೇನು? ಬಿಎಸ್ ಯಡಿಯೂರಪ್ಪ ಅವರಿಗೆ ಕೊಟ್ಟ ಭರವಸೆಯನ್ನು ಕಟೀಲ್ ಈಡೇರಿಸಿಲ್ವಾ? ಯಡಿಯೂರಪ್ಪ ಅಧಿಕಾರದಿಂದ ಕೆಳಗಿಳಿದಿದ್ದೇ ಕಟೀಲ್‌ಗೆ ಟಿಕೆಟ್ ಮಿಸ್ ಆಯ್ತಾ?

ತಳಮಟ್ಟದಿಂದ ಪಕ್ಷ ಕಟ್ಟಿ ಬೆಳೆಸಿದ್ದ ಹಾಗೂ ರಾಜ್ಯ ರಾಜಕಾರಣದಲ್ಲಿ ರಾಜಹುಲಿ ಎಂದೇ ಕರೆಯಲ್ಪಡುವ ಬಿಎಸ್ ಯಡಿಯೂರಪ್ಪ ಅವರು ಐದು ವರ್ಷ ಅಧಿಕಾರ ಪೂರ್ಣಗೊಳಿಸದೆ ಎರಡೂವರೆ ವರ್ಷಕ್ಕೇ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದಿದ್ದರು. ಯಡಿಯೂರಪ್ಪ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಸುವಲ್ಲಿ ಬಿಎಲ್ ಸಂತೋಷ್ ಅಂಡ್ ಟೀಂ ಯಶಸ್ವಿಯಾಗಿತ್ತು ಎನ್ನುವ ಮಾತುಗಳು ಹರಿದಾಡಿದ್ದವು.

ಯಡಿಯೂರಪ್ಪ ಅಧಿಕಾರಾವಧಿಯಲ್ಲಿ ರಾಜ್ಯಾಧ್ಯಕ್ಷರಾಗಿದ್ದ ಹಾಗೂ ಬಿಎಲ್ ಸಂತೋಷ್ ಬಣದಲ್ಲಿ ಗುರುತಿಸಿಕೊಂಡಿದ್ದ ದಕ್ಷಿಣ ಕನ್ನಡ ಜಿಲ್ಲೆಯ ಸಂಸದ ನಳಿನ್ ಕುಮಾರ್ ಕಟೀಲ್ ಅವರಿಗೆ ಈ ಬಾರಿ ಟಿಕೆಟ್ ಕೈತಪ್ಪಲು ಇರುವ ಕಾರಣಗಳಲ್ಲಿ ಇದು ಕೂಡ ಒಂದಾಗಿದೆ ಎಂದು ಹೇಳಲಾಗುತ್ತಿದೆ.

2018ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದ್ದರೂ ಬಹುಮತ ಪಡೆಯುವಲ್ಲಿ ವಿಫಲವಾಗಿತ್ತು. ಅದರಂತೆ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರ್ಕಾರ ರಚನೆಯಾಗಿತ್ತು. ಬಳಿಕ ಆಪರೇಷನ್ ಕಮಲದ ಮೂಲಕ ಬಿಜೆಪಿ ಅಧಿಕಾರ ಹಿಡಿದಿತ್ತು. ಅಂದು ಐದು ವರ್ಷ ಮುಖ್ಯಮಂತ್ರಿ ಸ್ಥಾನ ನಿಮಗೆ ಎಂದು ಯಡಿಯೂರಪ್ಪಗೆ ಕಟೀಲ್ ಮಾತುಕೊಟ್ಟಿದ್ದರು.

ಆದರೆ, ಎರಡೂವರೆ ವರ್ಷ ಆಗುತ್ತಿದ್ದಂತೆ ಯಡಿಯೂರಪ್ಪ ಅವರನ್ನು ಅಧಿಕಾರದಿಂದ ಕೆಳಗಿಳಿಸಲಾಗಿತ್ತು. ಇದರ ಹಿಂದೆ ನಳಿನ್ ಕುಮಾರ್ ಕಟೀಲ್ ಕೈವಾಡವೂ ಇದೆ ಎಂಬುದು ಯಡಿಯೂರಪ್ಪ ಪುತ್ರ ಬಿವೈ ವಿಜಯೇಂದ್ರ ಅವರ ಅನುಮಾನವಾಗಿದೆ.

ಅದರಂತೆ, ತಾನು ಬಿಜೆಪಿ ರಾಜ್ಯಾಧ್ಯಕ್ಷನಾದ ಮೇಲೆ ಬಿವೈ ವಿಜಯೇಂದ್ರ ಅವರು ನಳಿನ್ ಕುಮಾರ್ ಕಟೀಲ್ ಮನೆಗೆ ಭೇಟಿಕೊಟ್ಟು ಮಾತುಕತೆ ನಡೆಸಿದ್ದರು. ಬಳಿಕ ಈ ಬಾರಿ ದಕ್ಷಿಣ ಕನ್ನಡ ಜಿಲ್ಲೆಯ ಟಿಕೆಟ್ ಮತ್ತೆ ಕಟೀಲ್‌ಗೆ ಎಂದು ವಿಜಯೇಂದ್ರ ಘೋಷಣೆ ಮಾಡುತ್ತಾರೆ. ಇದೀಗ ಆಶ್ವಾಸನೆ ಈಡೇರಿಸದೆ ಕಟೀಲ್ ಬದಲು ಕ್ಯಾ. ಬ್ರಿಜೇಶ್ ಚೌಟ ಅವರಿಗೆ ಮಣೆ ಹಾಕಿದ್ದಾರೆ. ಆ ಮೂಲಕ ಕಟೀಲ್ ವಿರುದ್ಧ ವಿಜಯೇಂದ್ರ ಸೇಡು ತೀರಿಸಿಕೊಂಡಿದ್ದಾರೆ.

**ಕಟೀಲ್ ವಿರುದ್ಧ ಕ್ಷೇತ್ರದಲ್ಲಿ ಅಸಮಾಧಾನ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಿಜೆಪಿ ಕಾರ್ಯಕರ್ತರ ಆಕ್ರೋಶವೇ ನಳಿನ್ ಕುಮಾರ್ ಕಟೀಲ್ ಅವರಿಗೆ ಟಿಕೆಟ್ ಕೈತಪ್ಪಲು ಮತ್ತೊಂದು ಕಾರಣ. ಹೌದು, ಅಭಿವೃದ್ಧಿ ವಿಚಾರದಲ್ಲಿ ಆಡಳಿತ ವಿರೋಧಿ ಅಲೆ ಎದುರಿಸುತ್ತಿರುವ ಕಟೀಲ್ ವಿರುದ್ಧವೇ ಬಿಜೆಪಿ ಕಾರ್ಯಕರ್ತರೇ ತಿರುಗಿಬಿದ್ದಿದ್ದಾರೆ. ಯಾವುದೇ ಕಾರಣಕ್ಕೂ ಕಟೀಲ್‌ಗೆ ಟಿಕೆಟ್ ಕೊಡದಂತೆ ಎಚ್ಚರಿಕೆಯ ಸಂದೇಶಗಳನ್ನು ಕಾರ್ಯಕರ್ತರು ರವಾನಿಸುತ್ತಲೇ ಬಂದಿದ್ದರು. ಅಲ್ಲದೆ, ಪುತ್ತೂರು ವಿಧಾನಸಭೆ ಕ್ಷೇತ್ರದ ಬಿಜೆಪಿ ಟಿಕೆಟ್ ಅನ್ನು ಅರುಣ್ ಕುಮಾರ್ ಪುತ್ತಿಲ ಅವರಿಗೆ ತಪ್ಪಿಸುವಲ್ಲಿ ಯಶಸ್ವಿಯಾದ ನಾಯಕರಲ್ಲಿ ಕಟೀಲ್ ಕೂಡ ಸೇರಿದ್ದಾರೆ ಎಂಬ ಆರೋಪವಿದೆ. ಹೀಗಾಗಿ ಹಿಂದೂ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಕಟೀಲ್ ವಿರುದ್ಧ ಮುನಿಸಿಕೊಂಡಿದ್ದು, ಪುತ್ತಿಲ ಪರಿವಾರ ಎಂಬ ಸಂಘಟನೆ ಕಟ್ಟಿಕೊಂಡು ಕ್ಷೇತ್ರದಲ್ಲಿ ಬಿಜೆಪಿ ವಿರುದ್ಧವೇ ಸಮರ ಸಾರಿದ್ದಾರೆ.

# ಬಸವರಾಜ್ ಬೊಮ್ಮಾಯಿಗೆ ಅಮಿತ್ ಶಾ ಕರೆ




**ಬೆಂಗಳೂರು:** ಮಾಜಿ ಸಿಎಂ ಬಸವರಾಜ ಬೊಮ್ಮಾಯಿಯವರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಕರೆ ಮಾಡಿ ಶುಭ ಕೋರಿದ್ದಾರೆ. ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ಸಿಕ್ಕಿದ ಹಿನ್ನೆಲೆಯಲ್ಲಿ ಅಮಿತ್ ಶಾ ಬೊಮ್ಮಾಯಿ ಅವರಿಗೆ ದೂರವಾಣಿ ಕರೆ ಮಾಡಿದ್ದಾರೆ. ನಿಮ್ಮ ಕ್ಷೇತ್ರದ ಗೆಲುವಿನ ಜೊತೆಗೆ ಇತರ ಕ್ಷೇತ್ರಗಳ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಂಡು ಬರುವಂತೆ ಸೂಚನೆ ನೀಡಿದ್ದಾರೆ.

ಟಿಕೆಟ್ ಸಿಕ್ಕಿದ ಬೆನ್ನಲ್ಲೇ ಬಿಗ್ ಬುಲೆಟಿನ್‌ನಲ್ಲಿ ಮಾತನಾಡುತ್ತಾ ಬೊಮ್ಮಾಯಿ ಆನಂದಭಾಷ್ಪ ಸುರಿಸಿದರು. ನಮ್ಮ ಕ್ಷೇತ್ರದ ಜನತೆ ನನ್ನ ಮೇಲೆ ಇಟ್ಟ ವಿಶ್ವಾಸಕ್ಕೆ ಬೆಲೆ ಕೊಡಲು ಸಾಧ್ಯವಿಲ್ಲ. ವಿಧಾನಸಭೆ ಚುನಾವಣೆಯಲ್ಲೂ ನನ್ನ ಮೇಲೆ ಬಹಳ ಪ್ರೀತಿ ತೋರಿಸಿದ್ದರು. ಟಿಕೆಟ್ ಸಿಗುತ್ತೆ ಅಂತ ನಾನು ನಿರೀಕ್ಷೆ ಮಾಡಿರಲಿಲ್ಲ. ಆದರೆ ಹೈಕಮಾಂಡ್ ನಾಯಕರು ನನ್ನ ಮೇಲೆ ನಿರೀಕ್ಷೆ ಇಟ್ಟು ನೀವೇ ಸ್ಪರ್ಧಿಸಬೇಕು ಎಂದು ಹೇಳಿದ್ದಾರೆ ಎಂದು ತಿಳಿಸಿದರು.

ಕಳೆದ ಬಾರಿ ಶಿವಕುಮಾರ ಉದಾಸಿ ಹಾವೇರಿ ಕ್ಷೇತ್ರದ ಟಿಕೆಟ್ ಸಿಕ್ಕಿತ್ತು. ಈ ಬಾರಿ ಚುನಾವಣೆಗೆ ನಿವೃತ್ತಿ ಘೋಷಿಸಿದ ಹಿನ್ನೆಲೆಯಲ್ಲಿ ಶಿಗ್ಗಾವಿ ಶಾಸಕರಾಗಿರುವ ಬೊಮ್ಮಾಯಿ ಅವರಿಗೆ ಹೈಕಮಾಂಡ್ ಲೋಕಸಭೆಯ ಟಿಕೆಟ್ ನೀಡಿದೆ.

2019ರ ಚುನಾವಣೆಯಲ್ಲಿ ಉದಾಸಿ 1,40,882 ಮತಗಳ ಅಂತರದಿಂದ ಜಯಗಳಿಸಿದ್ದರು. ಉದಾಸಿಗೆ 6,83,660 ಮತಗಳು ಬಿದ್ದರೆ ಡಿ.ಆರ್.ಪಾಟೀಲ್ ಅವರಿಗೆ 5,42,778 ಮತಗಳು ಬಿದ್ದಿದ್ದವು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com